ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೩೮

**ಪಟ್ಟಿ – ೧೦**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೆಯ ಅಧಿವೇಶನ**
**(ಮುಂದುವರೆದ ಉಪವೇಶನ)**
**ಗುರುವಾರ, ದಿನಾಂಕ: ೨೩ನೇ ಮಾರ್ಚ್, ೨೦೧೭**

---

**ಸಮೂಹ – IV**

೧. ಮುಖ್ಯಮಂತ್ರಿಗಳು

೨. ಗೃಹ ಸಚಿವರು

೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು

೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು

---

## ಪೋಲೀಸ್ ಇಲಾಖೆಯಲ್ಲಿ ಕರ್ತವ್ಯನಿರತ ಸಿಬ್ಬಂದಿಗಳ ಆತ್ಮಹತ್ಯೆ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೧೪೭೬ (೧೨೬೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯ ಪೋಲೀಸ್ ಇಲಾಖೆಯಲ್ಲಿ ಕರ್ತವ್ಯನಿರತ ಎಷ್ಟು ಸಿಬ್ಬಂದಿಗಳು ಆತ್ಮಹತ್ಯೆಗೆ ಶರಣಾಗಿದ್ದಾರೆ ; (ಜಿಲ್ಲಾವಾರು, ವರ್ಗವಾರು ಹಾಗೂ ಹೆಸರು, ಹುದ್ದೆ ಸಹಿತ ವಿವರ ನೀಡುವುದು)

(ಆ) ಈ ಆತ್ಮಹತ್ಯೆಗೆ ಪ್ರಮುಖ ಕಾರಣವೇನು ;

(ಇ) ಪೋಲೀಸ್ ಸಿಬ್ಬಂದಿ ಆತ್ಮಹತ್ಯೆ ತಡೆ ಹಾಗೂ ಸಿಬ್ಬಂದಿಯ ಮಾನಸಿಕ ಸ್ಥೈರ್ಯ ಕಾಪಾಡುವಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಈ) ಆತ್ಮಹತ್ಯೆ ಮಾಡಿಕೊಂಡ ಬಹುತೇಕ ಪೊಲೀಸರು ತಮ್ಮ ಸಾವಿಗೆ ಮಾನಸಿಕ ಒತ್ತಡ ಹಾಗೂ ಹಿರಿಯ ಅಧಿಕಾರಿಗಳ ಕಿರುಕುಳ ಎಂಬುದರ ಬಗ್ಗೆ ಡೆತ್‌ನೋಟ್‌ನಲ್ಲಿ ಬರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಈ ನಿಟ್ಟಿನಲ್ಲಿ ತೆಗೆದುಕೊಂಡ ಕ್ರಮವೇನು ?

## ನಗರೋತ್ಥಾನ ಹಂತ–೩ರ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೧೪೭೭ (೧೩೧೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರೋತ್ಥಾನ ಹಂತ–೩ ಯೋಜನೆಯನ್ನು ರಾಜ್ಯದ ಯಾವ ಯಾವ ಮಹಾನಗರ ಪಾಲಿಕೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಮಹಾನಗರ ಪಾಲಿಕೆಗಳಿಗೆ ಬಿಡುಗಡೆಯಾದ, ಖರ್ಚಾದ ಹಾಗೂ ಅದರಲ್ಲಿ ಉಳಿದ ಹಣ ಎಷ್ಟು ; (ವಿವರ ನೀಡುವುದು)

(ಇ) ೩ನೇ ಹಂತದ ನಗರೋತ್ಥಾನ ಯೋಜನೆಯು ಎಂದು ಮುಕ್ತಾಯಗೊಳ್ಳಲಿದೆ ?

## ವಿಕಲಚೇತನ ಸರ್ಕಾರಿ ನೌಕರರಿಗೆ ಸಿಗದ ಬಡ್ತಿ ಭಾಗ್ಯ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೧೪೭೮ (೧೨೬೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಕಲಚೇತನ ನೌಕರರಿಗೆ ಹಲವಾರು ವರ್ಷಗಳಿಂದ ಬಡ್ತಿ ಭಾಗ್ಯ ಲಭಿಸದೆ ಇರುವುದು ನಿಜವೇ ;

(ಆ) ಗ್ರೂಪ್ 'ಡಿ' ಮತ್ತು 'ಸಿ' ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಕಲಚೇತನ ಸರ್ಕಾರಿ ನೌಕರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ಇಲಾಖಾವಾರು ವಿವರ ನೀಡುವುದು)

(ಇ) ವಿಕಲಚೇತನ ಸರ್ಕಾರಿ ನೌಕರರಿಗೆ ಶೇ. ೩%ರಷ್ಟು ವಿಶೇಷ ಬಡ್ತಿ ಮೀಸಲಾತಿ ಜಾರಿಗೊಳಿಸುವ ಸಂಬಂಧ ೨೦೧೩ರಲ್ಲಿ ಸುಪ್ರೀಂ ಕೋರ್ಟ್ ತೀರ್ಪು ನೀಡಿದ್ದರೂ ಸರ್ಕಾರ ಇದುವರೆಗೂ ಪಾಲನೆ ಮಾಡದೆ ಇರಲು ಕಾರಣವೇನು ;

(ಈ) ಮುಂಬಡ್ತಿ ವಿಷಯದಲ್ಲಿ ಹಾಗೂ ವಿಕಲಚೇತನರ ವಿಚಾರದಲ್ಲಿ ಸರ್ಕಾರ ಎಲ್ಲಾದರಲ್ಲೂ ನಿರ್ಲಕ್ಷ್ಯ ತಾಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ವಿಜಯಪುರ ಮಹಾನಗರ ಪಾಲಿಕೆಯ ಪ್ರಧಾನ ಮಂತ್ರಿ ಹೌಸಿಂಗ್ ಫಾರ್ ಆಲ್ ಯೋಜನೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೪೭೭ (೧೨೭೫) ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಮಹಾನಗರ ಪಾಲಿಕೆಯಡಿ ಪ್ರಧಾನ ಮಂತ್ರಿ ಹೌಸಿಂಗ್ ಫಾರ್ ಆಲ್ ಯೋಜನೆಯಡಿ ಫಲಾನುಭವಿಗಳ ಆಯ್ಕೆ ನಡೆದಿದೆಯೇ ಅಥವಾ ನಡೆಯುತ್ತಿದೆಯೇ ;

(ಆ) ಈ ಯೋಜನೆಯಡಿ ಫಲಾನುಭವಿಗಳ ಆಯ್ಕೆಗೆ ಇರುವಂತಹ ಮಾನದಂಡಗಳು ಹಾಗೂ ನಿಯಮಾವಳಿಗಳು ಏನು ; ಎಷ್ಟು ಜನ ಫಲಾನುಭವಿಗಳ ಆಯ್ಕೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಈ ಫಲಾನುಭವಿಗಳ ಆಯ್ಕೆಗೆ ಮಹಾನಗರ ಪಾಲಿಕೆ ಎಷ್ಟು ಸಭೆಗಳನ್ನು ನಡೆಸಿದೆ ; ಹಾಗೂ ಜಾಹೀರಾತು ಪ್ರತಿ ನೀಡುವುದು ;

(ಈ) ಸದರಿ ಸಭೆಗೆ ಯಾರು ಯಾರನ್ನು ಆಹ್ವಾನಿಸಲಾಗಿತ್ತು ಅವರನ್ನು ಆಹ್ವಾನಿಸಲಾಗಿರುವ ಕುರಿತು ದಾಖಲೆ, ಸಭೆಯಲ್ಲಿ ಹಾಜರಿರುವ ದಾಖಲೆ, ಸಭೆಯ ನಡವಳಿ ಪ್ರತಿ, ಸಭೆಯಲ್ಲಿ ಆಯ್ಕೆ ಮಾಡಿರುವಂತಹ ಕರಡು ಪಟ್ಟಿ, ಈ ಪ್ರಕ್ರಿಯೆ ಸರಿಯಾಗಿ ನಡೆಸದೆ ಇರುವ ಕಾರಣಕ್ಕೆ ನಿಲ್ಲಿಸಲು ಬಂದಿರುವ ಬರೆದ ಪತ್ರಗಳು ; ಈ ಎಲ್ಲದರ ಸಂಪೂರ್ಣ ಮಾಹಿತಿ ಹಾಗೂ ವಿವರಣೆ ನೀಡುವುದು ?

## ಮಂಡ್ಯದ ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೮೦ (೧೩೩೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಮತ್ತು ಪಾಂಡವಪುರದಲ್ಲಿನ ಸಕ್ಕರೆ ಕಾರ್ಖಾನೆಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವಾಗ ಸ್ಥಗಿತಗೊಂಡಿದೆ ; ಸ್ಥಗಿತಗೊಳ್ಳಲು ಕಾರಣವೇನು ; (ವಿವರ ನೀಡುವುದು)

(ಇ) ಇದರಿಂದಾಗಿ ಇಲ್ಲಿನ ಕಬ್ಬು ಬೆಳೆಗಾರರಿಗೆ ತೀವ್ರ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಬ್ಬು ಬೆಳೆಗಾರರಿಗಾದ ನಷ್ಟವೇನು ; (ವಿವರ ನೀಡುವುದು)

(ಈ) ಈ ಸಕ್ಕರೆ ಕಾರ್ಖಾನೆಗಳು ಸ್ಥಗಿತದಿಂದಾಗಿ ಕಬ್ಬು ಬೆಳೆಗಾರರಿಗಾದ ನಷ್ಟಕ್ಕೆ ಹೊಣೆಗಾರರು ಯಾರು ; ಇವರ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಮಂಡ್ಯ ಮತ್ತು ಪಾಂಡವಪುರದಲ್ಲಿ ಸ್ಥಗಿತಗೊಂಡ ಸಕ್ಕರೆ ಕಾರ್ಖಾನೆಗಳನ್ನು ಪುನಃ ಯಾವಾಗ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ರಾಜ್ಯದಲ್ಲಿನ ಕೊಲೆ, ಸುಲಿಗೆ ಅತ್ಯಾಚಾರದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೮೧ (೧೩೩೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ನಡೆದ ಕೊಲೆ, ಸುಲಿಗೆ, ದರೋಡೆ, ಅತ್ಯಾಚಾರ, ಸರಗಳ್ಳತನ ಮತ್ತು ಮಕ್ಕಳ ಅಪಹರಣ ಪ್ರಕರಣಗಳೆಷ್ಟು ; (ವಿವರ ನೀಡುವುದು)

(ಆ) ಈ ಪ್ರಕರಣಗಳಲ್ಲಿ ಎಷ್ಟು ಅಪರಾಧಿಗಳು ಪತ್ತೆಯಾಗಿದ್ದಾರೆ ; ಪತ್ತೆಯಾಗದ ಪ್ರಕರಣಗಳೆಷ್ಟು ; ಎಷ್ಟು ಅಪರಾಧಿಗಳನ್ನು ಶಿಕ್ಷೆಗೆ ಒಳಪಡಿಸಲಾಗಿದೆ ; (ವಿವರ ನೀಡುವುದು)

(ಇ) ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಿ ಕೊಲೆ ಮತ್ತು ಮಾರಣಾಂತಿಕ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮಹಿಳೆಯರ ಮೇಲೆ ಹಲ್ಲೆ ಮತ್ತು ಸರಗಳ್ಳತನ ಪ್ರಕರಣಗಳನ್ನು ನಿಯಂತ್ರಣಕ್ಕೆ ತರಲು ಪೊಲೀಸ್ ಇಲಾಖೆಯು ಎಡವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಅಪರಾಧ ನಿಯಂತ್ರಣ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳಾವುವು ? (ವಿವರ ನೀಡುವುದು)

## ಸರ್ಕಾರಿ ಇಲಾಖೆಗಳಲ್ಲಿ ಕಡತಗಳು ಬಾಕಿ ಇರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೮೭ (೧೩೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಸಾವಿರಾರು ಕಡತಗಳು ಬಾಕಿ ಇರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಇಲಾಖೆಗಳಲ್ಲಿ ಎಷ್ಟು ಕಡತಗಳು ಬಾಕಿ ಇವೆ ; (ಇಲಾಖಾವಾರು ವಿವರ ನೀಡುವುದು)

(ಇ) ಸರ್ಕಾರದ ಇಲಾಖಾ ಹಂತದಲ್ಲಿ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಕಡತಗಳು ಬಾಕಿ ಇರಲು ಕಾರಣಗಳೇನು ; (ವಿವರ ನೀಡುವುದು)

(ಈ) ಗರಿಷ್ಠ ಪ್ರಮಾಣದ ಕಡತಗಳ ಬಾಕಿಯಿಂದಾಗಿ ಸಾರ್ವಜನಿಕರ ಅಭಿವೃದ್ಧಿ ಕಾರ್ಯಗಳಿಗೆ ವಿಪರೀತ ತೊಂದರೆಯಾಗಿರುವುದು ನಿಜವಲ್ಲವೇ ;

(ಉ) ಈ ಕಡತಗಳಲ್ಲಿ ಇತ್ಯರ್ಥ ಮಾಡಲು ಸಾಧ್ಯವಿಲ್ಲದ ಕಡತಗಳ ಸಂಖ್ಯೆ ಎಷ್ಟು ;

(ಊ) ಈ ಕಡತಗಳ ತ್ವರಿತ ವಿಲೇವಾರಿಗೆ ಅಡ್ಡಿಪಡಿಸುತ್ತಿರುವ ಅಧಿಕಾರಿ/ ನೌಕರರುಗಳ ವಿರುದ್ಧ ಸರ್ಕಾರ ಶಿಸ್ತು ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ಅವ್ಯವಹಾರಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೮೩ (೧೩೩೧) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕೋಟಿಗಟ್ಟಲೆ ಅವ್ಯವಹಾರಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿವರ ನೀಡುವುದು ;

(ಆ) ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಯಾವ ಯಾವ ಬೃಹತ್ ಕಾಮಗಾರಿಗಳಲ್ಲಿ ಅವ್ಯವಹಾರ ನಡೆದಿದೆ ; (ವಿವರ ನೀಡುವುದು)

(ಇ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಸುಳ್ಳು ದಾಖಲೆ ಸೃಷ್ಠಿಸಿ, ಹಣ ದುರುಪಯೋಗ, ವಂಚನೆ ಪ್ರಕರಣಗಳು ನಡೆದಿರುವುದು ನಿಜವೇ ; (ಹಾಗಿದ್ದಲ್ಲಿ, ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಹಣ ಲೂಟಿ ಮಾಡಿದ ತಪ್ಪಿತಸ್ಥ ಅಧಿಕಾರಿಗಳು ಯಾರ್‍ಯಾರು ? (ಇವರುಗಳ ಹುದ್ದೆ, ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಉ) ಈ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಶಿಸ್ತಿನ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಹುತಾತ್ಮರಾದ ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೧೪೮೪ (೧೩೩೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕದ ಆರು ಜಿಲ್ಲೆಗಳು ಹಾಗೂ ಹರಪನಹಳ್ಳಿಯಲ್ಲಿ ಪೊಲೀಸ್ ಇಲಾಖೆಯಲ್ಲಿ ಸೇವೆಯಲ್ಲಿರುವಾಗಲೇ ಕಳೆದ ೦೫ ವರ್ಷಗಳಲ್ಲಿ ಹುತಾತ್ಮರಾದ/ವೀರ ಮರಣ ಹೊಂದಿರುವ ಸಿಬ್ಬಂದಿ/ಅಧಿಕಾರಿಗಳ ಸಂಖ್ಯೆ ಎಷ್ಟು ; (ವರ್ಷಾವಾರು, ಹುದ್ದೆಗಳವಾರು ಸಂಪೂರ್ಣ ವಿವರ ನೀಡುವುದು)

(ಆ) ಸೇವೆಯಲ್ಲಿರುವಾಗಲೇ ಹುತಾತ್ಮರಾದ/ವೀರ ಮರಣ ಹೊಂದಿದ ಸಿಬ್ಬಂದಿ/ ಅಧಿಕಾರಿಗಳ ಕುಟುಂಬಗಳಿಗೆ ಸರ್ಕಾರದಿಂದ/ಇಲಾಖೆಯಿಂದ ಇರುವ ಸೌಲಭ್ಯಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಇಲ್ಲಿಯವರೆಗೆ ಸರ್ಕಾರದಿಂದ/ಇಲಾಖೆಯಿಂದ ಎಷ್ಟು ಕುಟುಂಬಗಳಿಗೆ ಸೌಲಭ್ಯಗಳನ್ನು ನೀಡಲಾಗಿದೆ ಹಾಗೂ ಇನ್ನೂ ಎಷ್ಟು ಕುಟುಂಬಗಳಿಗೆ ಸೌಲಭ್ಯ ನೀಡುವುದು ಬಾಕಿ ಇದೆ ? (ವಿವರ ನೀಡುವುದು)

## ಕಲಬುರ್ಗಿಯ ನಂದೂರ ಕೆಸರಟಗಿ ಕೈಗಾರಿಕಾ ಪ್ರದೇಶದ ತೈಲ ಕಂಪನಿಗಳಲ್ಲಿ ಆದಂತಹ ಕಳ್ಳತನದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೧೪೮೫ (೧೩೩೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರ್ಗಿಯ ನಂದೂರ ಕೆಸರಟಗಿ ಕೈಗಾರಿಕಾ ಪ್ರದೇಶದಲ್ಲಿ ಇರುವ ತೈಲ ಕಂಪನಿಗಳಾದ ಇಂಡಿಯನ್ ಆಯಿಲ್ ಕಂಪನಿ (INDIAN OIL

CORPORATION) ಹಾಗೂ ಭಾರತ್ ಪೆಟ್ರೋಲಿಯಂ ಕಂಪನಿ (BHARATH PETROLEUM CORPORATION) ಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಆದಂತಹ ಕಳ್ಳತನದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಹಾಗೂ ಯಾವ ಪೊಲೀಸ್ ಠಾಣೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಮೇಲ್ಕಂಡ ಪ್ರಕರಣಗಳಲ್ಲಿ ಆದ ತನಿಖೆಯ ಪ್ರಗತಿ ಏನು ; (ವಿವರ ನೀಡುವುದು)

(ಇ) ಮೇಲ್ಕಂಡ ಪ್ರಕರಣಗಳಲ್ಲಿ ತಪ್ಪಿತಸ್ಥರು ಯಾರು ; ಹಾಗೂ ತಪ್ಪಿತಸ್ಥರ ಮೇಲೆ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಟೆಂಡರ್ ಪ್ರಕ್ರಿಯೆಯ ಪಾರದರ್ಶಕತೆ ಕಾಯ್ದೆ (೪ಜಿ) ಅಡಿಯಲ್ಲಿ ಕೆಲವು ಸಂಸ್ಥೆಗಳಿಗೆ ವಿನಾಯಿತಿ ನೀಡುತ್ತಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೧೪೮೬ (೧೩೩೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಟೆಂಡರ್ ಪ್ರಕ್ರಿಯೆಯ ಪಾರದರ್ಶಕತೆ ಕಾಯ್ದೆ (೪ಜಿ) ಅಡಿಯಲ್ಲಿ ಕೆಲವು ಸಂಸ್ಥೆಗಳಿಗೆ ವಿನಾಯಿತಿ ನೀಡಲಾಗಿದೆಯೇ ; (ಇದ್ದರೆ, ಸಂಸ್ಥೆವಾರು, ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ವಿನಾಯಿತಿಗೆ ಇರುವ ನಿಯಮ ಮತ್ತು ಮಾನದಂಡಗಳೇನು ; ಇಲಾಖೆಯ ಆದೇಶಗಳ ಪ್ರತಿಗಳೊಂದಿಗೆ ವಿವರ ನೀಡುವುದು ;

(ಇ) ವಿನಾಯಿತಿ ಪಡೆದ ಸಂಸ್ಥೆಗಳಿಂದ ನಿಯಮಗಳ ಉಲ್ಲಂಘನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಸಂಸ್ಥೆವಾರು, ಕಾಮಗಾರಿವಾರು ವಿವರ ನೀಡುವುದು)

# ರಾಜ್ಯ ಸರ್ಕಾರಿ ನೌಕರರಿಗೆ ೭ನೇ ವೇತನ ಆಯೋಗದಡಿಯಲ್ಲಿ ವೇತನ ಮತ್ತು ಭತ್ಯೆಯನ್ನು ಪರಿಷ್ಕರಣೆ (ಹೆಚ್ಚಿಸುವ) ಮಾಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೧೪೮೭ (೧೩೩೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಸೇವೆಯಲ್ಲಿರುವಂತಹ ನೌಕರರಿಗೆ ಏಳನೇ ವೇತನ ಆಯೋಗದಡಿಯಲ್ಲಿ ವೇತನ ಮತ್ತು ಭತ್ಯೆಯಲ್ಲಿ ಪರಿಷ್ಕರಣೆ ಮಾಡಿ ಇತ್ತೀಚೆಗೆ ನಡೆದ ಕೇಂದ್ರ ಸರ್ಕಾರದ ಸಚಿವ ಸಂಪುಟದ ಸಭೆಯಲ್ಲಿ ಘೋಷಣೆ ಮಾಡಿ, ಜಾರಿಗೆ ತಂದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ರಾಜ್ಯ ಸರ್ಕಾರದ ಸೇವೆಯಲ್ಲಿರುವಂತಹ ಸರ್ಕಾರಿ ನೌಕರರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ಆಧಾರದ ಅಡಿಯಲ್ಲಿ ವೇತನ ಮತ್ತು ಭತ್ಯೆಯಲ್ಲಿ ಕೇಂದ್ರ ಸರ್ಕಾರದ ನೌಕರರ ಸರಿಸಮಾನವಾದಂತಹ ವೇತನ ಹಾಗೂ ಭತ್ಯೆಗಳನ್ನು ನೀಡಲು ಸರ್ಕಾರ ಮುಂದಾಗುವುದೇ ; (ವಿವರ ನೀಡುವುದು)

(ಇ) ರಾಜ್ಯ ಸರ್ಕಾರಿ ನೌಕರರು ಪಡೆಯುತ್ತಿರುವ ಮೂಲ ವೇತನ ಹಾಗೂ ಭತ್ಯೆಗಳು ಕೇಂದ್ರ ಸರ್ಕಾರದ ನೌಕರರ ಹಾಗೂ ನೆರೆ ರಾಜ್ಯಗಳಿಗೆ ಹೋಲಿಸಿದ್ದಲ್ಲಿ, ಕಡಿಮೆ ವೇತನ ಹಾಗೂ ಭತ್ಯೆಗಳನ್ನು ಪಡೆಯುತ್ತಿರುವುದು ನಿಜವೇ ; ಇದ್ದರೆ, ಈ ಎಲ್ಲಾ ಹೋಲಿಕೆಗಳ ಮಾಹಿತಿ ನೀಡುವುದು ;

(ಈ) ಈ ತಾರತಮ್ಯ ಉಂಟಾಗಲು ಕಾರಣವೇನು ; ಇದನ್ನು ಸರಿಪಡಿಸಿ ನ್ಯಾಯಯುತವಾದಂತಹ ಮೂಲ ವೇತನ ಹಾಗೂ ಭತ್ಯೆಗಳನ್ನು ಪರಿಷ್ಕರಣೆ ಮಾಡಲು ಸರ್ಕಾರ ಮುಂದಾಗುವುದೇ ; ಹಾಗಿದ್ದರೆ, ಯಾವ ಕಾಲಮಿತಿಯೊಳಗೆ ಸರಿಪಡಿಸಲಾಗುವುದು ? (ವಿವರ ನೀಡುವುದು)

# ಕರ್ನಾಟಕ ನಾಗರೀಕ ಸೇವಾ ನಿಯಮಗಳನ್ವಯ ಸರ್ಕಾರಿ ಸಿಬ್ಬಂದಿಗಳ ಆರೋಪ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೪೮೮ (೧೩೫೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ ಕರ್ನಾಟಕ ಸರ್ಕಾರದ ಸುತ್ತೋಲೆ ಸಿ.ಆ.ಸು.ಇ. ೧೮ ಸೇ.ವಿ.ಇ. ೨೦೦೧, ದಿನಾಂಕ: ೧೪.೯.೨೦೦೧ರ ಸರ್ಕಾರಿ ನೌಕರರ ಮೇಲಿನ ಆರೋಪ ಸಾಬೀತಾದ ಮೇಲೆ ವಿಧಿಸಬಹುದಾದ ದಂಡನೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಐದು ವರ್ಷಗಳಿಂದ ಈ ನಿಯಮದಡಿ ಇಲ್ಲಿಯವರೆಗೆ ಸರ್ಕಾರ ಎಷ್ಟು ಜನರ ಮೇಲೆ ಕ್ರಮ ಕೈಗೊಂಡಿದೆ ; ಹಾಗೂ ಅವರಿಗೆ ವಿಧಿಸಿದ ಶಿಕ್ಷೆಗಳೇನು ; (ವಿವರ ನೀಡುವುದು)

(ಇ) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು ಮತ್ತು ಇಲಾಖಾ ಮುಖ್ಯಸ್ಥರು ಈ ಸೂಚನೆಯನ್ನು ಪಾಲಿಸಿದ್ದಾರೆಯೇ ; ಪಾಲಿಸಿದ್ದರೆ, ಸರ್ಕಾರ ಅವರ ಮೇಲೆ ಏನು ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

# ಬಡ್ತಿ ಮೀಸಲು ನಿಯಮ ಸರ್ಕಾರದಿಂದಲೇ ಉಲ್ಲಂಘನೆ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೪೮೯ (೧೩೫೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸುಪ್ರೀಂ ಕೋರ್ಟ್ ನಿರ್ದೇಶನದಂತೆ ರಾಜ್ಯದಲ್ಲಿ ಎಷ್ಟು ಜನ ಅಧಿಕಾರಿಗಳು ಮೀಸಲು ಬಡ್ತಿ ಕಳೆದುಕೊಳ್ಳುವ ಸಂದರ್ಭ ಎದುರಾಗಿದೆ ; (ವೃಂದವಾರು ಮಾಹಿತಿ ಒದಗಿಸುವುದು)

(ಆ) ಮೀಸಲು ಬಡ್ತಿಯ ವಿಚಾರದಲ್ಲಿ ಹಿರಿಯ ಅಧಿಕಾರಿಗಳು ನಿಯಮಗಳನ್ನು ಪಾಲಿಸಿಲ್ಲ ಎಂಬುದು ನಿಜವೆ ; ನಿಜವಿದ್ದಲ್ಲಿ, ಕಾರಣಗಳೇನು ;

(ಇ) ಜ್ಯೇಷ್ಠತೆ ಇದ್ದರೂ, ಕಳೆದ ೨ ವರ್ಷಗಳಲ್ಲಿ ಸಾವಿರಾರು ಅಧಿಕಾರಿ ವೃಂದದವರು ಸರ್ಕಾರ ಮಾಡಿದ ತಪ್ಪಿನಿಂದ ಬಡ್ತಿ ಇಲ್ಲದೆ ನಿವೃತ್ತಿ ಹೊಂದಿದ ಅಧಿಕಾರಿಗಳ ಸಂಖ್ಯೆ ಎಷ್ಟು ; ಹಾಗೂ ಸದರಿ ವಿಷಯದಲ್ಲಿ ಯಾರೋ ಮಾಡಿದ ತಪ್ಪಿಗೆ ಬಡ್ತಿಯಿಂದ ವಂಚಿತರಾದವರಿಗೆ ಸರ್ಕಾರ ಸರಿಪಡಿಸಲು ಕ್ರಮ ಕೈಗೊಳ್ಳುವುದೇ ;

(ಈ) ಬಡ್ತಿ ಮೀಸಲು ನೀಡುವಾಗ ಕೋರ್ಟ್ ಆದೇಶ ಪಾಲನೆ ಮಾಡದೇ ಇದ್ದುದ್ದರಿಂದ ಸಾಮಾನ್ಯ ವರ್ಗದ ಅಧಿಕಾರಿಗಳಿಗೆ ಅಲ್ಲದೇ ಹಿಂದುಳಿದ ವರ್ಗದವರಿಗೂ ಅನ್ಯಾಯವಾದದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ಸಂಸತ್ತಿನಲ್ಲಿ ೨೦೦೧ರಲ್ಲಿ ಕಾನೂನು ತಿದ್ದುಪಡಿ ತಂದ ನಂತರ ಬಡ್ತಿಯಲ್ಲಿ ಮೀಸಲು ಕೊಡುವ ವಿಚಾರದಲ್ಲಿಯ ಮುಖ್ಯಾಂಶಗಳೇನು ; ಇದರಲ್ಲಿ ನಿಯಮ ಉಲ್ಲಂಘಿಸಿದ್ದಕ್ಕೆ ಕಾರಣಗಳೇನು ; ಕಾರಣರಾದವರ ಮೇಲೆ ಕ್ರಮ ಕೈಗೊಳ್ಳಲಾಗುವುದೆ ; ಅನ್ಯಾಯವಾದವರಿಗೆ ನ್ಯಾಯ ಒದಗಿಸಲು ಸರ್ಕಾರ ಸಿದ್ದವಿದೆಯೇ ?

## ವಸತಿ ಸಂಕೀರ್ಣಗಳಲ್ಲಿ ಎಸ್‌ಟಿಪಿ ಘಟಕ ಕಡ್ಡಾಯಗೊಳಿಸಿರುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ)–**

೧೪೯೦ (೧೨೩೭) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ವಸತಿ ಸಂಕೀರ್ಣಗಳು/ಗೃಹೇತರ ಕಟ್ಟಡಗಳಿಗೆ ಕಿರು ತ್ಯಾಜ್ಯ ನೀರು ಸಂಸ್ಕರಣಾ ಘಟಕ (ಎಸ್‌ಟಿಪಿ) ಹಾಗೂ ಡ್ಯೂಯಲ್ ಪೈಪ್ ಅಳವಡಿಕೆ ಕಡ್ಡಾಯಗೊಳಿಸಿರುವುದು ನಿಜವೇ ;

(ಆ) ನಿಜವಿದ್ದಲ್ಲಿ, ಎಷ್ಟು ಮನೆಗಳನ್ನು ಒಳಗೊಂಡಿರುವ ವಸತಿ ಸಮುಚ್ಚಯ ಮತ್ತು ಎಷ್ಟು ವಿಸ್ತೀರ್ಣದ ನಿವೇಶನಗಳಲ್ಲಿ ನಿರ್ಮಿಸಿರುವ ಕಟ್ಟಡಗಳಿಗೆ ನಿವೇಶನದ ಆವರಣದಲ್ಲಿ ಕಿರು ತ್ಯಾಜ್ಯ ನೀರು ಸಂಸ್ಕರಣಾ ಘಟಕವನ್ನು ಅಳವಡಿಸಲು ನಿರ್ದೇಶಿಸಲಾಗಿದೆ ;

(ಇ) ಎಷ್ಟು ಸಮಯಾವಕಾಶದಲ್ಲಿ ಕಿರು ತ್ಯಾಜ್ಯ ನೀರು ಸಂಸ್ಕರಣಾ ಘಟಕವನ್ನು ಅಳವಡಿಸಲು ನಿರ್ದೇಶಿಸಲಾಗಿದೆ ;

(ಈ) ಈಗಾಗಲೇ ಕಟ್ಟಿರುವ ಕಟ್ಟಡಗಳಲ್ಲಿ ಕಿರು ತ್ಯಾಜ್ಯ ನೀರು ಸಂಸ್ಕರಣಾ ಘಟಕವನ್ನು ಅಳವಡಿಸದೆ ಇದ್ದಾಗ ದಂಡವನ್ನು ವಿಧಿಸಲಾಗುತ್ತಿದೆಯೇ ; ದಂಡವನ್ನು ವಿಧಿಸಲಾಗುತ್ತಿದ್ದರೆ, ದಂಡ ವಿಧಿಸುವುದಕ್ಕೆ ಮಾನದಂಡವೇನು ?

## ಕಾಕ್ಸ್‌ಟೌನ್‌ನಲ್ಲಿರುವ ಜಿಮ್‌ಖಾನ ಕ್ಲಬ್‌ನ ಜಾಗವನ್ನು ಅತಿಕ್ರಮಿಸಿಕೊಂಡಿರುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೪೯೧ (೧೩೫೬) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಹಳೆಯ ವಾರ್ಡ್ ನಂ. ೮೫ (ಹೊಸವಾರ್ಡ್ ನಂ. ೭೯) ಕಾಕ್ಸ್‌ಟೌನ್, ಮಿಲ್ಲರ್ಸ್ ರಸ್ತೆಯಲ್ಲಿರುವ ಸಿ.ಟಿ. ಎಸ್ ನಂ. ೧೩೭೮ರಲ್ಲಿ ಎಷ್ಟು ಜಾಗವನ್ನು ಜಿಮ್‌ಖಾನ ಸಂಸ್ಥೆಗೆ ಗುತ್ತಿಗೆ ನೀಡಲಾಗಿದೆ ;

(ಆ) ಈ ಗುತ್ತಿಗೆ ಆದೇಶವನ್ನು ಸರ್ಕಾರ ಯಾವಾಗ ಹೊರಡಿಸಿದೆ ; ಈ ಸರ್ಕಾರಿ ಆದೇಶದನ್ವಯ ಜಿಮ್‌ಖಾನ ಸಂಸ್ಥೆಗೆ ಎಷ್ಟು ಜಾಗವನ್ನು ಗುತ್ತಿಗೆಗೆ ನೀಡಲಾಗಿದೆ ;

(ಇ) ಜಿಮ್‌ಖಾನ ಸಂಸ್ಥೆಯು ಹೆಚ್ಚುವರಿಯಾಗಿ ૩ ಎಕರೆ ೧૩ ಗುಂಟೆ ಜಾಗವನ್ನು ಅತಿಕ್ರಮಿಸಿಕೊಂಡಿರುವುದು ನಿಜವೇ ;

(ಈ) ಈ ಕುರಿತು ಉಪ ಲೋಕಾಯುಕ್ತರು ತನಿಖೆ ನಡೆಸಿ ದಿನಾಂಕ: ૩೦.೯.೨೦೧೫ರಂದು ನೀಡಿರುವ ವರದಿ ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಉ) ಈ ಕುರಿತು ವಿಧಾನ ಮಂಡಲದಲ್ಲಿ ಚರ್ಚೆಯಾಗಿ, ಅತಿಕ್ರಮಿಸಿದ ಜಮೀನನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸುಪರ್ದಿಗೆ ತೆಗೆದುಕೊಳ್ಳಲು ನಿರ್ಣಯಿಸಲಾಗಿದೆಯೇ ;

(ಊ) ಅತಿಕ್ರಮಿಸಲಾಗಿರುವ ಜಮೀನನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮರಳಿ ಪಡೆಯಲು ಯಾವ ಕ್ರಮ ಕೈಗೊಳ್ಳಲಾಗುವುದು ?

## ಜಿಲ್ಲಾಧಿಕಾರಿಗಳ ಕಛೇರಿಯಿಂದ ಆಯುಧ ಲೈಸನ್ಸ್ ನೀಡಲು ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೯೨ (೧೨೭೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಿಲ್ಲಾಧಿಕಾರಿಗಳ ಕಛೇರಿಯಿಂದ ಆಯುಧ ಲೈಸನ್ಸ್ ಪಡೆಯಲು ವಿಳಂಬ ನೀತಿಯನ್ನು ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿಳಂಬ ನೀತಿಯನ್ನು ಅನುಸರಿಸಲು ಕಾರಣವೇನು ; ತ್ವರಿತಗತಿಯಲ್ಲಿ ಲೈಸನ್ಸ್ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಆಯುಧ ಲೈಸನ್ಸ್ ಪಡೆಯಲು ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು ; ನೀಡಿರುವ ಲೈಸನ್ಸ್ ಸಂಖ್ಯೆ ಎಷ್ಟು ; ಇವುಗಳ ವಿಲೇವಾರಿಗೆ ತೆಗೆದುಕೊಂಡ ದಿನಗಳೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಕರ್ನಾಟಕ ಲೋಕಾಯುಕ್ತದಲ್ಲಿ ಬಾಕಿ ಇರುವ ಪ್ರಕರಣಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೯೩ (೧೨೭೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಲೋಕಾಯುಕ್ತದಲ್ಲಿ ಬಾಕಿ ಇರುವ ಪ್ರಕರಣಗಳು ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಪ್ರತಿವರ್ಷ ಎಷ್ಟು ಪ್ರಕರಣಗಳ ವಿಲೇವಾರಿ ಮಾಡಲಾಗಿದೆ ; ಉಳಿದ ಪ್ರಕರಣಗಳ ವಿಲೇವಾರಿಗೆ ಇನ್ನೂ ಎಷ್ಟು ಸಮಯ ಬೇಕಾಗುವುದು ;

(ಇ) ಸದ್ಯ ಲೋಕಾಯುಕ್ತ ಕಛೇರಿಯಲ್ಲಿ ಯಾವ ಯಾವ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; (ವಿವರ ನೀಡುವುದು)

(ಈ) ಹೊಸದಾಗಿ ರಚನೆಯಾದ ಎಸಿಬಿ ಸಂಸ್ಥೆಯಿಂದ ಮತ್ತು ಲೋಕಾಯುಕ್ತ ಸಂಸ್ಥೆಯಿಂದ ಈವರೆಗೆ ಸರ್ಕಾರಕ್ಕೆ ಮತ್ತು ಸಾರ್ವಜನಿಕರಿಗೆ ಆದ ಲಾಭ ಏನು ? (ವಿವರ ನೀಡುವುದು)

## ಸರ್ಕಾರಿ ಜಾಗವನ್ನು ಖಾಸಗಿಯವರಿಗೆ ಮಾರಾಟ ಮಾಡಿರುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೯೪ (೧೨೭೮+೧೨೭೯) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದಿಂದ ಕಳೆದ ೧೦ ವರ್ಷಗಳಿಂದ ಇಲ್ಲಿಯವರೆಗೆ ವಿವಿಧ ಬಡಾವಣೆಗಳಲ್ಲಿ ಸಾರ್ವಜನಿಕರ ಉಪಯೋಗಕ್ಕಾಗಿ (ಸಿ.ಎ.) ಕಾಯ್ದಿರಿಸಿದ ಎಷ್ಟು ಜಾಗಗಳನ್ನು ಖಾಸಗಿ/ಸಂಘ ಸಂಸ್ಥೆಯವರಿಗೆ ಮಾರಾಟ ಮಾಡಲಾಗಿದೆ ; (ಹೆಸರು ಮತ್ತು ಪೂರ್ಣ ವಿಳಾಸದೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಕಾಯ್ದಿರಿಸಿದ ಸಾರ್ವಜನಿಕರ ಉಪಯೋಗದ ಜಾಗಗಳನ್ನು ಖಾಸಗಿಯವರಿಗೆ/ಸಂಘ ಸಂಸ್ಥೆಗಳಿಗೆ ಮಾರಾಟ ಮಾಡಲು ಸರ್ಕಾರವು ಅಳವಡಿಸಿರುವ ಮಾನದಂಡಗಳೇನು ; (ಮಾಹಿತಿ ನೀಡುವುದು)

(ಇ) ಪ್ರಾಧಿಕಾರದ ಈ ಜಾಗಗಳ ಮಾರಾಟದಿಂದ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಬಂದ ಆದಾಯ ಎಷ್ಟು ಮತ್ತು ಈ ಜಾಗದ ಮಾರಾಟಕ್ಕೆ ಸಾರ್ವಜನಿಕರ ಗಮನ ಸೆಳೆಯಲು ಸರ್ಕಾರವು ಅನುಸರಿಸಿದ ಕ್ರಮಗಳೇನು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಸರ್ಕಾರಿ ವಾಹನದ ದುರ್ಬಳಕೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೯೫ (೧೨೮೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಸ್ಥಳೀಯ ಸಂಸ್ಥೆಗಳ ಸದಸ್ಯರು, ಶಾಸಕರು, ಸಂಸದರು, ಆಯ್ಕೆಯಾಗಿದ್ದು, ಸರ್ಕಾರಿ ಸಭೆ ಸಮಾರಂಭದ ಭೂಮಿ ಪೂಜೆ ಮತ್ತು ವೇದಿಕೆಯಲ್ಲಿ ಇವರ ಬದಲಾಗಿ ಈ ಸದಸ್ಯರಂತೆ ಅಧಿಕಾರ ಚಲಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಆ) ಆಯ್ಕೆಯಾದ ಜನಪ್ರತಿನಿಧಿಗಳಿಗೆ ಒದಗಿಸಿದ ಸರ್ಕಾರಿ ವಾಹನವನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಪ್ರಾಧಿಕಾರಗಳಲ್ಲಿ ವಸೂಲಿ ಮಾಡುತ್ತಿರುವ ಕೆರೆ ಅಭಿವೃದ್ಧಿ ಸೆಸ್ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪೯೬ (೧೩೨೭) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಕೆರೆ ಅಭಿವೃದ್ಧಿ ಸೆಸ್/ ಶುಲ್ಕ ವಿಧಿಸಲಾಗುತ್ತಿದೆಯೇ ; ಈ ಶುಲ್ಕವನ್ನು ವಿಧಿಸಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ಇದುವರೆವಿಗೂ ವಸೂಲಿಯಾದ ಸೆಸ್/ಶುಲ್ಕ ಎಷ್ಟು ; (ಪ್ರಾಧಿಕಾರಗಳವಾರು ವಿವರ ನೀಡುವುದು)

(ಇ) ವಸೂಲಿಯಾದ ಶುಲ್ಕ/ಸೆಸ್‌ಗಳಲ್ಲಿ ಯಾವ ಯಾವ ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದೆ ; ಖರ್ಚಾದ ಹಣವೆಷ್ಟು ? (ಪ್ರಾಧಿಕಾರವಾರು ವಿವರ ನೀಡುವುದು)

## ಜಾಹೀರಾತು ತೆರಿಗೆ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪೯೭ (೧೩೨೬) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮಹಾನಗರ ಪಾಲಿಕೆಗಳಲ್ಲಿ ವಸೂಲಿಯಾದ ಜಾಹೀರಾತು ತೆರಿಗೆ ಎಷ್ಟು ; (ಪಾಲಿಕೆವಾರು ವಿವರ ನೀಡುವುದು)

(ಆ) ಜಾಹೀರಾತುಗಳನ್ನು ಪ್ರದರ್ಶಿಸಲು ನಿಯಮಗಳನ್ನು ರೂಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಇ) ಅನಧಿಕೃತವಾಗಿ ಪ್ರದರ್ಶಿಸುತ್ತಿರುವ ಜಾಹೀರಾತುಗಳ ವಿರುದ್ಧ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಹಜ್ ಯಾತ್ರಿಗಳ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೪೯೮ (೧೩೪೫) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಜ್ ಯಾತ್ರಿಗಳ ಅನುಕೂಲಕ್ಕಾಗಿ ರಾಜ್ಯ ಸರಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೬–೧೭ರಲ್ಲಿ ಹಜ್ ಯಾತ್ರಿಗಳ ಅನುಕೂಲಕ್ಕಾಗಿ ರಾಜ್ಯ ಸರಕಾರ ಖರ್ಚು ಮಾಡಿರುವ ಹಣ ಎಷ್ಟು ?

## ರಾಜ್ಯದಲ್ಲಿರುವ ಅಬಕಾರಿ ಇಲಾಖೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೪೯೯ (೧೩೪೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ ಮತ್ತು ೨೦೧೬–೧೭ರಲ್ಲಿ ರಾಜ್ಯ ಅಬಕಾರಿ ಇಲಾಖೆಯಿಂದ ಬಂದಿರುವ ಆದಾಯ ಎಷ್ಟು ; (ವಿವರ ನೀಡುವುದು)

(ಆ) ಗ್ರಾಮಾಂತರ ಪ್ರದೇಶಗಳಲ್ಲಿ ಪರವಾನಗಿ (ಲೈಸನ್ಸ್) ಇಲ್ಲದೆ ಸಾರಾಯಿ ಮಾರಾಟ ಮಾಡುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೆ ; ಹಾಗಿದ್ದಲ್ಲಿ, ಪರವಾನಿಗೆ ಇಲ್ಲದೆ ಸಾರಾಯಿ ಮಾರಾಟವನ್ನು ತಡೆಗಟ್ಟಲು ಸರಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ಗುಪ್ತದಳವನ್ನು ಬಲಿಷ್ಟಗೊಳಿಸುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೦೦ (೧೩೪೩) ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಪ್ರಸ್ತುತ ಸಮಾಜದಲ್ಲಿ ನಡೆಯುತ್ತಿರುವ ಅಹಿತಕರ ಘಟನೆಗಳನ್ನು ಹತ್ತಿಕ್ಕಲು ಗುಪ್ತದಳವನ್ನು ಬಲಿಷ್ಟಗೊಳಿಸಲು ಸರಕಾರ ಹಾಲಿ ತೆಗೆದುಕೊಂಡಿರುವ ಹಾಗೂ ಮುಂದೆ ತೆಗೆದುಕೊಳ್ಳುವ ಕ್ರಮಗಳಾವುವು ?

## ರಾಜ್ಯ ಸರಕಾರ ಕೈಗೆತ್ತಿಕೊಂಡಿರುವ ಜನಪರ ಯೋಜನೆಗಳ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೦೧ (೧೩೪೪) ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯ ಸರಕಾರ ಕೈಗೆತ್ತಿಕೊಂಡಿರುವ ಅನೇಕ ಜನಪರ ಯೋಜನೆಗಳ ವಿವಿಧ ಕಾರ್ಯಕ್ರಮಗಳನ್ನು ಗ್ರಾಮಾಂತರ ಪ್ರದೇಶಗಳಲ್ಲಿ ಜನರಿಗೆ ಮಾಹಿತಿ ಒದಗಿಸಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಸರಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೋಲೀಸ್ ಸಿಬ್ಬಂದಿಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೦೨ (೧೩೪೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಪೋಲೀಸ್ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಜನಸಂಖ್ಯೆ ಆಧಾರದ ಅನುಗುಣವಾಗಿ ಇರಬೇಕಾಗಿರುವ ಪೋಲೀಸ್ ಠಾಣೆಗಳು ಎಷ್ಟು ; ಪ್ರಸ್ತುತ ಎಷ್ಟು ಪೋಲೀಸ್ ಠಾಣೆಗಳು ಕಾರ್ಯ ನಿರ್ವಹಿಸುತ್ತಿರುತ್ತವೆ ; (ವಿವರ ನೀಡುವುದು)

(ಇ) ರಾಯಚೂರು ಜಿಲ್ಲೆಯಲ್ಲಿ ಪ್ರಸ್ತುತ ಇರುವ ಅಗ್ನಿ ಶಾಮಕ ಠಾಣೆಗಳ ಸಂಖ್ಯೆ ಎಷ್ಟು ;

(ಈ) ರಾಯಚೂರು ಜಿಲ್ಲೆಯಲ್ಲಿ ನೂತನವಾಗಿ ಅಗ್ನಿಶಾಮಕ ಠಾಣೆಗಳನ್ನು ಪ್ರಾರಂಭಿಸಲು ಸರಕಾರ ತೆಗೆದುಕೊಂಡ ಕ್ರಮಗಳೇನು ?

## ತುಮಕೂರು ನಗರ ಅಭಿವೃದ್ಧಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೫೦೩ (೧೩೬೩) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ತುಮಕೂರು ಮಹಾನಗರ ಪಾಲಿಕೆಗೆ ಎಷ್ಟು ಹಣ ಬಿಡುಗಡೆಯಾಗಿದೆ ; (ವಿವರವಾಗಿ ಮಾಹಿತಿ ಕೊಡುವುದು)

(ಆ) ಬಿಡುಗಡೆಯಾದ ಹಣವನ್ನು ಯಾವ ಯಾವ ಯೋಜನೆ/ಕಾಮಗಾರಿಗಳಿಗೆ ವಿನಿಯೋಗಿಸಲಾಗಿದೆ ; (ಯೋಜನೆ/ಕಾಮಗಾರಿವಾರು ವಿವರವಾದ ಮಾಹಿತಿ ಕೊಡುವುದು)

(ಇ) ತುಮಕೂರು ಅಮಾನಿ ಕೆರೆ ಅಭಿವೃದ್ಧಿಗಾಗಿ ಖರ್ಚು ಮಾಡಿರುವ ಹಣವೆಷ್ಟು ;

(ಈ) ತುಮಕೂರು ನಗರದ ಸರ್ವತೋಮುಖ ಅಭಿವೃದ್ಧಿಗೆ ಪಾಲಿಕೆಯು ಹಾಕಿಕೊಂಡಿರುವ ಯೋಜನೆಗಳಾವುವು ? (ವಿವರವಾದ ಮಾಹಿತಿ ನೀಡುವುದು)

## ಸರ್ಕಾರದಲ್ಲಿರುವ ಆಡಳಿತ ಇಲಾಖೆಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೫೦೪ (೧೩೬೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರದ ಇಲಾಖೆಗಳು ಎಷ್ಟು ; ಅವು ಯಾವುವು ; (ವಿವರವಾದ ಮಾಹಿತಿ ಕೊಡುವುದು)

(ಆ) ಸದರಿ ಇಲಾಖೆಗಳ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಎಷ್ಟಿವೆ ; ಅವು ಯಾವುವು ; (ಇಲಾಖಾವಾರು, ಕೇಂದ್ರ ಕಚೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ಕೊಡುವುದು)

(ಇ) ಇಲಾಖೆಗಳ ಅಧೀನದಲ್ಲಿ ಬರುವ ನಿಗಮ/ಅಂಗ ಸಂಸ್ಥೆಗಳು ಯಾವ ಯಾವ ವಿಷಯದಲ್ಲಿ ಇಲಾಖೆಯ ಅನುಮೋದನೆ ಪಡೆಯಬೇಕಾಗಿರುತ್ತದೆ ; (ವಿವರವಾದ ಮಾಹಿತಿ ಕೊಡುವುದು)

(ಈ) ಇಲಾಖೆಗಳು ತಮ್ಮ ಅಧೀನದಲ್ಲಿ ಬರುವ ನಿಗಮ/ಅಂಗ ಸಂಸ್ಥೆಗಳ ಆಡಳಿತದಲ್ಲಿ ಹೊಂದಿರುವ ಅಧಿಕಾರಗಳೇನು ? (ವಿವರವಾದ ಮಾಹಿತಿ ಕೊಡುವುದು)

## ವಾರ್ತಾ ಇಲಾಖೆ ಯೋಜನೆಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೫೦೫ (೧೩೬೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಡಿ ಹಾಲಿ ಜಾರಿ ಇರುವ ಯೋಜನೆಗಳಾವುವು ; ಇವುಗಳಿಗೆ ಕಳೆದ ೩ ವರ್ಷಗಳಿಂದ ಎಷ್ಟು ಹಣ ಖರ್ಚು ಮಾಡಲಾಗಿದೆ ; (ಯೋಜನೆವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಸದರಿ ಇಲಾಖೆಯ ಅಧೀನದಲ್ಲಿ ಎಷ್ಟು ವಿನಿಯಲ್‌ಗಳು ಇವೆ ; ಇವುಗಳನ್ನು ಯಾವಾಗ ನಿರ್ಮಿಸಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ಕೊಡುವುದು)

(ಇ) ೨೦೧೬–೧೭ನೆ ಸಾಲಿನಲ್ಲಿ ಸರ್ಕಾರದ ಯೋಜನೆಗಳ ಪ್ರಚಾರಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ ? (ಜಿಲ್ಲಾವಾರು ವಿವರವಾದ ಮಾಹಿತಿ ಕೊಡುವುದು)

## ರಾಜ್ಯದಲ್ಲಿ ಪೊಲೀಸ್ ಇಲಾಖೆಯಲ್ಲಿರುವ ಸಿಬ್ಬಂದಿಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೫೦೬ (೧೪೯೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪೊಲೀಸ್ ಇಲಾಖೆಯಲ್ಲಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಒಟ್ಟು ಪೊಲೀಸ್ ಸಿಬ್ಬಂದಿಗಳಲ್ಲಿ ಎಷ್ಟು ಜನರಿಗೆ ವಸತಿ ಸೌಲಭ್ಯಗಳನ್ನು ಒದಗಿಸಲಾಗಿದೆ ;

(ಇ) ಕೆಲವು ಸಂದರ್ಭಗಳಲ್ಲಿ ಪೊಲೀಸ್ ಸಿಬ್ಬಂದಿ ೨೪ ಗಂಟೆಗಳ ಕಾಲ ಕಾರ್ಯನಿರ್ವಹಿಸಬೇಕಾದ ಪರಿಸ್ಥಿತಿ ಇದ್ದು, ಇಂತಹವರಿಗೆ ಅನುಕೂಲಕರವಾದ ವಸತಿ ಸೌಕರ್ಯ ಒದಗಿಸಲು ಸರ್ಕಾರದ ಕ್ರಮ ಏನು ;

(ಈ) ವಸತಿ ಸೌಕರ್ಯ ನೀಡಲಿರುವ ಸಿಬ್ಬಂದಿಗೆ ಎಷ್ಟು ಮನೆ ಬಾಡಿಗೆ ಭತ್ಯೆಯನ್ನು ಕೊಡಲಾಗುತ್ತಿದೆ ;

(ಉ) ಪ್ರತಿದಿನ ಬೆಲೆ ಏರಿಕೆಯಾಗುವ ಈ ಕಾಲಮಾನದಲ್ಲಿ ಈ ಸಿಬ್ಬಂದಿಗಳಿಗೆ ಹೆಚ್ಚಿನ ಮನೆ ಬಾಡಿಗೆ ಭತ್ಯೆಯನ್ನು ಒದಗಿಸಲು ಸರ್ಕಾರ ಯೋಚಿಸಿದೆಯೇ ?

## ಕಳೆದ ೩ ವರ್ಷದ ಅವಧಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ತೆರಿಗೆದಾರರಿಂದ ಸಂಗ್ರಹಿಸಿದ ಹಣದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೫೦೭ (೧೩೪೯) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದ ಅವಧಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ತೆರಿಗೆದಾರರಿಂದ ಎಷ್ಟು ಹಣವನ್ನು ಸಂಗ್ರಹಿಸಲಾಗಿದೆ ; (ವರ್ಷಾವಾರು ವಿವರ ನೀಡುವುದು)

(ಆ) ಈ ರೀತಿ ಸಂಗ್ರಹಿಸಿದ ಹಣದಲ್ಲಿ ಯಾವ ಯಾವ ಬಾಬ್ತುಗಳಿಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯ ಮುಖಾಂತರ ಅಭಿವೃದ್ಧಿ ಕಾರ್ಯಗಳನ್ನು ಅನುಷ್ಠಾನಗೊಳಿಸಲಾಗಿದೆಯೇ ; ಇದ್ದಲ್ಲಿ, ವಿವಿಧ ವಿಭಾಗಗಳಲ್ಲಿ ಅಭಿವೃದ್ಧಿ ಯಾವುವು ; (ವಿವರ ನೀಡುವುದು)

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕಾರ್ಯಗಳನ್ನು ಅನುಷ್ಠಾನಗೊಳಿಸಲು ಅವಕಾಶ ಇದೆಯೇ ?

## ನಗರಗಳು ವೇಗವಾಗಿ ಬೆಳೆಯುತ್ತಿರುವ ಹಿನ್ನೆಲೆಯಲ್ಲಿ ನಾಗರೀಕರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೫೦೮ (೧೩೩೮) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಗಳು ವೇಗವಾಗಿ ಬೆಳೆಯುತ್ತಿರುವ ಹಿನ್ನೆಲೆಯಲ್ಲಿ ನಾಗರೀಕರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸಲು ಹಾಗೂ ಯೋಜನೆಬದ್ಧ ಬೆಳವಣಿಗೆಯನ್ನು ಹಮ್ಮಿಕೊಳ್ಳಲು ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು ; (ವಿವರ ನೀಡುವುದು)

(ಆ) ನಗರಗಳಿಗೆ ಇನ್ನು ಮುಂದೆ ಮುಂಬರುವ ೨೫ ವರ್ಷಗಳಲ್ಲಿ I, II, III ಸ್ತರದ ನಗರಗಳಿಗೆ ಗ್ರಾಮ ಪ್ರದೇಶದಿಂದ ಉದ್ಯೋಗವನ್ನರಸಿಕೊಂಡು ಬರುವವರ ಕುರಿತಾಗಿ ಯಾವುದಾದರೂ ಸರ್ವೇಕ್ಷಣೆಯ ಮಾಡಿರುವುದು

ಲಭ್ಯವಿದೆಯೇ ; (ವಿವರ ನೀಡುವುದು), ಇಲ್ಲವಾದಲ್ಲಿ, ಸರ್ವೇಕ್ಷಣೆ ನಡೆಸಿ ಅಭಿವೃದ್ಧಿ ದೃಷ್ಟಿಯಿಂದ ಸೂಕ್ತ ಕ್ರಮ ಕೈಗೊಳ್ಳಲು ಸರ್ಕಾರ ಯೋಚಿಸಿದೆಯೇ ;

(ಇ) ನಗರಗಳ ಯೋಜನೆಯ ಒಟ್ಟು ಅಭಿವೃದ್ಧಿಗೆ ರಸ್ತೆ, ಒಳಚರಂಡಿ, ವಸತಿ, ವಿದ್ಯುತ್ ಹಾಗೂ ಇನ್ನಿತರೆ ನಾಗರಿಕ ಸೌಲಭ್ಯಗಳನ್ನು ಒದಗಿಸದಿದ್ದಲ್ಲಿ, ಎಲ್ಲರಿಗೂ ಅನ್ವಯವಾಗುವಂತೆ ಸರ್ಕಾರ ಮಾನದಂಡಗಳನ್ನು ರೂಪಿಸಿದೆಯೇ ? (ವಿವರ ನೀಡುವುದು)

## ಕೇಂದ್ರ ಪುರಸ್ಕೃತ ಅಟಲ್‌ನಗರ ಪರಿವರ್ತನಾ ಪುನರುಜ್ಜೀವನ ಯೋಜನೆಯ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೫೮೯ (೧೩೪೧) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಪುರಸ್ಕೃತ ಅಟಲ್‌ನಗರ ಪರಿವರ್ತನಾ ಪುನರುಜ್ಜೀವನ ಯೋಜನೆ (ಅಮೃತ್)ನ್ನು ರಾಜ್ಯದಲ್ಲಿ ಎಂದಿನಿಂದ ಅನುಷ್ಠಾನಗೊಳಿಸಲಾಗಿದೆ ; (ಈ ಯೋಜನೆಯ ವಿವರಗಳನ್ನು ನೀಡುವುದು)

(ಆ) ಯೋಜನೆಯನ್ವಯ ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ನಗರಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಯೋಜನೆಯ ಅನುಷ್ಠಾನದಲ್ಲಿ ಕೇಂದ್ರ ಮತ್ತು ರಾಜ್ಯಗಳ ಪಾತ್ರವೇನು ; (ಯೋಜನೆಯ ಆರ್ಥಿಕ ನಿರ್ವಹಣೆ ಹಾಗೂ ಅನುಷ್ಠಾನ)

(ಈ) ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಈ ಯೋಜನೆಯ ಅನುಷ್ಠಾನದಲ್ಲಿ ಅನಗತ್ಯ ವಿಳಂಬವಾಗುತ್ತಿರಲು ಕಾರಣವೇನು ?

## ೨೦೧೧ರಲ್ಲಿ ಗೆಜೆಟೆಡ್ ಪ್ರೊಬೆಷನರ್ ಹುದ್ದೆಗಳ ನೇಮಕಾತಿಯಲ್ಲಿ ಭಾರಿ ಅಕ್ರಮ ನಡೆದಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೫೯೦ (೧೩೪೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಲೋಕಸೇವಾ ಆಯೋಗದ ೨೦೧೧ರ ಗೆಜೆಟೆಡ್ ಪ್ರೊಬೆಷನರ್ ಹುದ್ದೆಗಳ ನೇಮಕಾತಿಯಲ್ಲಿ ಭಾರಿ ಅಕ್ರಮ, ಸ್ವಜನಪಕ್ಷಪಾತ ನಡೆದಿದೆಯೆಂದು ಸಿಐಡಿ ವರದಿಯಲ್ಲಿ ತಿಳಿಸಿರುವುದು ನಿಜವೇ ;

(ಆ) ಈ ವರದಿ ಆಧಾರದ ಮೇಲೆ ೨೦೧೧ರ ಗೆಜೆಟೆಡ್ ಪ್ರೊಬೆಷನರಿ ನೇಮಕಾತಿ ಹುದ್ದೆಗಳ ನೇಮಕಾತಿ ಅಧಿಸೂಚನೆಯನ್ನು ಸರ್ಕಾರ ರದ್ದುಪಡಿಸಲು ಕ್ರಮ ಕೈಗೊಂಡಿರುವುದು ನಿಜವೇ ;

(ಇ) ಇತ್ತೀಚೆಗೆ ೨೦೧೧ನೇ ಸಾಲಿನ ೩೬೨ ಗೆಜೆಟೆಡ್ ಹುದ್ದೆಗಳಿಗೆ ನೇಮಕಾತಿ ಪತ್ರ ನೀಡಲು ಸರ್ಕಾರವು ಪ್ರಕ್ರಿಯೆ ಆರಂಭಿಸಿರುವುದಾಗಿ ತಿಳಿದುಬಂದಿದ್ದು, ಇದರ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ?

## ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಕಾನೂನು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೧೧ (೧೨೪೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಕಾನೂನನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲಾಗಿದೆಯೇ ;

(ಆ) ಕಾನೂನು ಉಲ್ಲಂಘಿಸಿ ಧೂಮಪಾನ ಮಾಡಿರುವ ಎಷ್ಟು ಜನರ ಮೇಲೆ ದಂಡ ವಿಧಿಸಿ ಕ್ರಮ ಕೈಗೊಳ್ಳಲಾಗಿದೆ ; (ಕಳೆದ ೨ ವರ್ಷಗಳ ಪ್ರಕರಣವಾರು ಮಾಹಿತಿ ನೀಡುವುದು)

(ಇ) ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಪೊಲೀಸ್ ಇಲಾಖೆ ಯಾವ ರೀತಿ ಕಾರ್ಯಕ್ರಮ ಹಾಕಿಕೊಂಡಿದೆ ?

## ಪೊಲೀಸ್ ಗುಪ್ತಚರ ವಿಭಾಗವನ್ನು ಚುರುಕುಗೊಳಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೧೨ (೧೨೪೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಡೆಯಲಿರುವ ಕೋಮು ಗಲಭೆ ಮತ್ತಿತರ ಕಾನೂನುಬಾಹಿರ ಚಟುವಟಿಕೆಗಳನ್ನು ಗುಪ್ತ ಮಾಹಿತಿಗಳ ಮೂಲಕ ತಿಳಿದುಕೊಂಡು ಕಾನೂನು ಮತ್ತು ಶಾಂತಿಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆಯಲ್ಲಿ ಗುಪ್ತಚರ (Intelligence) ವಿಭಾಗ ಇದ್ದು, ಸಿಬ್ಬಂದಿಗಳ ನೈಪುಣ್ಯತೆಯ ಕೊರತೆಯಿಂದ ಸರಿಯಾಗಿ ಕೆಲಸ ಕಾರ್ಯ ನಡೆಯುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪೊಲೀಸ್ ಇಲಾಖೆಯಲ್ಲಿ ದಕ್ಷತೆಯಿಂದ ಕಾರ್ಯನಿರ್ವಹಿಸದ ಅಥವಾ ಆರೋಪಗಳನ್ನು ಹೊಂದಿರುವ ಪೊಲೀಸ್ ಅಧಿಕಾರಿಗಳನ್ನು ಈ ವಿಭಾಗಕ್ಕೆ ನಿಯೋಜಿಸುವುದರಿಂದ, ದಕ್ಷತೆಯ ಕೊರತೆ ಉಂಟಾಗುತ್ತದೆ ಎಂಬುದು ಸಾಮಾನ್ಯ ಅಭಿಪ್ರಾಯವಾಗಿರುವುದು ನಿಜವೆ ;

(ಇ) ತರಬೇತಿ ಪಡೆದ ದಕ್ಷ ಅಧಿಕಾರಿಗಳನ್ನು ಗುಪ್ತಚರ ವಿಭಾಗಕ್ಕೆ ನಿಯೋಜಿಸಿ ಈ ವಿಭಾಗವನ್ನು ಚುರುಕುಗೊಳಿಸುವ ವ್ಯವಸ್ಥೆ ಮಾಡಲಾಗುವುದೇ ?

## ನಿವೃತ್ತ ನೌಕರರಿಗೂ ನಗದು ರಹಿತ ವೈದ್ಯಕೀಯ ಸೌಲಭ್ಯದ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೧೩ (೧೭೪೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ನೌಕರರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ನೀಡಲು "ಜ್ಯೋತಿ ಸಂಜೀವಿನಿ" ಯೋಜನೆಯನ್ನು ಜಾರಿಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವಾಗಿನಿಂದ ಜಾರಿಗೊಳಿಸಲಾಗಿದೆ ;

(ಆ) ಸದರಿ ಸೌಲಭ್ಯಗಳನ್ನು ನಿವೃತ್ತ ರಾಜ್ಯ ಸರ್ಕಾರಿ ನೌಕರರಿಗೂ ವಿಸ್ತರಿಸಲಾಗುವುದೆ ; ನಿವೃತ್ತಿದಾರರ ಸಂಘದಿಂದ ಈ ಬಗ್ಗೆ ಮನವಿಯೇನಾದರೂ ಬಂದಿದೆಯೇ ;

(ಇ) ಈ ಯೋಜನೆಯನ್ನು ನಿವೃತ್ತ ನೌಕರರು ಮತ್ತು ಅವರ ಕುಟುಂಬದವರಿಗೂ ಮಾನವೀಯತೆ ದೃಷ್ಟಿಯಿಂದ ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಗೃಹ ನಿರ್ಮಾಣ ಸಹಕಾರ ಸಂಘಗಳಿಗೆ ಸಿ.ಎ. ನಿವೇಶನ ಮತ್ತು ಪಾರ್ಕ್‌ಗಳ (Modification plan) ನೀಡುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೧೪ (೧೨೩೮) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ (ಬಿಡಿಎ)ವು ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಗೃಹ ನಿರ್ಮಾಣ ಸಹಕಾರ ಸಂಘಗಳು ಬಡಾವಣೆ ರಚಿಸಿ ಮೊದಲಿಗೆ ನಿವೇಶನ ಹಂಚಿಕೆಗೆ ಅನುಮತಿ ನೀಡುವ ಸಂದರ್ಭದಲ್ಲಿ ನಕಾಶೆ ಮಂಜೂರಾತಿ ನೀಡುವಾಗ ಸಿ.ಎ. ನಿವೇಶನ ಮತ್ತು ಪಾರ್ಕ್‌ಗಳ ನಿರ್ಮಾಣಕ್ಕೆ ಜಾಗ ನಿಗದಿಪಡಿಸಿ, ಐದು ವರ್ಷಗಳ ಕಾಲ ಯಾವುದೇ ಬದಲಾವಣೆ ಮಾಡದಂತೆ ನೋಂದಣಿ (Reling Wish deed) ಪಡೆದು ಮಂಜೂರಾತಿ ನೀಡಿ ತದನಂತರ ಸದರಿ ಗೃಹ ನಿರ್ಮಾಣ ಸಹಕಾರ ಸಂಘಗಳು ಮತ್ತೊಮ್ಮೆ (Modification plan) ಮರು ನಕಾಶೆಯನ್ನು ಮಂಜೂರಾತಿ ಕೋರಿದ ಸಂದರ್ಭದಲ್ಲಿ ಸಿ.ಎ. ನಿವೇಶನ ಮತ್ತು ಪಾರ್ಕ್‌ಗಳ ನಿರ್ಮಾಣಕ್ಕೆ ನಿಗದಿಪಡಿಸಲಾದ ಜಾಗವನ್ನು ಮರು ವಿನ್ಯಾಸಗೊಳಿಸಲು ಅವಕಾಶ ಇದೆಯೇ ; (ವಿವರ ನೀಡುವುದು)

(ಆ) ಸಿ.ಎ. ನಿವೇಶನ ಮತ್ತು ಪಾರ್ಕ್‌ಗಳ ನಿರ್ಮಾಣಕ್ಕೆ ಮೀಸಲಾಗಿರುವ ಜಾಗವನ್ನು ಮಾರ್ಪಾಡುಗೊಳಿಸಲು ಸುಪ್ರೀಂಕೋರ್ಟ್‌ನ ಆದೇಶವಿದೆಯೇ ; ಇದ್ದಲ್ಲಿ, ಆದೇಶ ಪ್ರತಿ ನೀಡುವುದು ?

## ಸ್ಮಾರ್ಟ್ ಸಿಟಿಗಳಂತೆ ಸ್ಮಾರ್ಟ್ ವಿಲೇಜ್‌ಗಳ ನಿರ್ಮಾಣದ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೧೫ (೧೨೬೮) ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇಶದಲ್ಲಿ ಕನಿಷ್ಠ ೧೦೦ ಸ್ಮಾರ್ಟ್ ಸಿಟಿಗಳನ್ನು ನಿರ್ಮಾಣ ಮಾಡುವ ಮೂಲಕ ದೇಶವನ್ನು ವಿಶ್ವ ದರ್ಜೆಗೆ ಏರಿಸುತ್ತಿರುವ ಕೇಂದ್ರ ಸರ್ಕಾರದಂತೆ,

ರಾಜ್ಯದಲ್ಲೂ ಸರ್ಕಾರ ಸ್ಮಾರ್ಟ್ ವಿಲೇಜ್‌ಗಳನ್ನು ನಿರ್ಮಾಣ ಮಾಡಿ, ರಾಜ್ಯವನ್ನು ದೇಶದ ನಂಬರ್ ಒನ್ ರಾಜ್ಯವನ್ನಾಗಿ ಮಾಡಲು ಚಿಂತನೆ ಮಾಡಿ, ಕಾರ್ಯರೂಪಕ್ಕೆ ತರಲು ರಾಜ್ಯ ಸರ್ಕಾರಕ್ಕೆ ಇರುವ ತೊಂದರೆ ಏನು ; (ವಿವರ ನೀಡುವುದು)

(ಆ) ಹತ್ತು ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಇರುವ ಹೋಬಳಿ ಮತ್ತು ಹೋಬಳಿ ಮಟ್ಟದ ಹಳ್ಳಿಗಳನ್ನು ಸ್ಮಾರ್ಟ್ ವಿಲೇಜ್ ಎಂದು ಪರಿಗಣಿಸಿ, ಅಭಿವೃದ್ಧಿಪಡಿಸಲು ಯೋಜನೆ ರೂಪಿಸಲು ಈ ಸಾಲಿನ ಆಯವ್ಯಯದಲ್ಲಿ ಸೇರ್ಪಡೆ ಮಾಡಲು ಸರ್ಕಾರ ಕ್ರಮ ವಹಿಸುವುದೇ ; (ತಿಳಿಸುವುದು)

(ಇ) ಈ ರೀತಿ ಸ್ಮಾರ್ಟ್ ವಿಲೇಜ್ ಮಾಡಿದ್ದಲ್ಲಿ, ಗ್ರಾಮೀಣ ಭಾಗದ ಯುವಕರಿಗೆ ಉದ್ಯೋಗಗಳನ್ನು ಸೃಷ್ಟಿಸಿದ್ದಲ್ಲಿ, ಬಹುತೇಕ ಹಳ್ಳಿಗರು ಉದ್ಯೋಗ ಹುಡುಕುತ್ತಾ ಸ್ಮಾರ್ಟ್ ನಗರಗಳತ್ತ ವಲಸೆ ಬರುವುದನ್ನು ತಡೆಯಲು ಸಹಕಾರಿಯಾಗುವುದಿಲ್ಲವೆ ; ಈ ಬಗ್ಗೆ ಸರ್ಕಾರ ಕೂಡಲೇ ಆಲೋಚಿಸಿ ತಿರ್ಮಾನ ಮಾಡಲು ಕ್ರಮ ವಹಿಸುವುದೇ ? (ತಿಳಿಸುವುದು)

## ರೈತರ ಸಾಲ ಮನ್ನಾ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೫೧೬ (೧೨೭೦+೧೩೫೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರು ಸಹಕಾರ ಸಂಘಗಳಿಂದ / ಸಹಕಾರ ಬ್ಯಾಂಕುಗಳಿಂದ/ ರಾಷ್ಟ್ರೀಕೃತ ಬ್ಯಾಂಕುಗಳಿಂದ ಎಷ್ಟು ಮೊತ್ತದ ಕೃಷಿ ಸಾಲ ಪಡೆದುಕೊಂಡಿದ್ದಾರೆ ; (ಪ್ರತ್ಯೇಕವಾಗಿ ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯವು ಭೀಕರ ಬರಗಾಲವನ್ನು ಎದುರಿಸುತ್ತಿರುವುದರಿಂದ ರೈತರು ಸಾಲ ಬಾಧೆಯಿಂದ ಆತ್ಮಹತ್ಯೆಗೆ ಶರಣಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದಲ್ಲಿ ತೀವ್ರತರವಾದ ಬರಗಾಲ ಇರುವುದರಿಂದ ಹಾಗೂ ಈ ಬರಗಾಲಕ್ಕೆ ತತ್ತರಿಸಿರುವ ರೈತರು ತಮ್ಮ ಜಮೀನಿನಲ್ಲಿ ಯಾವುದೇ ಬೆಳೆಯನ್ನು

ಬೆಳೆಯದೆ ಇರುವುದರಿಂದ ರೈತರು ಸಹಕಾರ ಬ್ಯಾಂಕುಗಳಲ್ಲಿ / ಕೇಂದ್ರೀಕೃತ ಬ್ಯಾಂಕುಗಳಲ್ಲಿ ವ್ಯವಸಾಯಕ್ಕೆ ಮಾಡಿರುವ ಸಾಲವನ್ನು ಮನ್ನಾ ಮಾಡಲಾಗುವುದೆ ; (ತಿಳಿಸುವುದು)

(ಈ) ರಾಜ್ಯದ ರೈತರ ಹಿತದೃಷ್ಟಿಯಿಂದ ಸಂಪೂರ್ಣ ಸಾಲವನ್ನು ಸಣ್ಣ/ ಮಧ್ಯಮ/ದೊಡ್ಡ ರೈತರೆನ್ನದೆ ಎಲ್ಲರ ಸಾಲವನ್ನು ಮನ್ನಾ ಮಾಡಲು ಸರ್ಕಾರ ಸ್ಪಷ್ಟ ನಿರ್ಧಾರ ತೆಗೆದುಕೊಳ್ಳುವುದೆ ; (ಸರ್ಕಾರ ಖಚಿತ ಉತ್ತರ ನೀಡುವುದೇ ತಿಳಿಸುವುದು)

(ಉ) ರೈತರ ಸಾಲ ಮನ್ನಾ ಮಾಡುವ ಕುರಿತು ಸರ್ಕಾರ ಯಾವಾಗ ಆದೇಶ ಹೊರಡಿಸಲಿದೆ ?

## ತುಮಕೂರು ಮಹಾನಗರ ಪಾಲಿಕೆಗೆ ಒದಗಿಸಿರುವ ಅನುದಾನ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೧೭ (೧೨೮೨) ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ನೇ ಸಾಲಿಗೆ ತುಮಕೂರು ಮಹಾನಗರ ಪಾಲಿಕೆಗೆ ವಿವಿಧ ಯೋಜನೆಗಳಡಿ ಮತ್ತು ವಿವಿಧ ಹಣಕಾಸು ಯೋಜನೆಯಡಿ ಒದಗಿಸಿರುವ ಅನುದಾನವೆಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ೨೦೧೬–೧೭ನೇ ಸಾಲಿಗೆ ನಿಗದಿಪಡಿಸಿದ ಅನುದಾನವನ್ನು ಸಂಪೂರ್ಣವಾಗಿ ನೀಡಲಾಗಿದೆಯೇ ; ಇಲ್ಲದಿದ್ದಲ್ಲಿ, ಬಾಕಿ ಉಳಿದಿರುವ ಅನುದಾನವನ್ನು ಎಷ್ಟು ದಿವಸಗಳಲ್ಲಿ ಒದಗಿಸಲಾಗುವುದು ; (ವಿವರ ನೀಡುವುದು)

(ಇ) ತುಮಕೂರು ಮಹಾನಗರ ಪಾಲಿಕೆಯ ಖರ್ಚು ವೆಚ್ಚಗಳ ಬಗ್ಗೆ ಯಾವ ವರ್ಷದಿಂದ ಲೆಕ್ಕಪರಿಶೋಧನೆ ಮಾಡಿಸಿಲ್ಲ ; ಇಷ್ಟು ವರ್ಷ ಮಾಡಿಸದಿರಲು ಕಾರಣವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಒಂದು ವೇಳೆ ಆಡಿಟ್ ಮಾಡಿಸಿದ್ದಲ್ಲಿ, ಆಯಾ ವರ್ಷದಲ್ಲಿ ಅವ್ಯವಹಾರವಾಗಿರುವ ಬಗ್ಗೆ ತನಿಖೆ ಮಾಡಿಸಲಾಗಿದೆಯೇ ;

ಮಾಡಿಸಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಕೈಗೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಉ) ಆಡಿಟ್ ಮಾಡಿಸಿ, ಅದರ ವರದಿಯಂತೆ ಅವ್ಯವಹಾರ ಆಗಿರುವ ಹಣವನ್ನು ತಪ್ಪಿತಸ್ಥ ಅಧಿಕಾರಿಗಳಿಂದ ವಸೂಲಿ ಮಾಡಲು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆ, ರಾಯಭಾಗದ ಆರಕ್ಷಕರಿಗೆ ವಸತಿ ಗೃಹಗಳಿಲ್ಲದೇ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೧೮ (೧೩೮೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ, ರಾಯಭಾಗದ ಆರಕ್ಷಕರ ವಸತಿ ಗೃಹಗಳ ಸ್ಥಿತಿ ತೀರಾ ಶೋಚನೀಯವಾಗಿರುವುದು ಹಾಗೂ ಅವರಿಗೆ ಸರಿಯಾದ ವಸತಿ ಗೃಹಗಳ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಆರಕ್ಷಕರ ವಸತಿ ಗೃಹಗಳ ದುರಸ್ಥಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಈಗಾಗಲೇ ವಸತಿ ಗೃಹಗಳ ದುರಸ್ಥಿ, ಒಳಚರಂಡಿ, ರಸ್ತೆ ಮತ್ತು ಸ್ವಚ್ಛತೆಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು ; ಬಾಕಿ ಇರುವ ಅನುದಾನವೆಷ್ಟು ;

(ಇ) ಕೊಳಚೆ ಪ್ರದೇಶವಾಗಿರುವ ವಸತಿ ಗೃಹ ಪ್ರದೇಶಗಳ ಸ್ವಚ್ಛತೆ ಹಾಗೂ ಇರುವ ವಸತಿ ಗೃಹಗಳು ಶಿಥಿಲವಾಗಿದ್ದು, ಅವುಗಳನ್ನು ಪುನರುಜ್ಜೀವನಗೊಳಿಸಲು ಹೊಸ ವಸತಿ ಗೃಹಗಳನ್ನು ನಿರ್ಮಿಸಲು ಸರ್ಕಾರವು ಏನು ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಈ) ಸರ್ಕಾರ ನಿರ್ಮಿಸಲು ಉದ್ದೇಶಿಸಿರುವ ವಸತಿ ಗೃಹಗಳ ಸಂಖ್ಯೆ ಎಷ್ಟು ; ಇದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು ; ಇದನ್ನು ಯಾವ ಕಾಲ ಮಿತಿಯೊಳಗೆ ನಿರ್ಮಿಸಲಾಗುವುದು ? (ವಿವರ ನೀಡುವುದು)

## ಮಹಾನಗರಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀರಾ ಉಲ್ಬಣವಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೨೯ (೧೩೮೨) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀರಾ ಉಲ್ಬಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸಾರ್ವಜನಿಕರಿಗೆ ಅವಶ್ಯಕವಾಗಿ ಬೇಕಾದ ಕುಡಿಯುವ ನೀರು ಒದಗಿಸಲು ಸರ್ಕಾರ ಅನುಸರಿಸಿರುವ ಮಾನದಂಡಗಳಾವುವು ;

(ಇ) ಕುಡಿಯುವ ನೀರು ಪೂರೈಸಲು ಹಾಗೂ ನೀರಿನ ಬರ ಪರಿಸ್ಥಿತಿಯನ್ನು ನಿಭಾಯಿಸಲು ಸರ್ಕಾರ ಏನೇನು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ; (ನಿರ್ವಹಣೆಯ ವಿವರ ನೀಡುವುದು)

(ಈ) ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಮೀಸಲಿರಿಸಿರುವ ಅನುದಾನದ ಮೊತ್ತವೆಷ್ಟು ?

## ಟೆಂಡರ್ ಶ್ಯೂರ್ ರಸ್ತೆಗಳ ಕಾಮಗಾರಿಗಳಿಗೆ ಕೋಟ್ಯಾಂತರ ಹಣ ವ್ಯಯಿಸಿದರೂ ರಸ್ತೆ ಗುಂಡಿಗಳು ಹಾಗೇ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೩೦ (೧೩೮೪) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಟೆಂಡರ್ ರಸ್ತೆಗಳ ಕಾಮಗಾರಿಗಳಿಗಾಗಿ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿದ್ದರೂ ಸಹ ರಸ್ತೆಯಲ್ಲಿನ ಗುಂಡಿಗಳು ಮಾತ್ರ ಹಾಗೆಯೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಟೆಂಡರ್ ಶ್ಯೂರ್ ರಸ್ತೆಗಳು ಗುಂಡಿ ಬಿದ್ದಿದ್ದು ಹಾಳಾಗಲು ಕಾರಣಗಳೇನು ; ಸರ್ಕಾರವು ಇದಕ್ಕೆ ಕಾರಣರಾದವರ ಮೇಲೆ ಏನು ಕ್ರಮಗಳನ್ನು ತೆಗೆದುಕೊಂಡಿದೆ ; (ವಿವರ ನೀಡುವುದು)

(ಇ) ಮುಂದೆ ಈ ರಸ್ತೆಗಳು ಗುಂಡಿ ಬಿದ್ದು ಆಗಬಹುದಾದ ಅನಾಹುತ, ಅವಘಡಗಳನ್ನು ತಪ್ಪಿಸುವ ನಿಟ್ಟಿನಲ್ಲಿ ಸರ್ಕಾರ ಏನು ಕ್ರಮ ಕೈಗೊಳ್ಳುವುದು ? (ವಿವರ ನೀಡುವುದು)

## ವಿವಿಧ ಹೋರಾಟಗಳಲ್ಲಿ ಭಾಗಿಯಾದ ರೈತರು ದಿನವೂ ಪೊಲೀಸ್ ಠಾಣೆ, ಕೋರ್ಟ್, ಕಛೇರಿಗಳಿಗೆ ಅಲೆಯುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೨೧ (೧೨೭೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ಹೋರಾಟಗಳಲ್ಲಿ ಭಾಗಿಯಾಗಿ ಎಫ್ಐಆರ್ ಹಾಕಿಸಿಕೊಂಡ ಅನ್ನದಾತರು ಭೀಕರ ಬರಗಾಲದ ನಡುವೆಯೂ ಪೊಲೀಸ್ ಠಾಣೆ, ಕೋರ್ಟ್ ಕಛೇರಿಗಳಿಗೆ ದಿನವೂ ಅಲೆದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ೨೦೧೪–೧೫ ರಿಂದ ೨೦೧೭–೧೮ನೇ ಸಾಲಿನಲ್ಲಿ ನದಿ ನೀರು ವಿಚಾರದಲ್ಲಿ ರಸ್ತೆಗಿಳಿದು ಹೋರಾಡಿದ ಎಷ್ಟು ಜನ ರೈತರ ಮೇಲೆ ಎಫ್ಐಆರ್ ದಾಖಲಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಹೋರಾಟ ಹತ್ತಿಕ್ಕುವ ನಿಟ್ಟಿನಲ್ಲಿ ರೈತರ ಮೇಲೆ ವಿವಿಧ ಕೇಸು ಹಾಕಲಾಗಿರುವುದು ನಿಜವೇ ; ಬರಗಾಲದಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಈ ಕೇಸುಗಳಿಂದ ಯಾವಾಗ ಬಿಡುಗಡೆ ಸಿಗುವುದು ;

(ಈ) ಈವರೆಗೆ ರೈತರ ಮೇಲಿನ ಎಷ್ಟು ಪ್ರಕರಣಗಳ ಮೇಲಿನ ಕೇಸುಗಳನ್ನು ಹಿಂಪಡೆಯಲಾಗಿದೆ ; ಎಷ್ಟು ಪ್ರಕರಣಗಳು ಬಾಕಿ ಉಳಿದಿವೆ ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇದಕ್ಕೆ ಇನ್ನೂ ಎಷ್ಟು ಕಾಲಾವಕಾಶ ಬೇಕಾಗುವುದು ?

## ಕರ್ನಾಟಕ ರಾಜ್ಯ ಹಣಕಾಸು ನಿಗಮದ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೨೨ (೧೩೦೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಹಣಕಾಸು ನಿಗಮದ ಕಾರ್ಯ ಚಟುವಟಿಕೆಗಳೇನು ; ನಿಗಮವು ಯಾವ ಯಾವ ಯೋಜನೆಗಳಲ್ಲಿ ಎಷ್ಟು ಪ್ರಮಾಣದ ಬಡ್ಡಿ ದರದಲ್ಲಿ ಸಾಲ ಸೌಲಭ್ಯವನ್ನು ಒದಗಿಸುತ್ತಿದೆ ;

(ಆ) ಮಹಿಳಾ ಉದ್ಯಮಿಗಳಿಗಾಗಿ ಇರುವ ವಿಶೇಷ ಯೋಜನೆಗಳೇನು ?

## ಪಾರ್ಕಿಂಗ್ ಕಾಂಪ್ಲೆಕ್ಸ್‌ಗಳ ನಿರ್ಮಾಣದ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೨೩ (೧೨೯೧) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರಗಳಲ್ಲಿ ಸಾರ್ವಜನಿಕರು ವಾಹನಗಳನ್ನು ಪಾರ್ಕಿಂಗ್ ಮಾಡಲು ಸೂಕ್ತ ಸ್ಥಳಾವಕಾಶ ಇಲ್ಲದೆ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದ ಮಹಾ ನಗರಗಳಲ್ಲಿ ಸಾರ್ವಜನಿಕರ ವಾಹನಗಳಿಗಾಗಿ ಪಾರ್ಕಿಂಗ್ ಕಾಂಪ್ಲೆಕ್ಸ್‌ಗಳನ್ನು ನಿರ್ಮಾಣ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ ;

(ಇ) ಈ ಕುರಿತಂತೆ ಕೈಗೊಂಡಿರುವ ಕ್ರಮಗಳೇನು ?

## ಹೈದ್ರಾಬಾದ್ ಕರ್ನಾಟಕ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ಚಟುವಟಿಕೆ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೨೪ (೧೨೯೭) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮದ ಚಟುವಟಿಕೆಗಳೇನು ; (ವಿವರಗಳನ್ನು ನೀಡುವುದು)

(ಆ) ಹೈದ್ರಾಬಾದ್ ಕರ್ನಾಟಕ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ನಿಗಮದಿಂದ ಕಳೆದ ಮೂರು ವರ್ಷಗಳಲ್ಲಿ ಅನುಷ್ಠಾನಗೊಳಿಸಿದ ಯೋಜನೆಗಳು ಯಾವುವು ; ಮಂಜೂರು ಮಾಡಿದ ಹಣದ ಮೊತ್ತ ಎಷ್ಟು ; ಹಾಗೂ ಕಾಮಗಾರಿಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಇ) ಅತೀ ಹಿಂದುಳಿದ ಹೈದ್ರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿಯನ್ನು ಹೆಚ್ಚಿನ ಆದ್ಯತೆ ನೀಡಿ ಅಭಿವೃದ್ಧಿಪಡಿಸುವ ದಿಶೆಯಲ್ಲಿ ನಿಗಮವು ರೂಪಿಸಿರುವ ಕ್ರಿಯಾ ಯೋಜನೆಗಳು ಯಾವುವು ;

(ಈ) ಸದರಿ ಪ್ರದೇಶಗಳಲ್ಲಿನ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡುವ ನಿಗಮದ ಯೋಜನೆಗಳಿಗೆ ಕೇಂದ್ರ ಸರಕಾರದವರು ಮಂಜೂರು ಮಾಡಿರುವ ಅನುದಾನದ ಮೊತ್ತ ಎಷ್ಟು ? (ಮೂರು ವರ್ಷಗಳ ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ಹಗರಣ/ಅವ್ಯವಹಾರದ ತನಿಖೆ ಕಾಲಮಿತಿಯಲ್ಲಿ ಪೂರ್ಣಗೊಳಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೨೫ (೧೩೮೬) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಳೆದ ೩ ವರ್ಷಗಳಲ್ಲಿ ನಡೆದ ಹಗರಣ/ಅವ್ಯವಹಾರದ ಪ್ರಕರಣಗಳೆಷ್ಟು ; ಪ್ರಕರಣಗಳ ತನಿಖೆಯ ಸ್ಥಿತಿ–ಗತಿಗಳೇನು ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಳೆದ ೩ ವರ್ಷಗಳಲ್ಲಿ ನಡೆದ ಹಣ/ಅನುದಾನ ದುರುಪಯೋಗ ಪ್ರಕರಣಗಳೆಷ್ಟು ; ದುರುಪಯೋಗದ ಮೊತ್ತವೆಷ್ಟು ; ಸಂಬಂಧಿಸಿದ ಅಧಿಕಾರಿ/ ಸಿಬ್ಬಂದಿಗಳ್ಯಾರ್ಯಾರು ; ಕೈಗೊಂಡ ಕ್ರಮಗಳೇನು ;

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ನಕಲಿ ಖಾತೆ/ನಕಲಿ ಪರವಾನಿಗೆ/ನಕಲಿ ಕಾಮಗಾರಿ ಹಗರಣ ಸೇರಿದಂತೆ ವಿವಿಧ ಅವ್ಯವಹಾರದ ತನಿಖೆ ನಿಧಾನಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಆಡಳಿತದ ಕಾರ್ಯವೈಖರಿಗೆ, ಮಾನ್ಯ ಉಚ್ಚ ನ್ಯಾಯಾಲಯ ಅಸಮಾಧಾನ ವ್ಯಕ್ತಪಡಿಸಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಉ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಖಾತೆ, ಕಟ್ಟಡ ಪರವಾನಿಗಿ/ತೆರಿಗೆಯನ್ನು ಆನ್‌ಲೈನ್, ಕಾಮಗಾರಿಗೆ GPS ಆಧಾರಿತ ತಂತ್ರಾಂಶ, ತರುವುದು ಸೇರಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು ಕಾಗದ ರಹಿತ ಕಛೇರಿಯಾಗಿ ಮಾಡಿ, ಪಾರದರ್ಶಕ ಆಡಳಿತ ಜಾರಿಗೆ ತರಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಈ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ಆಸ್ತಿಯ ನಿಖರ ಮಾಹಿತಿಯಿಲ್ಲದಿರುವುದು ಮತ್ತು ತೆರಿಗೆ ವಂಚನೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೨೬ (೧೩೮೭) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಆಸ್ತಿ ಮತ್ತು ಕಟ್ಟಡಗಳ ಮಾಹಿತಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಲಭ್ಯವಿಲ್ಲದಿರುವುದು ನಿಜವೆ ; ಇದರಿಂದಾಗಿ ಆದಾಯ ಸೋರಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಲಭ್ಯವಿರುವ ಮಾಹಿತಿ ಪ್ರಕಾರ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಇರುವ ಮಾಲ್, ಟೆಕ್‌ಪಾರ್ಕ್, ವಾಣಿಜ್ಯ ಕಟ್ಟಡಗಳು, ವಸತಿ ಸಮುಚ್ಛಯಗಳ ಸಂಖ್ಯೆ ಎಷ್ಟು ;

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಒಟ್ಟು ವಾರ್ಷಿಕ ತೆರಿಗೆ ಬೇಡಿಕೆ ವಸೂಲಿ ಬಾಕಿ ಮೊತ್ತವೆಷ್ಟು ; (ಕಳೆದ ಮೂರು ವರ್ಷದ ವರ್ಷಾವಾರು ವಿವರ ನೀಡುವುದು) ಯಾವ ಯಾವ ಖಾತೆಯಲ್ಲಿ ಜಮಾ ಮಾಡಲಾಗಿದೆ ; (Pass Sheet ವಿವರ ನೀಡುವುದು)

(ಈ) ಕಟ್ಟಡದ ವಿಸ್ತೀರ್ಣ ಸೇರಿ ಇನ್ನಿತರ ತಪ್ಪು ಮಾಹಿತಿ ನೀಡಿ ತೆರಿಗೆ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ತೆರಿಗೆ ವಂಚಿಸುತ್ತಿರುವ ಕಟ್ಟಡಗಳ ಮಾಹಿತಿ ಪಡೆದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆದಾಯ ಸೋರಿಕೆ ತಡೆಯಲು ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ನಿಖರವಾದ ಆಸ್ತಿಗಳ ಹಾಗೂ ಕಟ್ಟಡಗಳ ಮಾಹಿತಿ ಸಂಗ್ರಹಿಸಿ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಸಂಪೂರ್ಣ ವಿವರ ನೀಡುವುದು)

## ಸಮುದ್ರದ ನೀರನ್ನು ಶುದ್ಧೀಕರಿಸುವ ಯೋಜನೆ ಜಾರಿಗೊಳಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೨೭ (೧೩೮೮) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) “ದಿನದ ೨೪ ಗಂಟೆಯೂ ಕುಡಿಯುವ ನೀರು ಪೂರೈಕೆ ಯೋಜನೆ ” ರಾಜ್ಯದ ಯಾವ ನಗರ–ಪಟ್ಟಣಗಳಲ್ಲಿ ಲಭ್ಯವಿದೆ ;

(ಆ) ಇಲ್ಲವಾದಲ್ಲಿ, ಯೋಜನೆ ಜಾರಿ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ; ಯಾವ ಯಾವ ನಗರ ಪಟ್ಟಣಗಳಲ್ಲಿ ಯೋಜನೆ ಜಾರಿ ಮಾಡಲಾಗುವುದು ; ಅಗತ್ಯ ಅನುದಾನ ಎಷ್ಟು ; ಯಾವ ಹಂತದಲ್ಲಿ ಕಾರ್ಯರೂಪಕ್ಕೆ ಬರಲಿದೆ ;

(ಇ) ಚೆನ್ನೈ ಮಾದರಿಯಲ್ಲಿ ಕರಾವಳಿಯ ಸಮುದ್ರದ ನೀರನ್ನು ಶುದ್ಧೀಕರಿಸಿ, ಬಳಸುವ ಯೋಜನೆ ಸರ್ಕಾರದ ಮುಂದಿದೆಯೇ ; ಯೋಜನಾ ವರದಿ

ತಯಾರಿಸಲಾಗಿದೆಯೇ ; ಯೋಜನೆಯ ಮುಖ್ಯ ಅಂಶಗಳೇನು ; ಯಾವ ಸಂಸ್ಥೆ ಯೋಜನೆ ತಯಾರಿಸಿದೆ ; ಯೋಜನಾ ವರದಿಗೆ ಸರ್ಕಾರ ಖರ್ಚು ಮಾಡಿದ / ಕಾಯ್ದಿರಿಸಿದ ಅನುದಾನವೆಷ್ಟು ;

(ಈ) ಸಮುದ್ರದ ನೀರು ಶುದ್ಧೀಕರಿಸುವ ಯೋಜನೆ ಕರಾವಳಿಯ ಎಲ್ಲೆಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ ; ಎಷ್ಟು ಪ್ರಮಾಣದ ಕುಡಿಯುವ ನೀರು ದೊರಕಲಿದೆ ; ಸಮುದ್ರ ನೀರು ಶುದ್ಧೀಕರಣ ಘಟಕಕ್ಕೆ ಅಗತ್ಯವಿರುವ ಅಂದಾಜು ಅನುದಾನವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಉ) ಯೋಜನೆಯನ್ನು ಅನುಷ್ಠಾನಕ್ಕೆ ತರಲಾಗುವುದು ಯಾವಾಗ ;

(ಊ) ಸಮುದ್ರದ ನೀರು ಶುದ್ಧೀಕರಣ ಯೋಜನೆಯ ಸಾಧಕ–ಬಾಧಕಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಗಿದೆಯೇ ; ಇಲ್ಲವಾದಲ್ಲಿ, ಸರ್ಕಾರ ಯೋಜನೆಯ ಸಾಧಕ–ಬಾಧಕಗಳನ್ನು ಇಲ್ಲಿನ ಜನರೊಂದಿಗೆ ಚರ್ಚಿಸಲು ಸಿದ್ಧವಿದೆಯೇ ; ಈ ಬಗ್ಗೆ ಯಾವಾಗ ಕ್ರಮ ಕೈಗೊಳ್ಳಲಿದೆ ?

## ಮಹಿಳಾ ಮತ್ತು ಮಕ್ಕಳ ಮೇಲಿನ ದೌರ್ಜನ್ಯ ತಡೆಯುವಲ್ಲಿ ಇಲಾಖೆ ವಿಫಲವಾಗಿರುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೨೮ (೧೩೮೫) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೪ ವರ್ಷದಲ್ಲಿ ರಾಜ್ಯದಲ್ಲಿ ದಾಖಲಾದ ಮಹಿಳಾ ದೌರ್ಜನ್ಯ ಮತ್ತು ಮಕ್ಕಳ ದೌರ್ಜನ್ಯ ಪ್ರಕರಣಗಳೆಷ್ಟು ; (ಜಿಲ್ಲಾವಾರು, ವರ್ಷಾವಾರು ಮಾಹಿತಿ ನೀಡುವುದು) ಮಹಿಳಾ ಠಾಣೆ ಹೆಚ್ಚಳದ ಕುರಿತು ಸರ್ಕಾರದ ನಿಲುವೇನು ;

(ಆ) ಕೆಲವು ಸಂದರ್ಭಗಳಲ್ಲಿ ಸಂತ್ರಸ್ಥರು ದೂರು ನೀಡದೆ ಪ್ರಕರಣ ಮುಚ್ಚಿ ಹೋಗುವುದು ಆರೋಪಿಗಳು ಶಿಕ್ಷೆಯಿಂದ ಪಾರಾಗುವುದು ಸರ್ಕಾರ ಗಮನಿಸಿದೆಯೇ ;

(ಇ) ಕಳೆದ ೦೪ ವರ್ಷದಲ್ಲಿ ದಾಖಲಾದ ಮಹಿಳಾ ಮತ್ತು ಮಕ್ಕಳ ದೌರ್ಜನ್ಯ ಪ್ರಕರಣಗಳಲ್ಲಿ, ಎಷ್ಟು ಪ್ರಕರಣ ಇತ್ಯರ್ಥಗೊಂಡಿದೆ ; ಬಾಕಿ ಇರುವ ಪ್ರಕರಣಗಳೆಷ್ಟು ; (ವರ್ಷಾವಾರು ವಿವರ ನೀಡುವುದು)

(ಈ) ಮಹಿಳಾ ಮತ್ತು ಮಕ್ಕಳ ದೌರ್ಜನ್ಯ ನಡೆದ ಸಂದರ್ಭದಲ್ಲಿ, ತನಿಖೆಯನ್ನು ಯಾವ ಕಾಲಮಿತಿಯಲ್ಲಿ ಮುಕ್ತಾಯಗೊಳಿಸಲು ಮತ್ತು ತಪ್ಪಿತಸ್ಥರು ಶಿಕ್ಷೆಯಿಂದ ಪಾರಾಗದಂತೆ ಮಾಡಲು ಸರ್ಕಾರ/ಇಲಾಖೆಯ ಕಾರ್ಯಸೂಚಿಯೇನು ;

(ಉ) ಕಳೆದ ೪ ವರ್ಷದಲ್ಲಿ ಕೋಮುಗಲಭೆ, ಅತ್ಯಾಚಾರ, ಕೊಲೆಗಳಿಗೆ ಸಂಬಂಧಿಸಿದಂತೆ ಎಷ್ಟು ಪ್ರಕರಣದಲ್ಲಿ ಪರಿಹಾರ ನೀಡಲಾಗಿದೆ ; ಎಷ್ಟು ಪ್ರಕರಣದಲ್ಲಿ ಪರಿಹಾರ ನೀಡಲು ಬಾಕಿಯಿದೆ ; ಕಡಿಮೆ ಪರಿಹಾರ ಮೊತ್ತ ಮತ್ತು ಪರಿಹಾರ ನೀಡುವಲ್ಲಿ ಆಗುತ್ತಿರುವ ವಿಳಂಬಕ್ಕೆ ಕಾರಣಗಳೇನು ;

(ಊ) ಅತ್ಯಾಚಾರ, ಮಹಿಳಾ ಮತ್ತು ಮಕ್ಕಳ ದೌರ್ಜನ್ಯ ಪ್ರಕರಣ ಹಾಗೂ ಕೊಲೆ, ಕೋಮುಗಲಭೆ ಪ್ರಕರಣಗಳಲ್ಲಿ ಸಂತ್ರಸ್ಥರಿಗೆ ಕಾಲಮಿತಿಯಲ್ಲಿ ಪರಿಹಾರ ಒದಗಿಸುವ ಹಾಗೂ ಪರಿಹಾರ ಮೊತ್ತ ಹೆಚ್ಚಿಸುವ ಕುರಿತು ಸರ್ಕಾರದ ನಿಲುವೇನು ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಹೆಚ್ಚೆಚ್ಚು ಉದ್ಯೋಗ ಮೇಳ ಏರ್ಪಾಡು ಮಾಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೨೯ (೧೩೮೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳಾವುವು ; (ಕಳೆದ ೩ ವರ್ಷದಲ್ಲಿ ಕಾಯ್ದಿರಿಸಿದ ಖರ್ಚಾದ ಅನುದಾನವೆಷ್ಟು ; ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಮತ್ತು ಖರ್ಚಾದ ಅನುದಾನವೆಷ್ಟು ;

(ಆ) ಕಳೆದ ೨ ವರ್ಷದಲ್ಲಿ ಸರ್ಕಾರದಿಂದ ನಡೆದ ಉದ್ಯೋಗ ಮೇಳದ ಸಂಖ್ಯೆ ಎಷ್ಟು ; ಎಲ್ಲೆಲ್ಲಿ ಉದ್ಯೋಗ ಮೇಳ ಮಾಡಲಾಗಿದೆ ; ಖರ್ಚಾದ ಅನುದಾನವೆಷ್ಟು ; ಭಾಗವಹಿಸಿದ ಉದ್ಯೋಗಾಕಾಂಕ್ಷಿಗಳ ಸಂಖ್ಯೆ ಮತ್ತು ನೀಡಿದ ಉದ್ಯೋಗಗಳ ಸಂಖ್ಯೆ ಎಷ್ಟು ;

(ಇ) ಪ್ರತಿ ಜಿಲ್ಲಾ ಮಟ್ಟದಲ್ಲಿ ಉದ್ಯೋಗ ಮೇಳ ಏರ್ಪಾಡು ಮಾಡಲು ಸರ್ಕಾರ ಯೋಜನೆ ರೂಪಿಸುವುದೇ ; ಯಾವಾಗ ಕ್ರಮ ಕೈಗೊಳ್ಳಲಿದೆ ;

(ಈ) ಖಾಸಗಿ ಸಂಘ ಸಂಸ್ಥೆಗಳ ಮೂಲಕ ಉದ್ಯೋಗ ಮೇಳ ನಡೆಸಲು ಸರ್ಕಾರ ಸಹಾಯಧನ ನೀಡುವುದೇ ; ಎಷ್ಟು ಮೊತ್ತ ನೀಡಲಾಗುವುದು ?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ವೈನರಿಗಳ ಮಾಹಿತಿ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೩೦ (೧೨೩೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ವೈನರಿಗಳ ಸಂಖ್ಯೆ ಎಷ್ಟು ; (ವೈನರಿಗಳ ಹೆಸರು, ಸಾಮರ್ಥ್ಯ, ವಿಳಾಸದ ಮಾಹಿತಿ ನೀಡುವುದು)

(ಆ) ಸದರಿ ವೈನರಿಗಳಲ್ಲಿ ವೈನ್ ತಯಾರಿಸಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ರೈತರು ಬೆಳೆಯುವ ದ್ರಾಕ್ಷಿ ಖರೀದಿಸಿ ದ್ರಾಕ್ಷಾರಸ ಬಳಸಿಯೇ ವೈನ್ ತಯಾರಿಸಬೇಕೆಂಬ ನಿಯಮ ಹೇರಲಾಗಿದೆಯೇ ;

(ಈ) ಇತ್ತೀಚಿನ ದಿನಗಳಲ್ಲಿ ಕೆಲ ವೈನರಿಗಳು ದ್ರಾಕ್ಷಿ ಬಳಸದೆ ಬರಿ ನೀರು ಮತ್ತು ಫ್ಲೇವರ್ ಬಳಸಿ ವೈನ್ ಉತ್ಪಾದಿಸಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವುಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಉ) ಈ ರೀತಿ ನಷ್ಟ ಉಂಟು ಮಾಡಿರುವ ಎಷ್ಟು ವೈನರಿಗಳ ಮೇಲೆ ದಾಳಿ ನಡೆಸಿ ಕೇಸು ದಾಖಲಿಸಿ ದಂಡ ವಿಧಿಸಲಾಗಿದೆ ? (ಪ್ರಕರಣವಾರು ವಿವರ ನೀಡುವುದು)

## ವಿಧಾನಸೌಧವನ್ನು ಪ್ರವಾಸಿ ತಾಣವೆಂದು ವರ್ಗೀಕರಿಸಿದ ಮಾಹಿತಿ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೩೧ (೧೨೩೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಪ್ರವಾಸಿಗರು ನೋಡಬಹುದಾದ ಪ್ರೇಕ್ಷಣೀಯ ಸ್ಥಳಗಳು ಯಾವುವು ;

(ಆ) ವಿಧಾನಸೌಧವನ್ನು ಪ್ರವಾಸಿ ತಾಣವೆಂದು ವರ್ಗೀಕರಿಸಲಾಗಿದೆಯೇ ; (ವಿವರ ನೀಡುವುದು)

(ಇ) ವಿಧಾನಸೌಧದ ಕ್ಯಾಬಿನೆಟ್ ಕೊಠಡಿಗೆ ಸಚಿವರುಗಳು ಹೊರತಾಗಿ ಬೇರೆಯವರಿಗೆ ಪ್ರವೇಶ ಇಲ್ಲದಿದ್ದರೂ ಅಪರೂಪದ ವಸ್ತುಗಳನ್ನು ಅಲ್ಲಿ ಪ್ರದರ್ಶನಕ್ಕಿಡಲು ಕಾರಣವೇನು ;

(ಈ) ಪ್ರವಾಸಿಗರಿಗೆ ಮತ್ತು ವಿಧಾನಸೌಧ ಸಂದರ್ಶನಕ್ಕೆ ಬರುವ ದೇಶ–ವಿದೇಶಗಳ ಗಣ್ಯರಿಗೆ ಇಂತಹ ಅಪರೂಪದ ವಸ್ತುಗಳನ್ನು ವೀಕ್ಷಿಸಲು ಸಹಕಾರಿಯಾಗುವಂತೆ, ಅವುಗಳನ್ನು ಬೇರೊಂದು ಕೊಠಡಿಯಲ್ಲಿ ಪ್ರದರ್ಶನಕ್ಕೆ ಇಡಲು ವ್ಯವಸ್ಥೆ ಮಾಡಲಾಗುವುದೆ ? (ವಿವರ ನೀಡುವುದು)

## ಬೆಂಗಳೂರು ನಗರದಲ್ಲಿರುವ ಫ್ಲೈಓವರ್‌ಗಳ ಮಾಹಿತಿ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೩೨ (೧೨೩೪) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಇರುವ ಫ್ಲೈಓವರ್‌ಗಳ ಸಂಖ್ಯೆ ಎಷ್ಟು ; (ರಸ್ತೆಗಳ ವಿವರ ನೀಡುವುದು)

(ಆ) ಈ ಫ್ಲೈಓವರ್‌ಗಳ ಉಸ್ತುವಾರಿಯನ್ನು ಯಾವ ಯಾವ ಇಲಾಖೆಗಳು ನಿರ್ವಹಿಸುತ್ತಿವೆ ;

(ಇ) ಈ ಫ್ಲೈಓವರ್‌ಗಳ ನಿರ್ವಹಣೆಯನ್ನು ಯಾವ ರೀತಿ ಮಾಡಲಾಗುತ್ತಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಈ ಫ್ಲೈಓವರ್‌ಗಳು ಸೂಕ್ತ ನಿರ್ವಹಣೆಯಿಲ್ಲದೆ, ಪಿಲ್ಲರ್‌ಗಳಲ್ಲಿ, ಗೋಡೆಗಳಲ್ಲಿ ಗಿಡ ಮರಗಳು ಬೆಳೆದು ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಯಾವ ಯಾವ ಫ್ಲೈಓವರ್‌ಗಳಲ್ಲಿ ಎಷ್ಟು ಜಾತಿಯ ಗಿಡ ಮರಗಳು ಬೆಳೆದು ನಿಂತಿವೆ ; (ಸಂಪೂರ್ಣ ವಿವರ ನೀಡುವುದು)

(ಊ) ಫ್ಲೈಓವರ್‌ಗಳ ಮೇಲೂ ರಸ್ತೆಗುಂಡಿ ತಲೆದೋರಿ, ವಾಹನ ಸವಾರರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

## ಬೆಂಗಳೂರು ನಗರದ ಉದ್ಯಾನವನಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೫೩೩ (೧೩೨೦) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಉದ್ಯಾನವನಗಳೆಷ್ಟು ; ಅವುಗಳಲ್ಲಿ ಗುಣಮಟ್ಟದ ಉದ್ಯಾನವನಗಳು ಯಾವುವು ; (ವಿವರ ನೀಡುವುದು)

(ಆ) ಬೆಂಗಳೂರು ನಗರದಲ್ಲಿ ಅತ್ಯುತ್ತಮ ದರ್ಜೆಯ ಉದ್ಯಾನವನಗಳು ಇದ್ದರೂ ಸರಿಯಾದ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಉತ್ತಮ ಉದ್ಯಾನವನಗಳನ್ನು ನವೀಕರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ತುಮಕೂರು ಜಿಲ್ಲೆಯಲ್ಲಿನ ಕಳ್ಳತನ ಪ್ರಕರಣಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೫೩೪ (೧೩೧೮) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ನಡೆದ ಮನೆಗಳ್ಳತನ ಮತ್ತು ಸರಗಳ್ಳತನ ಹಾಗೂ ದಾಖಲಾದ ಇತರೆ ಪ್ರಕರಣಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಠಾಣಾವಾರು, ಪ್ರಕರಣವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಇದುವರೆವಿಗೂ ಪತ್ತೆಯಾದ ಮತ್ತು ಪತ್ತೆಯಾಗದೆ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಠಾಣಾವಾರು ಪ್ರಕರಣಗಳ ಮಾಹಿತಿ ಒದಗಿಸುವುದು)

(ಇ) ಇದುವರೆಗೂ ಪತ್ತೆ ಹಚ್ಚಿ ವಾರಸುದಾರರಿಗೆ/ಮಾಲೀಕರಿಗೆ ಪತ್ತೆ ಮಾಡಲಾದ ವಸ್ತುಗಳನ್ನು ಹಿಂತಿರುಗಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು ಮತ್ತು ಇದುವರೆವಿಗೂ ಪತ್ತೆ ಹಚ್ಚದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ಹಾಗೆ ಕೆಲವು ಪ್ರಕರಣಗಳನ್ನು ಪತ್ತೆ ಹಚ್ಚದೇ ಇರಲು ಕಾರಣಗಳೇನು ? (ವಿವರ ನೀಡುವುದು)

## ತುಮಕೂರು ಜಿಲ್ಲೆಯಲ್ಲಿರುವ ಪೋಲೀಸ್ ವಸತಿ ಗೃಹಗಳ ದುರಸ್ಥಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೫೩೫ (೧೩೧೯) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯಲ್ಲಿ ಪೋಲೀಸ್ ಸಿಬ್ಬಂದಿಗಳಿಗೆ ವಸತಿ ಗೃಹಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದಯೇ ;

(ಆ) ತುಮಕೂರು ಜಿಲ್ಲೆಯಲ್ಲಿ ಹಾಲಿ ಇರುವ ಪೋಲೀಸ್ ವಸತಿ ಗೃಹಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಪ್ರಸಕ್ತ ಇರುವ ವಸತಿ ಗೃಹಗಳು ವಾಸಿಸಲು ಯೋಗ್ಯವಾಗಿಲ್ಲದಿರುವುದರಿಂದ, ಅವುಗಳ ದುರಸ್ಥಿಗಾಗಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಈ) ಪ್ರಸಕ್ತ ಸಾಲಿನಲ್ಲಿ ತುಮಕೂರು ಜಿಲ್ಲೆಯ ಯಾವ ಯಾವ ಸ್ಥಳಗಳಲ್ಲಿ ಎಷ್ಟೆಷ್ಟು ಹೊಸ ವಸತಿ ಗೃಹಗಳನ್ನು ನಿರ್ಮಿಸುವ ಉದ್ದೇಶ ಸರ್ಕಾರಕ್ಕಿದೆ ;

(ಉ) ಈಗಾಗಲೇ ಜಾಗವನ್ನು ಗುರುತಿಸಲಾಗಿದೆಯೇ ?

## ರಾಜ್ಯದ ಬಡನೇಕಾರರಿಗೆ ಕೌಶಲ್ಯಾಭಿವೃದ್ಧಿ ಉದ್ಯಮ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೫೩೬ (೧೩೨೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೇಕಾರರು ೬೦ ಲಕ್ಷಕ್ಕೂ ಹೆಚ್ಚು ಜನ ಸಂಖ್ಯೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರತಿಯೊಬ್ಬ ಮನುಷ್ಯನ ಮಾನವನ್ನು ಮುಚ್ಚುವ ಪ್ರಯತ್ನ ಮಾಡಲು ಹೋಗಿ ನೇಕಾರನು ಬೆತ್ತಲೆಯಾಗಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಬಟ್ಟೆಯನ್ನು ತಯಾರು ಮಾಡಲು ಇತ್ತೀಚಿನ ಕೌಶಲ್ಯಾಭಿವೃದ್ಧಿ ಉದ್ಯಮಶೀಲನೆ ಇಲಾಖೆಯಿಂದ ರಾಜ್ಯದ ಬಡನೇಕಾರರಿಗೆ ಹೊಸ ಯೋಜನೆಗಳನ್ನು ತಂದು ನೇಕಾರರ ಜೀವನೋಪಾಯಕ್ಕೆ ದಾರಿ ಮಾಡಲು ಸರ್ಕಾರ ಯೋಚಿಸಿದೆಯೇ ;

(ಈ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಈ ಇಲಾಖೆ ಮುಖಾಂತರ ರಾಜ್ಯದ ಬಡ ನೇಕಾರರ ಕೂಲಿ ಕಾರ್ಮಿಕ ನೇಕಾರರಿಗೆ ಯಾವ ಯಾವ ಯೋಜನೆ ತರಲಾಗುವುದು ; ಈ ವರ್ಷದ ಆಯವ್ಯಯದಲ್ಲಿ ಹೆಚ್ಚಿನ ಹಣ ನೀಡಲು ಸರ್ಕಾರ ಮುಂದಾಗುವುದೆ ?

## ಬೆಂಗಳೂರು ನಗರದ ನೇಕಾರರಿಗೆ ರೂಪಿಸಲಾಗಿರುವ ಯೋಜನೆಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೫೩೭ (೧೩೧೭) ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೆಂಗಳೂರು ನಗರದ ಬಡ ನೇಕಾರರಿಗೆ ಅನುಷ್ಠಾನಗೊಳಿಸಲಾಗಿರುವ ಯೋಜನೆಗಳಾವುವು ; ಅವುಗಳಿಗೆ ಎಷ್ಟು ಅನುದಾನವನ್ನು ನೀಡಲಾಗಿದೆ ;

(ಆ) ಈ ಯೋಜನೆಯಲ್ಲಿ ಬಡ ಕೂಲಿ ಕಾರ್ಮಿಕ ನೇಕಾರರಿಗೆ ರೂಪಿಸಿರುವ ಯೋಜನೆಗಳಾವುವು ;

(ಇ) ವಸತಿ ರಹಿತ ಕೂಲಿ ಕಾರ್ಮಿಕ ನೇಕಾರರಿಗೆ ವಸತಿ ಕಲ್ಪಿಸಲು ತೆಗೆದುಕೊಂಡಿರುವ ಯೋಜನೆಗಳಾವುವು ;

(ಈ) ಹಲವಾರು ಬಾರಿ ಬಡ ನೇಕಾರರು ಅರ್ಜಿ ಸಲ್ಲಿಸಿದ್ದು, ಅರ್ಜಿಗಳಿಗೆ ಸ್ಪಂದಿಸದಿರಲು ಕಾರಣಗಳೇನು ; (ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿವರ ನೀಡುವುದು)

(ಉ) ವಿಶೇಷ ಯೋಜನೆಯಾಗಿ ಬಡ ನೇಕಾರರಿಗೆ ರೂಪಿಸಿರುವ ಕಾರ್ಯಕ್ರಮಗಳೇನು ? (ವಿವರ ನೀಡುವುದು)

## ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ವರ್ಗದ ಉದ್ದಿಮೆದಾರರ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೩೮ (೧೩೭೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಗರಿಷ್ಟ ಎಷ್ಟು ಮೊತ್ತದ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ ;

(ಆ) ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದ ಫಲಾನುಭವಿಗಳು ಕನಿಷ್ಟ ಎಷ್ಟು ಮೊತ್ತದ ಸಾಲವನ್ನು ಪಡೆಯಲು ಅರ್ಹರಿರುತ್ತಾರೆ ;

(ಇ) ಸಾಲದ ಕನಿಷ್ಠ ಮೊತ್ತ ನಿಗದಿಯಿಂದ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸಾಲದ ಕನಿಷ್ಠ ಮೊತ್ತವನ್ನು ಕಡಿಮೆ ಮಾಡುವ ಪ್ರಸ್ತಾವನೆ ಸರ್ಕಾರದಲ್ಲಿದೆಯೇ ;

(ಉ) ಚಿಕ್ಕಮಗಳೂರು ಜಿಲ್ಲೆಯಲ್ಲಿ ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಫಲಾನುಭವಿಗಳಿಗೆ ಸಾಲ ಸೌಲಭ್ಯ ವಿತರಿಸಲಾಗಿದೆ ; ವಿತರಿಸಲಾಗಿರುವ ಒಟ್ಟು ಮೊತ್ತವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ರೈತರು ಸಹಕಾರ ಸಂಘಗಳಿಂದ ಮತ್ತು ಬ್ಯಾಂಕ್‌ಗಳಿಂದ ಪಡೆದಿರುವ ಸಾಲದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೩೯ (೧೩೭೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ರೈತರು ಇಲ್ಲಿಯವರೆಗೆ ಸಹಕಾರ ಸಂಘಗಳಿಂದ ಮತ್ತು ಬ್ಯಾಂಕ್‌ಗಳಿಂದ ಪಡೆದಿರುವುದು ಕೃಷಿ ಸಾಲದ ಮೊತ್ತವೆಷ್ಟು ; (ಸಹಕಾರ ಮತ್ತು ಇತರೆ ಬ್ಯಾಂಕ್‌ಗಳ ಪಟ್ಟಿಯನ್ನು ಪ್ರತ್ಯೇಕವಾಗಿ ನೀಡುವುದು)

(ಆ) ರಾಜ್ಯದಲ್ಲಿ ಭೀಕರ ಬರಗಾಲವಿರುವುದರಿಂದ ರಾಜ್ಯದ ರೈತರು ೨೦೧೬ನೇ ಸಾಲಿನ ಡಿಸೆಂಬರ್‌ವರೆಗೆ ವ್ಯವಸಾಯ ಸೇವಾ ಸಹಕಾರ ಬ್ಯಾಂಕ್‌ಗಳಿಂದ ಮತ್ತು ಇತರೆ ಬ್ಯಾಂಕ್‌ಗಳಿಂದ ಪಡೆದ ಸಾಲವನ್ನು ಮನ್ನಾ ಮಾಡಲಾಗುವುದೇ ;

(ಇ) ಚಿಕ್ಕಮಗಳೂರು ಜಿಲ್ಲೆಯಾದ್ಯಂತ ರೈತರು ವ್ಯವಸಾಯ ಸೇವಾ ಸಹಕಾರ ಬ್ಯಾಂಕುಗಳಿಂದ ಮತ್ತು ಇತರ ಬ್ಯಾಂಕ್‌ಗಳಿಂದ ಪಡೆದಿರುವ ಒಟ್ಟು ಸಾಲದ ಮೊತ್ತವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಇತ್ತೀಚೆಗೆ ನಡೆದಿರುವ ಆದಾಯ ತೆರಿಗೆ ಇಲಾಖೆಯ ದಾಳಿಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೪೦ (೧೩೭೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ನಡೆದಿರುವ ಆದಾಯ ತೆರಿಗೆ ಇಲಾಖೆಯ ದಾಳಿಯಿಂದ ಸರ್ಕಾರಕ್ಕೆ ಬಂದ ಹಣ ಎಷ್ಟು ; ಇವರು ಯಾವ ಯಾವ ಇಲಾಖೆಗೆ ಸಂಬಂಧಿಸಿದ ಅಧಿಕಾರಿಗಳಾಗಿರುತ್ತಾರೆ ;

(ಆ) ಈ ಅಧಿಕಾರಿಗಳ ಮೇಲೆ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಗೃಹ ಇಲಾಖೆಯಲ್ಲಿ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಕ್ಕೆ ಸೇರಿದ ಪೊಲೀಸ್ ಇನ್ಸ್‌ಪೆಕ್ಟರ್ ಮತ್ತು ಡಿ.ವೈ.ಎಸ್.ಪಿ. ಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೪೧ (೧೭೫೫) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹ ಇಲಾಖೆಯಲ್ಲಿ ಒಟ್ಟು ಎಷ್ಟು ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡಕ್ಕೆ ಸೇರಿದ ಪೊಲೀಸ್ ಇನ್ಸ್‌ಪೆಕ್ಟರ್ ಮತ್ತು ಡಿ.ವೈ.ಎಸ್.ಪಿ. (ಸಿವಿಲ್)ಗಳು ಕಾರ್ಯನಿರ್ವಹಿಸುತ್ತಿದ್ದಾರೆ ; (ವಿವರದೊಂದಿಗೆ ಮಾಹಿತಿ ನೀಡುವುದು)

(ಆ) ಈ ಅಧಿಕಾರಿಗಳಲ್ಲಿ ಕಳೆದ ಮೂರು ವರ್ಷಗಳಿಂದ ಕಾರ್ಯಕಾರಿ (Executive) ಮತ್ತು ಕಾರ್ಯಕಾರೇತರ (Non-Executive) ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು ; (ವಿವರದೊಂದಿಗೆ ಮಾಹಿತಿ ನೀಡುವುದು)

(ಇ) ಗೃಹ ಇಲಾಖೆಯಲ್ಲಿರುವ ಬ್ಯಾಕ್‌ಲಾಗ್ ಹುದ್ದೆಗಳೆಷ್ಟು ; ಇದರಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಸಚಿವಾಲಯದ ಇಲಾಖೆಗಳಲ್ಲಿ ಕಡತಗಳ ವಿಲೇವಾರಿಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೪೨ (೧೭೫೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಚಿವಾಲಯದ ಇಲಾಖೆಗಳಲ್ಲಿ ಕಡತಗಳ ವಿಲೇವಾರಿಯಲ್ಲಿ ವಿಳಂಬವಾಗುತ್ತಿರುವುದರಿಂದ, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಡತ ವಿಲೇವಾರಿಗೆ ಕಾಲಮಿತಿ ನಿಗದಿಪಡಿಸಲಾಗಿದೆಯೇ ; ವಿಷಯ ನಿರ್ವಾಹಕರಿಂದ ಕಾರ್ಯದರ್ಶಿಗಳ ಮಟ್ಟದವರೆಗೆ ಎಷ್ಟೆಷ್ಟು ಅವಧಿಯಲ್ಲಿ ಕಡತ ವಿಲೇವಾರಿ ಮಾಡಬೇಕು ಎಂಬ ಬಗ್ಗೆ ನಿಯಮಾವಳಿ ರಚಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕೂಡಲೇ ಈ ನಿಯಮ ತರಲು ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಆಯಾ ಇಲಾಖೆಗಳಲ್ಲಿನ ಕಡತ ವಿಲೇವಾರಿ ಸಮರ್ಪಕವಾಗಿ ಆಗುತ್ತಿದೆಯೇ ಇಲ್ಲವೇ ಎಂಬ ಬಗ್ಗೆ ಪರಿಶೀಲಿಸಲು ಯಾವ ವ್ಯವಸ್ಥೆ ಇದೆ ; ತನಿಖೆ ಮಾಡಿ ಆಡಳಿತದಲ್ಲಿ ಸುಧಾರಣೆ ತರಲು ನಿಯೋಜಿಸಲಾಗಿರುವ ಅಧಿಕಾರಿಗಳು ಯಾರು ; ಅವರು ಯಾವ ರೀತಿ ಕ್ರಮ ಕೈಗೊಂಡಿದ್ದಾರೆ ;

(ಈ) ಕಡತಗಳ ಶೀಘ್ರ ವಿಲೇವಾರಿಗೆ ಮತ್ತು ಆಡಳಿತದಲ್ಲಿ ಚುರುಕು ತಂದು ಆಡಳಿತ ಸುಧಾರಣೆಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ?

## ನಶಿಸುತ್ತಿರುವ ಸಮುದ್ರ ಬಾಳೆ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭೪೩ (೧೨೬೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಂಪಿ, ಕಿಷ್ಕಿಂದ ಹಾಗೂ ವಿರೂಪಾಪುರಗಡ್ಡೆ ಪ್ರದೇಶದ ಐತಿಹಾಸಿಕ ಸ್ಮಾರಕಗಳ ವೀಕ್ಷಣೆ ಹಾಗೂ ಅಧ್ಯಯನಕ್ಕೆ ಆಗಮಿಸುವ ವಿದೇಶಿಯರು ಮತ್ತೇರಿಸಿಕೊಳ್ಳಲು ಸಮುದ್ರ ಬಾಳೆ ಬೀಜಗಳನ್ನು ಸೇವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲ್ಲಿಯವರೆಗೆ ಸಮುದ್ರ ಬಾಳೆ ಬೀಜ ಸೇವನೆಯ ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಇ) ಸಮುದ್ರ ಬಾಳೆ ಬೀಜ ಸೇವಿಸಿದ ವ್ಯಕ್ತಿ ಸುಮಾರು ಎರಡು ದಿನಗಳ ಕಾಲ ತನ್ನ ಸ್ಥಿಮಿತ ಕಳೆದುಕೊಳ್ಳುವುದು ನಿಜವೇ ;

(ಈ) ಹೋಟೆಲ್–ರೆಸ್ಟೋರೆಂಟ್‌ಗಳಲ್ಲಿ ಮದ್ಯ–ಸಿಗರೇಟು ಜೊತೆಗೆ ಈಗ ಗಾಂಜಾ ಚರಸ್ ಪೂರೈಕೆಗಾಗಿ ಕಣ್ಣೆದುರೇ ನಡೆಯುವ ಜೊತೆಗೆ ಸಮುದ್ರ

ಬಾಳೆಯ ಬೀಜ ಸೇರ್ಪಡೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಚಾರ್ಜ್‌ಶೀಟ್ ಹಾಕದೆ ೧ ವರ್ಷ ಕಳೆದ ಎಸಿಬಿ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೪೪ (೧೨೬೪) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎಸಿಬಿ ಸ್ಥಾಪನೆಯಾಗಿ ಒಂದು ವರ್ಷ ಪೂರೈಸಿರುವ ಸಂದರ್ಭದಲ್ಲಿ ಇಲ್ಲಿಯವರೆಗೆ ಎಷ್ಟು ಪ್ರಕರಣಗಳು ದಾಖಲಾಗಿವೆ ; ಎಷ್ಟು ಆರೋಪ ಪಟ್ಟಿಗಳು ಸಲ್ಲಿಕೆಯಾಗಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ನೂರಕ್ಕೂ ಹೆಚ್ಚು ಎಫ್‌ಐಆರ್‌ಗಳು ಎಸಿಬಿಯಲ್ಲಿ ದಾಖಲಾಗಿದ್ದು, ಯಾವುದೇ ಆರೋಪ ಪಟ್ಟಿ ಸಲ್ಲಿಕೆಯಾಗದಿರಲು ಕಾರಣವೇನು ;

(ಇ) ಧ್ವನಿ ಮುದ್ರಿಕೆಯ ಪ್ರಮಾಣ ಪತ್ರ ಇಲ್ಲದಿದ್ದರೆ, ನ್ಯಾಯಾಲಯಗಳಲ್ಲಿ ಪ್ರಕರಣಗಳ ವಿಚಾರಣೆಗೆ ಹಿನ್ನಡೆಯಾಗುತ್ತಿರುವುದು ಎಸಿಬಿಯಲ್ಲಿ ಆರೋಪ ಪಟ್ಟಿ ಸಲ್ಲಿಕೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಜ್ಯದಲ್ಲಿ ನಿರುದ್ಯೋಗಿಗಳ ಸಂಖ್ಯೆ ಹೆಚ್ಚುತ್ತಿರುವ ಬಗ್ಗೆ

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೧೫೪೫ (೧೨೮೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಿರುದ್ಯೋಗಿಗಳ ಸಂಖ್ಯೆ ಹೆಚ್ಚುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ನಿರುದ್ಯೋಗಿ ಪದವೀಧರರಿಗೆ ಉದ್ಯೋಗ ಒದಗಿಸಿಕೊಡುವಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ರಾಜ್ಯದಲ್ಲಿರುವ ನಿರುದ್ಯೋಗಿ ಪದವೀಧರರ ಸಂಖ್ಯೆ ಎಷ್ಟು ? (ವರ್ಷಾವಾರು ವಿವರ ನೀಡುವುದು)

## ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೧೫೪೬(೧೨೮೧) ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮವೇನು? (ಹುದ್ದೆವಾರು ವಿವರ ನೀಡುವುದು)

## ಸರ್ಕಾರಿ ನೌಕರರಿಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ ಕುರಿತು

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೪೭(೧೨೮೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕಾಗಿರುವುದು ಕಡ್ಡಾಯವೇ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೂ ಸದರಿ ಪರೀಕ್ಷೆಗೆ ಹಾಜರಾದ ನೌಕರರ ಸಂಖ್ಯೆಯೆಷ್ಟು; ಹಾಗೂ ಉತ್ತೀರ್ಣರಾದವರ ಸಂಖ್ಯೆಎಷ್ಟು;

(ಇ) ಸದರಿ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರೋತ್ಸಾಹ ಧನ ನೀಡಲು ಸರ್ಕಾರ ನಿರ್ಧರಿಸಿದೆಯೇ;

(ಈ) ನಿರ್ಧರಿಸಿದ್ದಲ್ಲಿ, ೨೦೧೨–೨೦೧೩ ರಿಂದ ಇಲ್ಲಿಯವರೆಗೂ ಎಷ್ಟು ನೌಕರರಿಗೆ ಪ್ರೋತ್ಸಾಹ ಧನ ನೀಡಲಾಗಿದೆ? (ವರ್ಷಾವಾರು ಮಾಹಿತಿ ನೀಡುವುದು)

## ಸಹಕಾರ ಸಂಘಗಳ ಮಾಹಿತಿಯನ್ನು ಷೇರುದಾರರು ಪಡೆಯುವ ಕುರಿತು

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೪೮(೧೨೮೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಸಂಘಗಳ ಪೂರ್ಣ ಪ್ರಮಾಣದ ಷೇರುದಾರರು ಸಂಘದ ವ್ಯವಹಾರದ ಬಗ್ಗೆ ಮಾಹಿತಿ ಕೇಳಿದಲ್ಲಿ, ಸಹಕಾರ ಸಂಘದ ಕಾಯ್ದೆ ಪ್ರಕಾರ ಮಾಹಿತಿ ಕೊಡಲು ನಿರಾಕರಿಸಬಹುದೇ;

(ಆ) ಬೆಂಗಳೂರಿನಲ್ಲಿ ಕೆಲವು ಸಹಕಾರ ಸಂಘಗಳ ಸದಸ್ಯರು ಪಡೆಯಲಿಚ್ಛಿಸುವ ಮಾಹಿತಿ ನೀಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸಂಘದ ವ್ಯವಹಾರದ ಬಗ್ಗೆ ಮಾಹಿತಿ ಕೊಡದೆ ಸಂಘದಲ್ಲಿ ನಡೆಯುವ ಅವ್ಯವಹಾರ ಸದಸ್ಯರ ಗಮನಕ್ಕೆ ಬಾರದೆ ಮುಚ್ಚಿ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ರಾಜ್ಯದಲ್ಲಿ ವಿದೇಶಿ ಪ್ರಜೆಗಳು ಕಾನೂನು ಬಾಹಿರ ಕೃತ್ಯದಲ್ಲಿ ತೊಡಗಿರುವ ಕುರಿತು

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೩೪೪(೧೨೮೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವಿದೇಶಿ ಪ್ರಜೆಗಳು ಕಾನೂನು ಬಾಹಿರ ಕೃತ್ಯಗಳಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ೨೦೧೨ರಿಂದ ಇಲ್ಲಿಯವರೆಗೆ ಅವರ ವಿರುದ್ಧ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವರ್ಷವಾರು ಮಾಹಿತಿ ನೀಡುವುದು)

(ಇ) ವೀಸಾ ಅವಧಿ ಮುಗಿದಿದ್ದರೂ ಸಹ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳ ಸಂಖ್ಯೆ ಎಷ್ಟು;

ಈ) ಈ ಅಕ್ರಮ ವಲಸಿಗರನ್ನು ಗಡಿಪಾರು ಮಾಡಲು ಸರ್ಕಾರ ನಿರ್ಧರಿಸಿದೆಯೇ; ನಿರ್ಧರಿಸಿದ್ದಲ್ಲಿ, ಇವರ ಗಡಿಪಾರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಉ) ಇಲ್ಲಿಯವರೆಗೂ, ಎಷ್ಟು ಜನ ಅಕ್ರಮ ವಲಸಿಗರನ್ನು ಗಡಿಪಾರು ಮಾಡಲಾಗಿದೆ?

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಸಿಬ್ಬಂದಿಯ ಕೊರತೆ ಕುರಿತು

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೫೦(೧೨೮೯) ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಸಿಬ್ಬಂದಿಯ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಒಟ್ಟಾರೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಯಾವ ವರ್ಷದಲ್ಲಿ ಎಷ್ಟು ಜನಸಂಖ್ಯೆಯ ಆಧಾರದ ಮೇಲೆ ಈ ಹುದ್ದೆಗಳನ್ನು ಮಂಜೂರು ಮಾಡಲಾಗಿತ್ತು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು;

(ಈ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

# ಖಾಸಗಿ ವಾಣಿಜ್ಯ ಸಂಕೀರ್ಣಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೫೫೧(೧೩೬೯) ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಖಾಸಗಿ ವಾಣಿಜ್ಯ ಸಂಕೀರ್ಣಗ ಸಂಖ್ಯೆ ಎಷ್ಟು ಮತ್ತು ಯಾವುವು; (ಕಂದಾಯ ವಲಯವಾರು ವಿವರ ನೀಡುವುದು)

(ಆ) ಈ ಖಾಸಗಿ ವಾಣಿಜ್ಯ ಸಂಕೀರ್ಣಗಳನ್ನು ನಿರ್ಮಿಸುವಾಗ ಸರ್ಕಾರಿ ಜಮೀನುಗಳನ್ನು ಒತ್ತುವರಿ ಮಾಡಿಕೊಂಡು ಸಂಕೀರ್ಣಗಳನ್ನು ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಒತ್ತುವರಿ ಮಾಡಿಕೊಂಡ ವಾಣಿಜ್ಯ ಸಂಕೀರ್ಣಗಳನ್ನು ನಿರ್ಮಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಅವು ಯಾವುವು; (ವಿವರಗಳನ್ನು ನೀಡುವುದು)

(ಇ) ಈ ರೀತಿ ಸರ್ಕಾರಿ ಜಮೀನುಗಳನ್ನು ಒತ್ತುವರಿ ಮಾಡಿಕೊಂಡು ಸಂಕೀರ್ಣಗಳನ್ನು ನಿರ್ಮಿಸಿರುವವರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಕಳೆದ ಮೂರು ವರ್ಷಗಳಲ್ಲಿ ವಾಣಿಜ್ಯ ಸಂಕೀರ್ಣಗಳ ನಿರ್ಮಾಣದ ಮಂಜೂರಾತಿಗೆ ಇದುವರೆವಿಗೂ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಅವು ಯಾವುವು;

(ಉ) ಇವುಗಳಲ್ಲಿ ಮಂಜೂರಾತಿ ನೀಡಿರುವ ಅರ್ಜಿಗಳ ಹಾಗೂ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ಯಾವುವು; (ಕಂದಾಯ ವಲಯವಾರು ವಿವರ ನೀಡುವುದು)

(ಊ) ಈ ವಾಣಿಜ್ಯ ಸಂಕೀರ್ಣಗಳನ್ನು ನಿರ್ಮಾಣ ಮಾಡಲು ಅನುಮತಿ ನೀಡುವಾಗ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅನುಸರಿಸಿರುವ ಮಾರ್ಗಸೂಚಿಗಳೇನು; (ಮಾರ್ಗಸೂಚಿಗಳವಾರು ಪ್ರತಿಯನ್ನು ನೀಡುವುದು)

(ಎ) ಈ ವಾಣಿಜ್ಯ ಸಂಕೀರ್ಣ (ಮಾಲ್‌ಗಳು)ಗಳಿಂದ ಪ್ರತಿ ವರ್ಷ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಬರುತ್ತಿರುವ ಆದಾಯದ ಮೊತ್ತವೆಷ್ಟು; (ಮಾಲ್‌ಗಳವಾರು ವಿವರ ನೀಡುವುದು)

(ಏ) ಜನನಿಬಿಡ ಸ್ಥಳಗಳಲ್ಲಿ ಮಾಲ್‌ಗಳನ್ನು ನಿರ್ಮಿಸಿರುವುದರಿಂದ ವಾಹನಗಳ ದಟ್ಟಣೆ ಹೆಚ್ಚಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಸಂಚಾರ ದಟ್ಟಣೆಯನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಹುಕ್ಕಾ ಬಾರ್‌ಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೫೫೨(೧೩೭೧) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಹುಕ್ಕಾ ಬಾರ್‌ಗಳನ್ನು ಆರಂಭಿಸಲು ಇರುವ ಮಾನದಂಡವೇನು;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿಯಮಾನುಸಾರವಾಗಿ ನಡೆಯುತ್ತಿರುವ ಒಟ್ಟು ಹುಕ್ಕಾ ಬಾರ್‌ಗಳ ಸಂಖ್ಯೆ ಎಷ್ಟು; ನಿಯಮಬಾಹಿರವಾಗಿ ನಡೆಯುತ್ತಿರುವ ಹುಕ್ಕಾ ಬಾರ್‌ಗಳ ಸಂಖ್ಯೆ;

(ಇ) ನಿಯಮಬಾಹಿರವಾಗಿ ನಡೆಯುತ್ತಿರುವ ಹುಕ್ಕಾ ಬಾರ್‌ಗಳ ವಿರುದ್ಧ ಸರ್ಕಾರ ಈವರೆಗೆ ತೆಗೆದುಕೊಂಡ ನಿರ್ದಾಕ್ಷಿಣ್ಯ ಕ್ರಮವೇನು?

## ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ನೀಡಲಾಗುತ್ತಿರುವ ಪಿ.ಐ.ಡಿ. ಸಂಖ್ಯೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೫೫೩(೧೯೪೪) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಖಾಸಗಿ ಭೂ ಖಾತೆದಾರರಿಗೆ ಭೂ ಕಂದಾಯ ಪಾವತಿ ಹಾಗೂ ಇತರೆ ಮಾಹಿತಿಗಾಗಿ ನೀಡಲಾಗುವ ಪಿಐಡಿ ಸಂಖ್ಯೆ ನೀಡಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ಈ ವಿಳಂಬದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಿ.ಐ.ಡಿ. ಸಂಖ್ಯೆಯ ಕಡತ ಪೂರ್ಣಗೊಂಡು ಕೇವಲ ವಿತರಣೆಗೆ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ಇವುಗಳ ವಿತರಣೆಗೆ ನಿಗದಿಪಡಿಸಿದ ಕಾಲಮಿತಿ ಯಾವುದು?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಬಕಾರಿ ಇಲಾಖಾ ಕಛೇರಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೫೫೪(೧೯೪೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬-೧೭ನೇ ಸಾಲಿನಲ್ಲಿ ಅಬಕಾರಿ ಇಲಾಖೆಯಿಂದ ರಾಜ್ಯದ ಬೊಕ್ಕಸಕ್ಕೆ ಬಂದ ಆದಾಯವೆಷ್ಟು; (ತಾಲ್ಲೂಕುವಾರು, ಮಾಸಿಕವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಬಕಾರಿ ಇಲಾಖಾ ಕಛೇರಿಗಳು ಎಷ್ಟು; ಅವು ಯಾವುವು; ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಬಕಾರಿ ಇಲಾಖಾ ಕಛೇರಿಗಳು ಎಷ್ಟು; ಅವು ಯಾವುವು; ಇವುಗಳಿಗೆ ಮಾಸಿಕ ನೀಡುವ ಬಾಡಿಕೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ಕಟ್ಟಡ ಮಾಲೀಕರ ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

(ಇ) ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಬಕಾರಿ ಇಲಾಖಾ ಕಛೇರಿಗಳು ಸ್ವಂತ ಕಟ್ಟಡ ಹೊಂದುವಂತೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇಲ್ಲವಾದಲ್ಲಿ, ಕಾರಣವೇನು?

## ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೋಂಗಾರ್ಡ್‌ಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೫೫೫(೧೯೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೋಂಗಾರ್ಡ್‌ನಲ್ಲಿರುವ ವಿವಿಧ ಸ್ತರಗಳ ಹುದ್ದೆಗಳೆಷ್ಟು; ಮತ್ತು ಆ ಹುದ್ದೆಗಳ ನೇಮಕಾತಿಗೆ ಇರಬೇಕಾದ ಅರ್ಹತೆಗಳೇನು; ಆಯ್ಕೆಗೆ ಇರುವ ಮಾರ್ಗಸೂಚಿಗಳೇನು; (ಮಾರ್ಗಸೂಚಿಯ ಪ್ರತಿ ಒದಗಿಸುವುದು)

(ಆ) ರಾಜ್ಯದಲ್ಲಿ ಒಟ್ಟು ಇರುವ ಹೋಂಗಾರ್ಡ್‌ಗಳ ಸಂಖ್ಯೆ ಎಷ್ಟು; ಇವರಲ್ಲಿ ಮಹಿಳೆಯರ ಸಂಖ್ಯೆ ಎಷ್ಟು; ಮತ್ತು ಪುರುಷರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಹೋಂಗಾರ್ಡ್‌ನಲ್ಲಿರುವ ವಿವಿಧ ಸ್ತರಗಳ ಕಮಾಂಡೆಂಟ್ ಹುದ್ದೆಗಳನ್ನು ಹೊಂದಿರುವವರ ಸಂಖ್ಯೆ ಎಷ್ಟು; ಮತ್ತು ತೆರವಿರುವ

ಹುದ್ದೆಗಳೆಷ್ಟು; ಮತ್ತು ಇವರುಗಳಿಗೆ ನೀಡುವ ಸೌಲಭ್ಯ ಮತ್ತು ಸವಲತ್ತುಗಳು ಯಾವುವು; (ಜಿಲ್ಲಾವಾರು, ಹುದ್ದೆವಾರು, ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

(ಈ) ರಾಜ್ಯದಲ್ಲಿನ ಹೋಂಗಾರ್ಡ್‌ನಲ್ಲಿ ವಿವಿಧ ಸ್ತರಗಳ ಕಮಾಂಡೆಂಟ್‌ಗಳಾಗಿ ಹುದ್ದೆ ನಿರ್ವಹಿಸುತ್ತಿರುವವರು ತಮ್ಮ ಅಧಿಕಾರದ ದುರುಪಯೋಗ ಮಾಡುತ್ತಿರುವ ಬಗ್ಗೆ ದೂರುಗಳು ಬಂದಿದೆಯೇ; ಬಂದಿದ್ದಲ್ಲಿ, ಅವು ಯಾವುವು; ಸದರಿ ದೂರುಗಳ ವಿರುದ್ಧ ತೆಗೆದುಕೊಂಡ ಕ್ರಮಗಳೇನು?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಆರ್ಥಿಕ ಅಪರಾಧದಡಿ ಪ್ರಕರಣ ಎದುರಿಸುತ್ತಿರುವ ಸಹಕಾರಿ ಹಾಗೂ ಅಧಿಕಾರಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೫೫೬(೧೨೯೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಸಹಕಾರಿ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದ ಮತ್ತು ಸೇವೆ ಸಲ್ಲಿಸುತ್ತಿರುವ ಆರ್ಥಿಕ ಅಪರಾಧದಡಿಯಲ್ಲಿ ಪ್ರಕರಣಗಳನ್ನು ಎದುರಿಸುತ್ತಿರುವ ಸಿಬ್ಬಂದಿಗಳು ಅಧಿಕಾರಿಗಳು, ನಿರ್ದೇಶಕರುಗಳು ಮತ್ತು ಅಧ್ಯಕ್ಷರುಗಳು ಯಾರು; ಮತ್ತು ಅವರು ಎದುರಿಸುತ್ತಿರುವ ಆರ್ಥಿಕ ಅಪರಾಧಗಳು ಯಾವುವು; (ವರ್ಷವಾರು, ಜಿಲ್ಲಾವಾರು ಸಹಕಾರಿ ಸಂಸ್ಥೆವಾರು, ಪ್ರಕರಣವಾರು ವಿವರ ನೀಡುವುದು)

(ಆ) ಮೇಲೆ ಹೇಳಿದ ಆರ್ಥಿಕ ಅಪರಾಧಿಗಳು ಬೇರೆ ಬೇರೆ ನ್ಯಾಯಾಲಯಗಳಲ್ಲಿ ಹಲವಾರು ವರ್ಷಗಳ ಹಿಂದೆಯೇ ತಡೆಯಾಜ್ಞೆ ಪಡೆದಿದ್ದು ಅವರು ಪಡೆದ ತಡೆಯಾಜ್ಞೆ ಈತನಕ ತೆರವಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ನ್ಯಾಯಾಲಯಗಳು ನೀಡಿದ ತಡೆಯಾಜ್ಞೆಯನ್ನು ತೆರವು ಮಾಡಬೇಕಾದವರು ಆರ್ಥಿಕ ಅಪರಾಧವೆಸಗಿದವರೊಂದಿಗೆ ಶಾಮೀಲಾಗಿರುವುದು

ಮೇಲ್ನೋಟಕ್ಕೆ ಕಂಡು ಬಂದಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಇಲ್ಲವಾದಲ್ಲಿ, ಕಾರಣವೇನು?

## ಬಿ.ಬಿ.ಎಂ.ಪಿ. ಯ ವ್ಯಾಪ್ತಿಯಲ್ಲಿರುವ ಉದ್ಯಾನವನಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೫೭(೧೩೦೬) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಉದ್ಯಾನವನಗಳ ಒಟ್ಟು ಸಂಖ್ಯೆ ಎಷ್ಟು; (ವಲಯವಾರು ವಿವರ ನೀಡುವುದು)

(ಆ) ಬಿಬಿಎಂಪಿ ಸಿಬ್ಬಂದಿಯ ವತಿಯಿಂದ ನಿರ್ವಹಣೆಯಲ್ಲಿರುವ ಉದ್ಯಾನವನಗಳ ಸಂಖ್ಯೆ ಎಷ್ಟು; ಟೆಂಡರ್ ಮೂಲಕ ಅಥವಾ ಖಾಸಗಿಯವರ ಮೂಲಕ ನಿರ್ವಹಣೆಯಲ್ಲಿರುವ ಉದ್ಯಾನವನಗಳ ಸಂಖ್ಯೆ ಎಷ್ಟು; (ಟೆಂಡರ್ ಮೂಲಕ ಪಡೆದುಕೊಂಡಿರುವ ಗುತ್ತಿಗೆದಾರರ ಪೂರ್ಣ ವಿವರ ಹಾಗೂ ಗುತ್ತಿಗೆಯ ಮೊತ್ತದ ವಿವರವನ್ನು ವಲಯವಾರು ನೀಡುವುದು)

(ಇ) ಇನ್ನು ಎಷ್ಟು ಹೊಸ ಉದ್ಯಾನವನಗಳನ್ನು ನಿರ್ಮಿಸಲು ಬಿಬಿಎಂಪಿ ಯೋಜನೆ ಕೈಗೊಂಡಿದೆ? (ವಿವರ ನೀಡುವುದು)

## ವಿವಿಧ ಇಲಾಖೆಗಳ ಜಾಲತಾಣ (Website) ಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೫೮(೧೩೦೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಜಾಲತಾಣ (website)ಗಳು ಕಾರ್ಯ ನಿರ್ವಹಣೆಯಲ್ಲಿರುವುದು ನಿಜವೇ;

(ಆ) ಹಾಗಿದ್ದರೆ, ಒಟ್ಟು ಎಷ್ಟು ಇಲಾಖೆಗಳಲ್ಲಿನ ಜಾಲತಾಣಗಳು ಕಾರ್ಯ ನಿರ್ವಹಿಸುತ್ತಿವೆ; ಒಟ್ಟು ಎಷ್ಟು ಇಲಾಖೆಯ ಜಾಲತಾಣಗಳು ಸರ್ಕಾರದ ಅಡಿಯಲ್ಲಿ ನಿರ್ವಹಣೆಯಲ್ಲಿದೆ; ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ನಿರ್ವಹಣೆಯಲ್ಲಿರುವ ಜಾಲತಾಣಗಳ ಸಂಖ್ಯೆ ಎಷ್ಟು; ಪ್ರತಿ ಇಲಾಖೆಯ ಜಾಲತಾಣಗಳ ನಿರ್ವಹಣೆಗಾಗಿ ಸರ್ಕಾರದಿಂದ ಪ್ರತಿ ವರ್ಷ ಭರಿಸುತ್ತಿರುವ ಹಣವೆಷ್ಟು; ಖಾಸಗಿ ಸಹಭಾಗಿತ್ವದಲ್ಲಿ ನಿರ್ವಹಣೆಯಾಗುತ್ತಿರುವ ಜಾಲತಾಣಗಳ ಪೂರ್ಣ ವಿವರ ನೀಡುವುದು;

(ಇ) ಸರ್ಕಾರದ ಜಾಲತಾಣಗಳ ನಿರ್ವಹಣೆಗಾಗಿ ಖಾಸಗಿ ಸಂಸ್ಥೆಯವರು ಅಥವಾ ಖಾಸಗಿ ಕಂಪನಿಯವರು ಅನುಸರಿಸಬೇಕಾದ ಮಾನದಂಡಗಳೇನು; ಖಾಸಗಿ ಸಂಸ್ಥೆ ಅಥವಾ ಕಂಪನಿಯವರಿಗೆ ಅನುಮತಿ ನೀಡುವ ಅಧಿಕಾರ ಯಾರಿಗೆ ನೀಡಲಾಗಿದೆ? (ವಿವರ ನೀಡುವುದು)

## ಒಳ ಚರಂಡಿಯಿಂದ ಬರುವ ನೀರಿನ ಸಂಸ್ಕರಣೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೫೪(೧೩೦೭) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಳ ಚರಂಡಿಯಿಂದ ಬರುವ ಚರಂಡಿ ನೀರನ್ನು ಮಂಡಳಿಯಿಂದ ಸಂಸ್ಕರಣೆ ಮಾಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ಆ ಚರಂಡಿ ನೀರಿನ ಪ್ರಮಾಣ ಎಷ್ಟು; ಮಂಡಳಿಯಿಂದ ಸಂಸ್ಕರಣೆ ಮಾಡುತ್ತಿರುವ ನೀರಿನ ಪ್ರಮಾಣ ಎಷ್ಟು; ಉಳಿಕೆ ನೀರಿನ ಸಂಸ್ಕರಣಕ್ಕೆ ಮಂಡಳಿಯಿಂದ ತೆಗೆದುಕೊಂಡಿರುವ ಕ್ರಮವೇನು?

## ರಾಜ್ಯದಲ್ಲಿ ಹೆಚ್ಚುತ್ತಿರುವ ಮಹಿಳೆ, ಮಕ್ಕಳ ಮೇಲಿನ ಲೈಂಗಿಕ ಪ್ರಕರಣಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೧೫೬೦(೧೩೦೧) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಹಿಳೆ ಮತ್ತು ಮಕ್ಕಳ ಮೇಲೆ ಲೈಂಗಿಕ ಮತ್ತು ನಾಪತ್ತೆ ಪ್ರಕರಣ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ೨೦೧೪ ರಿಂದ ಇಲ್ಲಿಯವರೆಗೆ ದಾಖಲಾದ ನಾಪತ್ತೆ ಮತ್ತು ಲೈಂಗಿಕ ಪ್ರಕರಣಗಳೆಷ್ಟು; (ಜಿಲ್ಲಾವಾರು/ವರ್ಷವಾರು/ದಿನಾಂಕಗಳೊಂದಿಗೆ ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಪತ್ತೆಯಾದ ಹಾಗೂ ಪತ್ತೆಯಾಗದ ಪ್ರಕರಣಗಳೆಷ್ಟು; (ಜಿಲ್ಲಾವಾರು, ವರ್ಷವಾರು ಸ್ಪಷ್ಟ ಮಾಹಿತಿ ನೀಡುವುದು)

(ಈ) ಪತ್ತೆಯಾಗದ ಪ್ರಕರಣಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸಿ.ಎ. ಸೈಟುಗಳ ಹಂಚಿಕೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೧೫೬೧(೧೩೦೨) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದಿಂದ ಹೊಸದಾಗಿ ಸಿ.ಎ. ಸೈಟುಗಳನ್ನು ಹಂಚುವ ಉದ್ದೇಶ ಸರ್ಕಾರಕ್ಕಿದೆಯೇ; ಹಾಗಿದ್ದಲ್ಲಿ, ಯಾವಾಗ ಹಂಚಿಕೆ ಮಾಡಲಾಗುವುದು;

(ಆ) ಕಳೆದ ೩ ವರ್ಷಗಳಿಂದ ಯಾವ ಯಾವ ಸಮುದಾಯ ಹಾಗೂ ಸಂಬಂಧಪಟ್ಟ ಸಂಸ್ಥೆಗಳಿಗೆ ಹಂಚಿಕೆ ಮಾಡಲಾಗಿದೆ;

(ಇ) ಹಾಗಿದ್ದಲ್ಲಿ, ಪರಿಶಿಷ್ಟ ಸಮುದಾಯ ಹಾಗೂ ಸಂಬಂಧಪಟ್ಟ ಸಂಘಗಳಿಗೆ ಎಷ್ಟು ಸಿ.ಎ. ಸೈಟುಗಳನ್ನು ಹಂಚಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಪ್ರತಿ ಶತ ಹಂಚಿಕೆಯಲ್ಲಿ ಪರಿಶಿಷ್ಟ ಪಂಗಡ ಜನಾಂಗದವರಿಗೆ ಅನ್ಯಾಯವಾಗಿದ್ದರೆ, ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳಲಾಗಿದೆ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಲೈಂಗಿಕ ದೌರ್ಜನ್ಯ ಮೊಕದ್ದಮೆ ದಾಖಲಾಗಿರುವ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)–**

೧೫೬೨(೧೩೯೧) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಲೈಂಗಿಕ ದೌರ್ಜನ್ಯದಡಿಯಲ್ಲಿ (ಪೋಕ್ಸೋ ಕಾಯ್ದೆ) ಕಳೆದ ೪ ವರ್ಷಗಳಿಂದ ಎಷ್ಟು ಮೊಕದ್ದಮೆಗಳು ದಾಖಲಾಗಿರುತ್ತವೆ;

(ಆ) ಲೈಂಗಿಕ ದೌರ್ಜನ್ಯದಡಿಯಲ್ಲಿ ದಾಖಲಾಗಿರುವ ಎಷ್ಟು ಮೊಕದ್ದಮೆಗಳು ಇತ್ಯರ್ಥಗೊಂಡು ಶಿಕ್ಷೆಗೆ ಗುರಿಪಡಿಸಲಾಗಿದೆ; ಹಾಗೂ ಎಷ್ಟು ಮೊಕದ್ದಮೆಗಳು ಇತ್ಯರ್ಥವಾಗದೆ ಉಳಿದಿರುತ್ತದೆ;

(ಇ) ಬೆಂಗಳೂರು ನಗರದಲ್ಲಿ ಎಷ್ಟು ಮೊಕದ್ದಮೆಗಳು ದಾಖಲಾಗಿ ಇತ್ಯರ್ಥಗೊಂಡು ದೌರ್ಜನ್ಯಕ್ಕೆ ಒಳಪಟ್ಟಿರುವವರು ಪರಿಹಾರ ಪಡೆದಿರುತ್ತಾರೆ;

(ಈ) ಲೈಂಗಿಕ ದೌರ್ಜನ್ಯಕ್ಕೆ ಒಳಪಟ್ಟು ಪರಿಹಾರ ಸಿಗದೆ ಇರುವವರಿಗೆ ಪರಿಹಾರ ದೊರಕಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ರಾಜ್ಯದಲ್ಲಿರುವ ನೋಂದಾಯಿತ ಗೃಹ ನಿರ್ಮಾಣ ಸಹಕಾರ ಸಂಘಗಳ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)–**

೧೫೬೩(೧೨೪೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಗೃಹ ನಿರ್ಮಾಣ ಸಹಕಾರ ಸಂಘಗಳು ನೋಂದಾಯಿಸಿಕೊಂಡಿದೆ;

(ಆ) ಇದರಲ್ಲಿ ಎಷ್ಟು ಗೃಹ ನಿರ್ಮಾಣ ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿವೆ; ಹಾಗೂ ಕಾರ್ಯನಿರ್ವಹಿಸದೆ ಇರುವ ಸಂಘಗಳ ಸಂಖ್ಯೆ ಎಷ್ಟು;

(ಇ) ಗೃಹ ನಿರ್ಮಾಣ ಸಹಕಾರ ಸಂಘಗಳಲ್ಲಿ ನಿವೇಶನ ಹಂಚಿಕೆಯಲ್ಲಿ ಭಾರಿ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ನಿಯಂತ್ರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಕೆಲವು ಗೃಹ ನಿರ್ಮಾಣ ಸಹಕಾರ ಸಂಘಗಳಲ್ಲಿ ನೋಂದಾಯಿತ ಸದಸ್ಯರು ನಿವೇಶನ ಪಡೆಯಲು ಪೂರ್ಣ ಹಣ ತುಂಬಿದ್ದರೂ ಸಹ, ಇದುವರೆಗೆ ನಿವೇಶನ ಹಂಚಿಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯ;

(ಉ) ರಾಜ್ಯ ಗೃಹ ನಿರ್ಮಾಣ ಸಹಕಾರ ಸಂಘಗಳ ಮೇಲೆ ಇಲಾಖಾ ವಿಚಾರಣೆ ನಡೆದರೂ ಯಾವುದೇ ಕ್ರಮ ಕೈಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ಒದಗಿಸುವುದು)

## ಬೆಂಗಳೂರು ನಗರದ ಮಾಗಡಿ ರಸ್ತೆ, ಕರ್ನಾಟಕ ಹೌಸಿಂಗ್ ಬೋರ್ಡ್ ಹತ್ತಿರ ಕೆಳಸೇತುವೆ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)–**

೧೫೬೪(೧೨೪೦) ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ಮಾಗಡಿ ರಸ್ತೆ, ಕರ್ನಾಟಕ ಹೌಸಿಂಗ್ ಬೋರ್ಡ್ ಹತ್ತಿರ, ಕೆಳಸೇತುವೆ ನಿರ್ಮಾಣ ಮಾಡಲು ಟೆಂಡರ್ ಕರೆಯಲಾಗಿದ್ದು ಯಾವಾಗ;

(ಆ) ಈ ಕಾಮಗಾರಿ ಕೈಗೊಳ್ಳಲು ಸರ್ಕಾರದ ಅನುಮತಿ ಪಡೆಯಲಾಗಿದೆಯೇ; ಮತ್ತು ಇದರ ವಿಸ್ತೀರ್ಣ ಎಷ್ಟು; ಕಾಮಗಾರಿ ಯಾವ ಹಂತದಲ್ಲಿದೆ; ಮತ್ತು ಎಷ್ಟು ಮೊತ್ತದಲ್ಲಿ ಕಾಮಗಾರಿ ಪೂರ್ಣಗೊಳಿಸಲಾಗುತ್ತದೆ;

(ಇ) ಕಾಮಗಾರಿ ಪೂರ್ಣಗೊಳ್ಳಲು ನಿಗದಿಪಡಿಸಿರುವ ಕಾಲಾವಧಿ ಎಷ್ಟು?

## ‘ನಮ್ಮ ಮೆಟ್ರೊ’ ಯೋಜನೆಯನ್ನು ಮಾಗಡಿ ರಸ್ತೆಯಿಂದ ತಾವರೆಕೆರೆವರೆಗೆ ವಿಸ್ತರಿಸುವ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)–**

೧೫೬೫(೧೨೪೨) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ನಾಗರಿಕರ ಅನುಕೂಲಕ್ಕಾಗಿ ಮತ್ತು ಸಂಚಾರ ಸಮಸ್ಯೆಗಳ ಪರಿಹಾರಕ್ಕಾಗಿ ದಿನೇ ದಿನೇ ಜನಪ್ರಿಯವಾಗುತ್ತಿರುವ ‘ನಮ್ಮ ಮೆಟ್ರೊ’ ಯೋಜನೆಯನ್ನು ಮಾಗಡಿ ಮುಖ್ಯರಸ್ತೆಯಲ್ಲಿರುವ ತಾವರೆಕೆರೆವರೆಗೆ ವಿಸ್ತರಿಸುವ ಯೋಜನೆಯು ಸರ್ಕಾರದ ಮುಂದಿದೆಯೇ;

(ಆ) ಮಾಗಡಿ ಮುಖ್ಯರಸ್ತೆಯ ಅಗ್ರಹಾರ ದಾಸರಹಳ್ಳಿ, ಕಾಮಾಕ್ಷಿ ಪಾಳ್ಯ, ಸುಂಕದಕಟ್ಟೆ, ಅಂಜನಾನಗರ ಹೇರೋಹಳ್ಳಿ, ತಾವರೆಕೆರೆವರೆಗೆ ವಿಸ್ತರಿಸುವುದರಿಂದ, ಈ ಭಾಗದ ಸಂಚಾರ ದಟ್ಟಣೆಯು ನಿವಾರಣೆಯಾಗುವುದಿಲ್ಲವೆ;

(ಇ) ಅದರಿಂದ ೨ನೇ ಹಂತದ ಯೋಜನೆಯನ್ನು ತಾವರೆಕೆರೆವರೆಗೆ ನಮ್ಮ ಮೆಟ್ರೊ ಯೋಜನೆಯನ್ನು ವಿಸ್ತರಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು? (ಪೂರ್ಣ ಮಾಹಿತಿ ಒದಗಿಸುವುದು)

## ಹೆದ್ರಾಬಾದ್–ಕರ್ನಾಟಕದಲ್ಲಿ ಜಾತಿ ನಿಂದನೆ ದಾಖಲಾಗಿರುವ ಮೊಕದ್ದಮೆಗಳ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)–**

೧೫೬೬(೧೨೩೯) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಭಾಗವಾದ ಕಲಬುರಗಿ, ರಾಯಚೂರು, ಯಾದಗಿರಿ, ಕೊಪ್ಪಳ, ಬಳ್ಳಾರಿ ಜಿಲ್ಲೆಗಳಲ್ಲಿ ಕಳೆದ ೫ ವರ್ಷಗಳಿಂದ ಜಾತಿ ನಿಂದನೆ (ಅಟ್ರಾಸಿಟಿ) ಕಾಯ್ದೆಯಡಿಯಲ್ಲಿ ಎಷ್ಟು ಮೊಕದ್ದಮೆಗಳು ದಾಖಲಾಗಿವೆ;

(ಆ) ಯಾವ ಯಾವ ಜಾತಿಯ ಮೇಲೆ ಅಥವಾ ಸಮುದಾಯದ ಮೇಲೆ ಮೊಕದ್ದಮೆಗಳು ದಾಖಲಾಗಿವೆ; (ಪೂರ್ಣ ಮಾಹಿತಿ ಒದಗಿಸುವುದು)

(ಇ) ಇದರಲ್ಲಿ ಎಷ್ಟು ಜಾತಿ ನಿಂದನೆ (ಅಟ್ರಾಸಿಟಿ) ಮೊಕದ್ದಮೆಗಳು ದಾಖಲಾಗಿ ಶಿಕ್ಷೆಗೆ ಒಳಗಾಗಿರುವವರ ಸಂಖ್ಯೆ ಎಷ್ಟು? (ಮಾಹಿತಿ ಒದಗಿಸುವುದು)

## ಬೆಂಗಳೂರು ಬಸವೇಶ್ವರ ವೃತ್ತದಿಂದ ಹೆಬ್ಬಾಳದ ಮೇಲ್ಸೇತುವೆವರೆಗೆ ಉಕ್ಕಿನ ಸೇತುವೆ ನಿರ್ಮಿಸುವ ಯೋಜನೆ ಕೈಬಿಟ್ಟಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ)–**

೧೫೬೭(೧೩೧೫) ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಬಸವೇಶ್ವರ ವೃತ್ತದಿಂದ ಹೆಬ್ಬಾಳದ ಎತ್ತರಿಸಿದ ಮೇಲ್ಸೇತುವೆವರೆಗಿನ ಉಕ್ಕಿನ ಸೇತುವೆ ನಿರ್ಮಾಣ ಯೋಜನೆಯ ಕುರಿತು ಪೂರ್ಣ ವಿವರ ನೀಡುವುದು;

(ಆ) ಸದರಿ ನಿರ್ಮಾಣ ಯೋಜನೆಯನ್ನು ಸರ್ಕಾರ ಕೈಬಿಟ್ಟಿರುವುದು ನಿಜವೇ; ಯೋಜನೆಯನ್ನು ಕೈಬಿಟ್ಟಿದ್ದಲ್ಲಿ, ಕಾರಣವೇನು;

(ಇ) ಸದರಿ ರಸ್ತೆಯಲ್ಲಿನ ವಾಹನ ದಟ್ಟಣೆಯ ಸಮಸ್ಯೆಗೆ ಪರಿಹಾರವೇನು? (ವಿವರ ನೀಡುವುದು)

## ರಾಜ್ಯದ ಮೇಲಿನ ಸಾಲದ ಹೊರೆ ಹೆಚ್ಚಾಗುತ್ತಿರುವ ಕುರಿತು ಹಾಗೂ Gross State Domestic Product ಬೆಳವಣಿಗೆಯು ಕುಂಠಿತವಾಗುತ್ತಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ)–**

೧೫೬೮(೧೩೧೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ರಾಜ್ಯದ ಮೇಲಿನ ಸಾಲದ ಪ್ರಮಾಣವೆಷ್ಟು; ಎಷ್ಟು ಸಾಲವನ್ನು ತೀರಿಸಲಾಗಿದೆ; (ಕಳೆದ ಮೂರು ವರ್ಷಗಳ ವಿವರ ನೀಡುವುದು)

(ಆ) ಪ್ರಸ್ತುತ ಎಷ್ಟು ಸಾಲ ಪಡೆಯಲು ರಾಜ್ಯಕ್ಕೆ ಅವಕಾಶವಿದೆ; ಕಳೆದ ಮೂರು ವರ್ಷಗಳ ಅಂಕಿ–ಅಂಶಗಳ ಸಂಕ್ಷಿಪ್ತ ವಿವರ ನೀಡುವುದು;

(ಇ) ಕಳೆದ ಮೂರು ವರ್ಷಗಳ Gross State Domestic Product (G.S.D.P) ಬೆಳವಣಿಗೆಯ ವಿವರ ನೀಡುವುದು; ಈ ಸಾಲಿನಲ್ಲಿ ನಿರೀಕ್ಷಿತ Gross State Domestic Product ಬೆಳವಣಿಗೆಯ ಪ್ರಮಾಣವೇನು; ನಿರೀಕ್ಷಿತ ಮಟ್ಟವನ್ನು ತಲುಪಲು ಸಾಧ್ಯವೇ? (ವಿವರ ನೀಡುವುದು)

## ರಾಜ್ಯದಲ್ಲಿ ಬಿಟ್ ಕಾಯಿನ್ ದಂಧೆ ಹೆಚ್ಚುತ್ತಿರುವ ಕುರಿತು ಹಾಗೂ ಇದನ್ನು ತಡೆಗಟ್ಟಲು ತೆಗೆದುಕೊಂಡಿರುವ ಕ್ರಮ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ)–**

೧೫೬೯(೧೩೧೪) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿಟ್ ಕಾಯಿನ್ ದಂಧೆ ಎಂದರೇನು ವಿವರಿಸುವುದು;

(ಆ) ಇಡೀ ದೇಶದಲ್ಲಿ ಹಾಗೂ ನಮ್ಮ ರಾಜ್ಯದಲ್ಲಿಯೂ ಬಿಟ್ ಕಾಯಿನ್ ದಂಧೆ ನಡೆಯುತ್ತಿರುವುದು ನಿಜವೇ;

(ಇ) ರಾಜ್ಯದ ಎಲ್ಲೆಲ್ಲಿ ಈ ದಂಧೆ ನಡೆಯುತ್ತಿದೆ;

(ಈ) ಇದನ್ನು ತಡೆಗಟ್ಟಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ;

(ಉ) ಕಳೆದ ಮೂರು ವರ್ಷಗಳಿಂದ ಇದುವರೆವಿಗೂ ಈ ದಂಧೆ ನಡೆಸುವ ಎಷ್ಟು ಜನರನ್ನು ಶಿಕ್ಷಿಸಲಾಗಿದೆ?

## ಅನಧಿಕೃತ ಕಟ್ಟಡ ನಿರ್ಮಾಣ ಕುರಿತು

**ಶ್ರೀ ರಿಜ್ವಾನ್ ಅರ್ಷದ್ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೭೦(೧೩೭೮) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಸುತ್ತಮುತ್ತಲ ಕೆರೆಗಳಿಗೆ ತ್ಯಾಜ್ಯ ವಸ್ತುಗಳನ್ನು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ತೆಗೆದುಕೊಂಡಿರುವ, ಬಾರದಿದ್ದಲ್ಲಿ ತೆಗೆದುಕೊಳ್ಳುವ ಕ್ರಮಗಳೇನು; (ವಿವರ ನೀಡುವುದು) ಈ ಬಗ್ಗೆ ಸೂಕ್ತ ಕಾನೂನು ತಿದ್ದುಪಡಿ ತಂದು ಕ್ರಮಕೈಗೊಳ್ಳುವ ಯೋಜನೆ ಇದೆಯೇ;

(ಇ) ತ್ಯಾಜ್ಯ ಮತ್ತು ತ್ಯಾಜ್ಯ ವಸ್ತುಗಳನ್ನು ಕೆರೆಗೆ ಹಾಕುತ್ತಿರುವವರ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಜಲಮಂಡಳಿ, ಕೆರೆ ನಿಗಾ ಸಮಿತಿ ಮತ್ತು ಮಾಲಿನ್ಯ ನಿಯಂತ್ರಣ ಮಂಡಳಿ ಇವುಗಳು ಪ್ರತ್ಯೇಕವಾಗಿ ಅಥವಾ ಒಟ್ಟಿಗೆ ತೆಗೆದುಕೊಂಡಿರುವ ಕ್ರಮವೇನು? (ನೀಡಿರುವ ನೋಟಿಸ್, ದಾಖಲಿಸಿರುವ ಮೊಕದ್ದಮೆ, ವಸೂಲು ಮಾಡಿರುವ ದಂಡ, ರದ್ದುಪಡಿಸಲಾದ ಪರವಾನಗಿ ಇವುಗಳ ಪೂರ್ಣ ವಿವರವನ್ನು ಪ್ರಕರಣವಾರು ನೀಡುವುದು)

## ಕೆ.ಪಿ.ಎಸ್.ಸಿ. ಮೂಲಕ ನೇಮಕಗೊಂಡವರಿಗೆ ಇನ್ನು ನೇಮಕಾತಿ ಆದೇಶ ನೀಡದಿರುವ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೭೧(೧೩೬೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆ.ಪಿ.ಎಸ್.ಸಿ. ಮೂಲಕ ನೇಮಕಾತಿಗೆ ಆಯ್ಕೆಗೊಂಡ ಪ್ರಥಮ ದರ್ಜೆ ಸಹಾಯಕ/ದ್ವಿತೀಯ ದರ್ಜೆ ಸಹಾಯಕರಲ್ಲಿ ಖಜಾನೆ ಇಲಾಖೆಗೆ ಹಂಚಿಕೆಯಾದ ಉದ್ಯೋಗ ಆಕಾಂಕ್ಷಿಗಳಿಗೆ ಇನ್ನೂ ನೇಮಕಾತಿ ಆದೇಶ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣವೇನು; ಬೇರೆ ಬೇರೆ ಇಲಾಖೆಗಳಲ್ಲಿ ಈಗಾಗಲೇ ಕರ್ತವ್ಯಕ್ಕೆ ಹಾಜರಾಗಿದ್ದು, ಖಜಾನೆ ಇಲಾಖೆಗೆ ಹಂಚಿಕೆಯಾದ ಉದ್ಯೋಗಾಕಾಂಕ್ಷಿಗಳು ತೊಂದರೆ ಅನುಭವಿಸುತ್ತಿದ್ದು, ಇವರುಗಳಿಗೆ ಯಾವಾಗ ನೇಮಕಾತಿ ಆದೇಶ ನೀಡಲಾಗುವುದು;

(ಇ) ಹಂಚಿಕೆ ಮಾಡಲಾದ ಅಭ್ಯರ್ಥಿಗಳ ಮೂಲ ದಾಖಲಾತಿಗಳನ್ನು ಡಿಸೆಂಬರ್–೨೦೧೬ರ ಮಾಹೆಯಲ್ಲಿ ಪರಿಶೀಲಿಸಲಾಗಿದ್ದರೂ, ಈವರೆಗೂ ಯಾವುದೇ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಿ ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳದಿರಲು ಕಾರಣವೇನು? (ವಿವರ ನೀಡುವುದು)

## ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೭೨(೧೩೬೦) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ದಾಖಲಾಗಿರುವ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ಪ್ರಕರಣಗಳೆಷ್ಟು;

(ಆ) ಈ ದೂರುಗಳನ್ನು ಆಧರಿಸಿ ದಾಖಲಿಸಿಕೊಳ್ಳಲಾದ ಮೊಕದ್ದಮೆ, ವಿಚಾರಣಾ ಹಂತ, ವಿಚಾರಣಾ ವರದಿಯನ್ನು ಘನ ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆಯೇ; (ವಿವರ ನೀಡುವುದು)

(ಇ) ತಪ್ಪೆಸಗಿದ ಆರೋಪಿತರ ಮೇಲೆ ಮತ್ತು ಕಲಿಯುತ್ತಿರುವ ಮಕ್ಕಳಾಗಿದ್ದರೆ ಶಿಕ್ಷಣ ಸಂಸ್ಥೆಗಳ ಮೇಲೆ ಪ್ರತ್ಯೇಕವಾಗಿ ಕ್ರಿಮಿನಲ್ ಪ್ರಕರಣವನ್ನು ದಾಖಲಿಸಿಕೊಳ್ಳಲಾಗಿದೆಯೇ;

(ಈ) ತಪ್ಪೆಂದು ಕಂಡು ಬಂದ ಶಿಕ್ಷಣ ಸಂಸ್ಥೆಗಳ ಬಗ್ಗೆ ಶಿಕ್ಷಣ ಇಲಾಖೆಗೆ ಮಾಹಿತಿ ನೀಡಿ, ಕ್ರಮ ಕೈಗೊಳ್ಳುವಂತೆ ಕೋರಲಾಗಿದೆಯೇ; ಕೋರಿದ್ದರೆ, ಯಾವ ಯಾವ ಶಿಕ್ಷಣ ಸಂಸ್ಥೆಗಳ ಮೇಲೆ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ; ಕ್ರಮ ಕೈಗೊಂಡಿರುವ ಬಗ್ಗೆ ಅನುಸರಣಾ ವರದಿಯನ್ನು ಪಡೆಯಲಾಗಿದೆಯೇ? (ವಿವರ ನೀಡುವುದು)

## ಐ.ಟಿ.ಐ. ಕಾಲೇಜು ಮತ್ತು ಕಟ್ಟಡಗಳ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೭೩(೧೩೫೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಜಿಲ್ಲೆಯ ವ್ಯಾಪ್ತಿಯಲ್ಲಿರುವ ಸರ್ಕಾರಿ ಐಟಿಐ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಆ ಪೈಕಿ ಸರ್ಕಾರಿ ಕಟ್ಟಡ ಹಾಗೂ ಬಾಡಿಗೆ ಕಟ್ಟಡದಲ್ಲಿರುವ ಕಾಲೇಜುಗಳ ಸಂಖ್ಯೆ ಎಷ್ಟು;

(ಇ) ಬಾಡಿಗೆ ಕಟ್ಟಡದಲ್ಲಿರುವ ಕಾಲೇಜುಗಳನ್ನು ಸರ್ಕಾರಿ ಕಟ್ಟಡಗಳಿಗೆ ಸ್ಥಳಾಂತರ ಮಾಡುವ ಯೋಜನೆಯು ಸರ್ಕಾರದ ಮುಂದಿದೆಯೇ; ಈ ಕಟ್ಟಡಕ್ಕೆ ಸರ್ಕಾರವು ಎಷ್ಟು ಅನುದಾನವನ್ನು ನಿಗದಿ ಮಾಡಿದೆ;

(ಈ) ಹೆಚ್ಚು ಹೆಚ್ಚಿನ ಐಟಿಐ ಕಾಲೇಜುಗಳನ್ನು ಸ್ಥಾಪಿಸಿ, ಉದ್ಯೋಗರಹಿತರಿಗೆ ಉದ್ಯೋಗವನ್ನು ಒದಗಿಸುವಲ್ಲಿ ಸಹಕಾರಿಯಾಗುವಂತೆ ಮಾಡಲು ಸರ್ಕಾರದ ನೀತಿ ನಿಯಮಗಳೇನು?

## ವಿಧಾನಸೌಧದ ಕ್ಯಾಂಟೀನ್ ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)–**

೧೫೭೪(೧೨೪೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಧಾನಸೌಧದಲ್ಲಿರುವ ಕ್ಯಾಂಟೀನ್‌ನ್ನು ಮೇಲ್ದರ್ಜೆಗೇರಿಸಲು ಯಾವ್ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಅಳವಡಿಸಿರುವ ಹೊಸ ಉಪಕರಣಗಳು ಯಾವುವು;

(ಆ) ಇದಕ್ಕಾಗಿ ಮಂಜೂರಾಗಿದ್ದ ಮತ್ತು ವೆಚ್ಚವಾಗಿರುವ ಹಣ ಎಷ್ಟು; ಕಾಮಗಾರಿ ಪೂರ್ಣಗೊಂಡಿದ್ದು ಯಾವಾಗ;

(ಇ) ಅಗತ್ಯವಿಲ್ಲದಿದ್ದರೂ ಅಗಾಧ ಪ್ರಮಾಣದಲ್ಲಿ ಹೊಸ ಉಪಕರಣಗಳನ್ನು ಅಳವಡಿಸಿರುವುದು ನಿಜವೇ; ಅಳವಡಿಸಿರುವ ಹೊಸ ಉಪಕರಣಗಳಿಗೆ ವೆಚ್ಚ ಮಾಡಿರುವ ಹಣ ಎಷ್ಟು; (ಉಪಕರಣವಾರು ಸಂಪೂರ್ಣ ವಿವರ ನೀಡುವುದು)

(ಈ) ಅನಗತ್ಯ ಉಪಕರಣಗಳನ್ನು ಅಳವಡಿಸಲು ಕಾರಣಕರ್ತರಾದವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ;

(ಉ) ಕಾಮಗಾರಿ ಪೂರ್ಣಗೊಂಡು, ಹೊಸ ಉಪಕರಣಗಳನ್ನು ಅಳವಡಿಸಿ ಆರು ತಿಂಗಳು ಕಳೆದಿದ್ದರೂ, ಕ್ಯಾಂಟೀನ್ ಕಾರ್ಯಾರಂಭ ಮಾಡದೆ ಇರುವುದರಿಂದ ನೌಕರರಿಗೆ ಹಾಗೂ ವಿಧಾನಸೌಧಕ್ಕೆ ಆಗಮಿಸುವ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಹಾಗಿದ್ದಲ್ಲಿ, ಕ್ಯಾಂಟೀನ್ ಆರಂಭವಾಗದಿರಲು ಕಾರಣವೇನು; ಪುನರಾರಂಭಗೊಳ್ಳಲಿರುವುದು ಯಾವಾಗ?

## ಮೂಢನಂಬಿಕೆ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೭೫(೧೨೫೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮೂಢನಂಬಿಕೆ ಮತ್ತು ವಾಮಾಚಾರದಂತಹ ಘಟನೆಗಳು ಪದೇ ಪದೇ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸರ್ಕಾರವು ಇವುಗಳನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳೇನು;

(ಇ) ರಾಮನಗರದ ಶಾಲಾ ಬಾಲಕಿಯನ್ನು ಇತ್ತೀಚೆಗೆ ವಾಮಾಚಾರಕ್ಕೊಳಪಡಿಸಿ ಮಾಗಡಿ ಪಟ್ಟಣದಲ್ಲಿ ಹತ್ಯೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಇದಕ್ಕೆ ಕಾರಣಕರ್ತರಾದವರನ್ನು ಶಿಕ್ಷೆಗೆ ಗುರಿಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಮೂಢನಂಬಿಕೆ ಪ್ರತಿಬಂಧಕ ವಿಧೇಯಕವನ್ನು ಸರ್ಕಾರ ಜಾರಿಗೆ ತರಲಾಗುವುದು ಯಾವಾಗ; ಇಲ್ಲದಿದ್ದಲ್ಲಿ, ಕಾರಣಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ಉದ್ಯಾನವನ ನಿರ್ಮಾಣದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೭೬(೧೨೫೪) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಮತ್ತು ಚನ್ನಪಟ್ಟಣ ನಗರಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಉದ್ಯಾನವನ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಸಾರ್ವಜನಿಕರ ಉದ್ಯಾನವನ ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆಯೇ;

(ಇ) ರಾಮನಗರ–ಚನ್ನಪಟ್ಟಣ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಯಾವ ಯಾವ ಸ್ಥಳಗಳಲ್ಲಿ ಉದ್ಯಾನವನ ನಿರ್ಮಿಸಲಾಗುವುದು; ಇದಕ್ಕಾಗಿ ಸರ್ಕಾರದಿಂದ ಬಿಡುಗಡೆಯಾದ ಹಣವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಹಾಗಿಲ್ಲದಿದ್ದಲ್ಲಿ, ಸಾರ್ವಜನಿಕರ ಅನುಕೂಲಕ್ಕಾಗಿ ಉದ್ಯಾನವನವನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದೇ? (ವಿವರ ನೀಡುವುದು)

## NULM ಯೋಜನೆಯಲ್ಲಿ ಬೀದಿಬದಿ ವ್ಯಾಪಾರಿಗಳ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೭೭(೧೨೫೫) ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಬೀದಿಬದಿ ವ್ಯಾಪಾರಿಗಳಿಗೆ NULM ಯೋಜನೆಯಡಿ ಗುರುತಿನ ಚೀಟಿ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆಯೇ;

(ಆ) ಹಾಗಿಲ್ಲದಿದ್ದಲ್ಲಿ, ಕಾರಣಗಳೇನು; ಸಂಪೂರ್ಣ ಮಾಹಿತಿ ನೀಡುವುದು;

(ಇ) NULM ಯೋಜನೆಯಡಿ ಬೀದಿಬದಿ ವ್ಯಾಪಾರಿಗಳ ಸರ್ವತೋಮುಖ ಅಭಿವೃದ್ಧಿಗಾಗಿ ೨೦೧೬–೧೭ನೇ ಸಾಲಿನಲ್ಲಿ ಬಿಡುಗಡೆಯಾದ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನ ಎಷ್ಟು ಹಾಗೂ ಈ ಅನುದಾನವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಬಳಕೆ ಮಾಡಲಾಗುತ್ತಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ Town Vending Committee ಪ್ರಾರಂಭಿಸಲಾಗಿದೆಯೇ; ಇದರ ನಕ್ಷೆ ಮತ್ತು ಅಂದಾಜು ಪಟ್ಟಿಯನ್ನು ಒದಗಿಸುವುದು?

## ಹಾವೇರಿ ಜಿಲ್ಲೆಯಲ್ಲಿರುವ ಪೊಲೀಸ್ ಠಾಣೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೭೮(೧೨೫೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿರುವ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಗ್ರಾಮಗಳವಾರು ವಿವರ ನೀಡುವುದು)

(ಆ) ಹಾವೇರಿ ಜಿಲ್ಲೆಯ ವ್ಯಾಪ್ತಿಗೆ ಬರುವ ಪೊಲೀಸ್ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಅವರುಗಳಿಗೆ ನೀಡಲಾಗುತ್ತಿರುವ ಸೌಲಭ್ಯಗಳು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಜಿಲ್ಲೆಯಲ್ಲಿರುವ ಪೊಲೀಸ್ ವಸತಿ ಗೃಹಗಳ ಸಂಖ್ಯೆ ಎಷ್ಟು; ಇದರಲ್ಲಿ ನೂತನ ಹಾಗೂ ಹಳೆಯ ಕಟ್ಟಡಗಳು ಎಷ್ಟು; ಇವುಗಳ ನಿರ್ವಹಣೆಗಾಗಿ ಕಳೆದ ಮೂರು ವರ್ಷಗಳಲ್ಲಿ ವೆಚ್ಚ ಮಾಡಿದ ಹಣ ಎಷ್ಟು? (ತಾಲ್ಲೂಕುವಾರು, ವರ್ಷಾವಾರು, ಅನುದಾನವಾರು ವಿವರ ನೀಡುವುದು)

## ರಾಜ್ಯದ ರೈತರು ಸಹಕಾರಿ ವಿವಿಧ ಬ್ಯಾಂಕ್‌ಗಳಿಂದ ಪಡೆದ ಸಾಲದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೭೯(೧೨೫೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭೀಕರ ಬರಗಾಲವಿರುವುದರಿಂದ, ರಾಜ್ಯದ ರೈತರು ೨೦೧೬ನೇ ಸಾಲಿನ ಡಿಸೆಂಬರ್ ತನಕ ವ್ಯವಹಾಯ ಸೇವಾ ಸಹಕಾರ ಬ್ಯಾಂಕ್‌ಗಳಿಂದ ಮತ್ತು ಇತರೆ ಬ್ಯಾಂಕುಗಳಿಂದ ಪಡೆದ ಸಾಲವನ್ನು ಮನ್ನಾ ಮಾಡಲಾಗುವುದೇ;

(ಆ) ರಾಜ್ಯದಲ್ಲಿರುವ ರೈತರು ಇಲ್ಲಿಯವರೆಗೆ ಸಹಕಾರ ಸಂಘಗಳಿಂದ ಮತ್ತು ಬ್ಯಾಂಕುಗಳಿಂದ ಪಡೆದಿರುವ ಕೃಷಿ ಸಾಲದ ಮೊತ್ತವೆಷ್ಟು; (ಸಹಕಾರ ಮತ್ತು ಇತರೆ ಬ್ಯಾಂಕುಗಳಿಂದ ಹಾಗೂ ರಾಷ್ಟ್ರೀಕೃತ ಬ್ಯಾಂಕುಗಳ ಪಟ್ಟಿಯನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಹಾವೇರಿ ಜಿಲ್ಲೆಯಾದ್ಯಂತ ರೈತರು ವ್ಯವಸಾಯ ಸೇವಾ ಸಹಕಾರ ಬ್ಯಾಂಕುಗಳಿಂದ/ರಾಷ್ಟ್ರೀಕೃತ/ಇತರೆ ಬ್ಯಾಂಕುಗಳಿಂದ ಪಡೆದಿರುವ ಒಟ್ಟು ಸಾಲದ ಮೊತ್ತವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಭೀಕರ ಬರಗಾರ ಎದುರಿಸುತ್ತಿರುವ ರೈತರಿಗೆ ಇಲ್ಲಿಯವರೆಗೆ ಯಾವುದೇ ಬೆಳೆ ಬಾರದೆ ಇರುವುದರಿಂದ ರೈತರ ಹಿತದೃಷ್ಟಿಯಿಂದ ಸಂಪೂರ್ಣ ಸಾಲವನ್ನು ಮನ್ನಾ ಮಾಡಲಾಗುವುದೇ? (ಮಾಹಿತಿ ನೀಡುವುದು)

## ನಗರೋತ್ಥಾನ ಯೋಜನೆಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೮೦(೧೨೫೮) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರೋತ್ಥಾನ ಯೋಜನೆಯ ಮಾನದಂಡವೇನು;

(ಆ) ಈ ಯೋಜನೆಯನ್ನು ಎಷ್ಟು ಹಂತದಲ್ಲಿ ಆರಂಭಿಸಲಾಗುತ್ತದೆ;

(ಇ) ಹಾವೇರಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ;

(ಈ) ಸದರಿ ಯೋಜನೆಗಳಿಗೆ ಮಂಜೂರಾದ ಅನುದಾನವೆಷ್ಟು; ಬಾಕಿ ಇರುವ ಅನುದಾನವೆಷ್ಟು;

(ಉ) ಇಲ್ಲಿಯವರೆಗೆ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಹಾಗೂ ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು; ಕಾರಣವೇನು? (ವಿವರ ನೀಡುವುದು)

**ಹಾವೇರಿ ನಗರದಲ್ಲಿ ೨೦೧೬–೧೭ರಲ್ಲಿ ಎಸ್.ಸಿ.ಪಿ./ಟಿ.ಎಸ್.ಪಿ. ಬಗ್ಗೆ**

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೮೧(೧೨೫೪) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಹಾವೇರಿ ನಗರದಲ್ಲಿ ನಗರಾಭಿವೃದ್ಧಿ ಇಲಾಖೆಯ ಎಸ್.ಸಿ.ಪಿ/ಟಿ.ಎಸ್.ಪಿ. ಅಡಿಯಲ್ಲಿ ವಿವಿಧ ಕಾರ್ಯಕ್ರಮಗಳಿಗೆ ನಿಗದಿಪಡಿಸಿರುವ ಅನುದಾನ ಎಷ್ಟು;

(ಆ) ಈ ಸಾಲಿನಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; (ವಿವರ ನೀಡುವುದು)

(ಇ) ಆ ಪೈಕಿ ಖರ್ಚಾದ ಹಾಗೂ ಬಾಕಿ ಉಳಿದಿರುವ ಹಣ ಎಷ್ಟು;

(ಈ) ಈ ಸಾಲಿನಲ್ಲಿ ಉಳಿದಿರುವ ಅನುದಾನದಿಂದ ಮುಂದಿನ ಸಾಲಿನಲ್ಲಿ ಹಾವೇರಿ ನಗರವನ್ನು ಅಭಿವೃದ್ಧಿಪಡಿಸಲಾಗುವುದೇ;

(ಉ) ಬಾಕಿ ಉಳಿಸಲು ಕಾರಣಗಳೇನು; ಇದಕ್ಕೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದೇ?

# ಹಾವೇರಿ ಜಿಲ್ಲೆಯಲ್ಲಿರುವ ಹಾಲು ಉತ್ಪಾದಕರ ಸಹಕಾರಿ ಸಂಘಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೮೨(೧೨೬೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿರುವ ಹಾಲು ಉತ್ಪಾದಕರ ಸಹಕಾರಿ ಸಂಘಗಳೆಷ್ಟು; (ತಾಲ್ಲೂಕುವಾರು ಹೆಸರು ವಿಳಾಸ ಒದಗಿಸುವುದು)

(ಆ) ಹಾಲು ಉತ್ಪಾದಕರಿಗೆ ಪ್ರಸ್ತುತ ಪ್ರತಿ ಲೀಟರ್‌ಗೆ ಎಷ್ಟು ರೂ.ಗಳ ಸಹಾಯಧನ ನೀಡಲಾಗುತ್ತದೆ; ರೈತರ ಆತ್ಮಹತ್ಯೆ ಹಿನ್ನಲೆಯಲ್ಲಿ ಧನಸಹಾಯ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಇ) ಹಾವೇರಿ ಜಿಲ್ಲೆಯಲ್ಲಿರುವ ಪತ್ತಿನ ಸಹಕಾರ ಸಂಘಗಳು ಎಷ್ಟು; (ತಾಲ್ಲೂಕುವಾರು ಹೆಸರು ವಿಳಾಸ ಒದಗಿಸುವುದು)

(ಈ) ಜಿಲ್ಲೆಯಲ್ಲಿ ಎಷ್ಟು ಮಹಿಳಾ ಸಹಕಾರ ಸಂಘಗಳು ಇವೆ? (ತಾಲ್ಲೂಕುವಾರು ಹೆಸರು, ವಿಳಾಸ ಒದಗಿಸುವುದು)

# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಫ್ಲಾಟ್ ನಿರ್ಮಾಣದ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೮೩(೧೨೮೪) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಎಷ್ಟು ಫ್ಲಾಟ್‌ಗಳನ್ನು ನಿರ್ಮಿಸಿ ಸಾರ್ವಜನಿಕರಿಗೆ ಹಂಚಿಕೆ ಮಾಡಲಾಗಿದೆ;

(ಆ) ಯಾವ ಯಾವ ಸ್ಥಳಗಳಲ್ಲಿ ಫ್ಲಾಟ್‌ಗಳನ್ನು ನಿರ್ಮಿಸಲಾಗಿದೆ;

(ಇ) ನಿರ್ಮಿಸಿರುವ ವಿವಿಧ ಅಳತೆ ಫ್ಲಾಟ್‌ಗಳ ಸಂಖ್ಯೆ ಎಷ್ಟು;

(ಈ) ಯಾವ ಯಾವ ಅಳತೆಯ ಫ್ಲಾಟ್‌ಗಳಿಗೆ ಎಷ್ಟೆಷ್ಟು ಬೆಲೆಯನ್ನು ನಿಗದಿಪಡಿಸಲಾಗಿದೆ?

## ಕೃಷಿ ಸಾಲಗಳ ಅಸಲಿನ ಮೇಲಿನ ಬಡ್ಡಿ ಮನ್ನಾ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೩೮೪(೧೨೮೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಿನಾಂಕ ೩೦–೯–೨೦೧೫ಕ್ಕೆ ಸುಸ್ತಿಯಾಗಿರುವ ಎಲ್ಲಾ ಬಗೆಯ ಕೃಷಿ ಸಾಲಗಳ ಅಸಲನ್ನು ದಿನಾಂಕ ೩೧–೩–೨೦೧೬ರಂದು ರೈತರು ಸಹಕಾರ ಸಂಘಗಳಲ್ಲಿ ಪಾವತಿಸಿದ್ದಲ್ಲಿ, ಆ ಸಾಲಗಳ ಮೇಲಿನ ಪೂರ್ಣ ಬಡ್ಡಿಯನ್ನು ಮನ್ನಾ ಮಾಡಲಿದ್ದು, ಅದರ ಹೊರೆಯನ್ನು ಸರ್ಕಾರ ಭರಿಸಲಿದೆ ಎಂದು ತಿಳಿಸಿದ್ದಾರೆ; ಇದುವರೆವಿಗೂ ಎಷ್ಟು ರೈತರ ಸಾಲವನ್ನು ಮನ್ನಾ ಮಾಡಲಾಗಿದೆ;

(ಆ) ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಸಾಲಗಳ ಕಂತುಗಳ ಬಡ್ಡಿಯ ಹೊರೆಯನ್ನು ಸರ್ಕಾರ ಭರಿಸಿದೆಯೇ;

(ಇ) ೨೦೧೬–೧೭ನೇ ಸಾಲಿನಲ್ಲಿ ೨೩ ಲಕ್ಷ ರೈತರಿಗೆ ೧೧,೦೦೦ ಕೋಟಿ ರೂಗಳ ಕೃಷಿ ಸಾಲ ವಿತರಿಸುವ ಸಹಕಾರ ಇಲಾಖೆಯ ಗುರಿಯನ್ನು ಎಷ್ಟರ ಮಟ್ಟಿಗೆ ಸಾಧಿಸಲಾಗಿದೆ;

(ಈ) ರೈತರಿಗೆ ಲಾಭದಾಯಕ ಬೆಲೆ ಒದಗಿಸಲು ಸರ್ಕಾರಿ ಉದ್ದೇಶಿತ ಇ–ಮಾರಾಟ ವ್ಯವಸ್ಥೆಯನ್ನು ಎಲ್ಲೆಲ್ಲಿ ಅನುಷ್ಠಾನಗೊಳಿಸಲಾಗಿದೆ?

## ಖಾಸಗಿ ಅನುದಾನಿತ ಕೈಗಾರಿಕಾ ಸಂಸ್ಥೆಗಳಲ್ಲಿಯ ಬೋಧನಾ ಶುಲ್ಕದ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)–**

೧೩೮೪(೧೨೮೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಪ್ರತಿ ವಿದ್ಯಾರ್ಥಿಗಳಿಂದ ಎಷ್ಟು ಬೋಧನಾ ಶುಲ್ಕವನ್ನು ಪಡೆಯಲು ಇಲಾಖೆ ಅನುಮತಿ ನೀಡಿದೆ; ಈ ಬೋಧನಾ ಶುಲ್ಕದ ದರವನ್ನು ಯಾವ ವರ್ಷ ನಿಗದಿಪಡಿಸಲಾಗಿದೆ;

(ಆ) ಈ ರೀತಿ ಪ್ರತಿ ವಿದ್ಯಾರ್ಥಿಯಿಂದ ಪಡೆದುಕೊಳ್ಳುವ ಬೋಧನಾ ಶುಲ್ಕವನ್ನು ಸಂಪೂರ್ಣವಾಗಿ ಸರ್ಕಾರದ ಖಜಾನೆಗೆ ಭರಿಸಬೇಕು ಎಂದು ರಾಜ್ಯದ ಎಲ್ಲಾ ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ಆಯುಕ್ತರು/ನಿರ್ದೇಶಕರು ಉದ್ಯೋಗ ಮತ್ತು ತರಬೇತಿ ನಿರ್ದೇಶನಾಲಯದವರು ಸುತ್ತೋಲೆಯನ್ನು ಹೊರಡಿಸಿದ್ದಾರೆಯೇ;

(ಇ) ಡಿ.ಜಿ.ಇ.ಟಿ. ನವದೆಹಲಿಯವರು ವಿದ್ಯಾರ್ಥಿಗಳಿಂದ ಪಡೆಯುತ್ತಿರುವ ಬೋಧನಾ ಶುಲ್ಕವನ್ನು ಪರಿಷ್ಕರಣೆ ಮಾಡಲು ದೇಶದ ಎಲ್ಲಾ ರಾಜ್ಯ ಸರ್ಕಾರಗಳಿಗೆ ಸೂಚನೆಯನ್ನು ನೀಡಿದ್ದು ನಿಜವೆ; ಹಾಗಿದ್ದಲ್ಲಿ, ಇದಕ್ಕೆ ಪೂರಕವಾಗಿ ಇಲಾಖೆ ಏನು ಕ್ರಮಕೈಗೊಂಡಿದೆ? (ವಿವರ ನೀಡುವುದು)

## ವಿದ್ಯಾರ್ಥಿನಿಯರನ್ನು ಚುಡಾಯಿಸುವ ಪ್ರಕರಣದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೮೬(೧೩೭೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿದ್ಯಾರ್ಥಿನಿಯರನ್ನು ಚುಡಾಯಿಸುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಇದುವರೆಗೂ ಎಷ್ಟು ಪ್ರಕರಣಗಳು ದಾಖಲಾಗಿವೆ;

(ಇ) ವಿದ್ಯಾರ್ಥಿನಿಯರನ್ನು ಚುಡಾಯಿಸುವವರ ವಿರುದ್ಧ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;

(ಈ) ಈ ಪ್ರಕರಣಗಳು ಯಾವ ಸ್ಥಳಗಳಲ್ಲಿ ಹೆಚ್ಚಾಗಿ ನಡೆಯುತ್ತಿವೆ;

(ಉ) ಬಿ.ಬಿ.ಎಂ.ಪಿ. ೯ನೇ ವಾರ್ಡ್‌ನ ಮುನೇಶ್ವರ ಬಡಾವಣೆಯ ಬಸ್ ಸ್ಟ್ಯಾಂಡ್ ರಸ್ತೆಯ ೭ನೇ ಕ್ರಾಸ್ ಬಳಿ ಸಾಯಂಕಾಲ ೭.೦೦ ಗಂಟೆ ನಂತರ ಪ್ರತಿ ದಿನ

ಕೆಲವರು ಆಟೋಗಳನ್ನು ನಿಲ್ಲಿಸಿಕೊಂಡು, ಮದ್ಯ ಸೇವಿಸುತ್ತಿರುವುದರಿಂದ, ಸದರಿ ರಸ್ತೆಯಲ್ಲಿ ರಾತ್ರಿ ವೇಳೆ ಮಹಿಳೆಯರು ಮತ್ತು ಮಕ್ಕಳು ಸಂಚರಿಸಲು ಭಯಪಡುತ್ತಿದ್ದು, ಇದರ ನಿವಾರಣೆಗೆ ಕೂಡಲೇ ಗೃಹ ಇಲಾಖೆ ಕೈಗೊಳ್ಳುವ ಕ್ರಮಗಳೇನು?

## ಜ್ಯೋತಿ ಸಂಜೀವಿನಿ ಯೋಜನೆ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೮೭(೧೨೮೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ನೌಕರರಿಗೆ "ಜ್ಯೋತಿ ಸಂಜೀವಿನಿ" ಯೋಜನೆಯಲ್ಲಿ ಎಷ್ಟು ಬಗೆಯ ಚಿಕಿತ್ಸೆಗಳಿಗೆ ಅವಕಾಶ ಕಲ್ಪಿಸಲಾಗಿದೆ; (ವಿವರ ನೀಡುವುದು)

(ಆ) ಜ್ಯೋತಿ ಸಂಜೀವಿನಿ ಯೋಜನೆಯಲ್ಲಿ ಒಟ್ಟು ಎಷ್ಟು ಆಸ್ಪತ್ರೆಗಳ ನೆಟ್‌ವರ್ಕ್ ವ್ಯವಸ್ಥೆ ಮಾಡಲಾಗಿದೆ; (ಜಿಲ್ಲಾವಾರು ಆಸ್ಪತ್ರೆಗಳ ವಿವರ ನೀಡುವುದು)

(ಇ) ಹೃದಯಾಘಾತ ಮತ್ತು ಇತರ ರೋಗ ಕಾಣಿಸಿಕೊಂಡಾಗ ರೋಗ ಪತ್ತೆ ಪರೀಕ್ಷೆ ತುರ್ತು ಚಿಕಿತ್ಸೆ ಸೇರಿ ಆರಂಭದ ಎಲ್ಲ ವೆಚ್ಚವನ್ನೂ ನೌಕರರೇ ಭರಿಸಬೇಕಾಗಿದ್ದು, ಅದು ಮರು ಪಾವತಿ ಆಗದೆ ಈ ಯೋಜನೆಯಲ್ಲಿ ನೌಕರರು ಅನುಭವಿಸುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಳ್ಳುವ ಕ್ರಮವೇನು;

(ಈ) ಶಸ್ತ್ರ ಚಿಕಿತ್ಸೆಗೆ ಅಗತ್ಯವಾದ ವೇಳೆ ಸುವರ್ಣ ಆರೋಗ್ಯ ಟ್ರಸ್ಟ್‌ಗೆ ಆನ್‌ಲೈನ್ ನೋಂದಣಿ ಮಾಡಬೇಕು, ಟ್ರಸ್ಟ್ ನಿಗದಿ ಮಾಡಿರುವ ಸ್ಟಂಟ್ ಗುಣಮಟ್ಟ ಸರಿ ಇಲ್ಲ ಎಂಬಂತಹ ಕಾರಣ ನೀಡಿ ನೆಟ್‌ವರ್ಕ್ ಆಸ್ಪತ್ರೆಗಳು ಹೆಚ್ಚುವರಿ ವೆಚ್ಚ ಭರಿಸುವ ಅನಿವಾರ್ಯತೆಗೆ ನೌಕರರನ್ನು ದೂಡುತ್ತಿರುವುದು ಸರಿಯೇ;

(ಉ) ಸರ್ಕಾರ ಸಕಾಲಕ್ಕೆ ಹಣ ಬಿಡುಗಡೆ ಮಾಡುತ್ತಿಲ್ಲ ಎಂದ "ಜ್ಯೋತಿ ಸಂಜೀವಿನಿ" ಫಲಾನುಭವಿಗಳಿಗೆ ನೆಟ್‌ವರ್ಕ್ ಆಸ್ಪತ್ರೆಗಳು ಈಗ ಚಿಕಿತ್ಸೆ ನೀಡುತ್ತಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು?

## ಅನಧಿಕೃತ ಕಟ್ಟಡ ನಿರ್ಮಾಣ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು)–**

೧೫೮೮(೧೩೭೭) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಚಿಕ್ಕಪೇಟೆ ಮುಖ್ಯರಸ್ತೆ ಸೈಟ್ ನಂ. ೨೦೨, ೨೦೩, ೨೦೩/೧ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಓ.ಟಿ.ಸಿ. ರೋಡ್ ವಾಡ್ ನಂ. ೧೯ ಬಹು ಹಗರಣದ ವಾಣಿಜ್ಯ ಬಹುಮಹಡಿ ಕಟ್ಟಡ ಅನಧಿಕೃತವಾಗಿ ಕಾನೂನು ಬಾಹಿರವಾಗಿ ಮತ್ತು ನಕ್ಷೆಯ ವಿರುದ್ಧವಾಗಿ ತಲೆ ಎತ್ತಿರುವುದು (Fire and Safety Home) ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಮೇಲ್ಕಂಡ ಕಟ್ಟಡಕ್ಕೆ (Fire and Safety) ಗೃಹ ಇಲಾಖೆಯಿಂದ (Compliance Certificate and No Objection Certificate )ಪಡೆದಿದ್ದಾರೆಯೇ; (ಪ್ರತಿಗಳನ್ನು ಒದಗಿಸುವುದು) ಪರವಾನಿಗೆ ಪಡೆಯುವುದು ಕಾನೂನು ಪ್ರಕಾರ ಅಗತ್ಯವಿರುವುದಿಲ್ಲವೇ; ಒಂದು ವೇಳೆ ಪಡೆಯದಿದ್ದರೆ ಕಾನೂನು ಪ್ರಕಾರ ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಪಾಲನೆ ಮಾಡದಿರುವುದು ಸರಿಯೇ;

(ಇ) ಸಾರ್ವಜನಿಕ ಹಿತದೃಷ್ಟಿಯಿಂದ ಮತ್ತು ಪ್ರಾಣ ಭಯವನ್ನು ತಪ್ಪಿಸಲು ಬಹು ಸಂಖ್ಯೆಯ ಸಾರ್ವಜನಿಕರ ಹಿತಕಾಪಾಡಲು ಈಗಿನ ಸ್ಥಿತಿಯ Factual Detail Report ಏನು? (ಉದ್ದ, ಅಗಲ ಮತ್ತು ಭಾವ ಚಿತ್ರಗಳ ಸಮೇತ ವರದಿಯನ್ನು ನೀಡುವುದು)

## ಅಬಕಾರಿ ರಕ್ಷಕರಿಂದ ಉಪ ನಿರೀಕ್ಷಕರಿಗೆ ಬಡ್ತಿ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೮೯(೧೨೬೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಬಕಾರಿ ಇಲಾಖೆಯಲ್ಲಿ ಅಬಕಾರಿ ರಕ್ಷಕರಿಂದ ಉಪ ನಿರೀಕ್ಷಕರಾಗಿ ಎಷ್ಟು ಮಂದಿಗೆ ಮುಂಬಡ್ತಿ ನೀಡಲಾಗಿದೆ;

(ಆ) ಮುಂಬಡ್ತಿ ನೀಡಿರುವ ಸಂದರ್ಭದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳಿಗೆ ಮೀಸಲಾತಿ ಪಾಲಿಸಲಾಗಿದೆಯೇ; ಪಾಲಿಸಿದ್ದಲ್ಲಿ, ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಮುಂಬಡ್ತಿ ನೌಕರರ ಮಾಹಿತಿ ನೀಡುವುದು;

(ಇ) ಇಲಾಖೆಯಲ್ಲಿ ೨೦೦೫ರಿಂದ ಇಲ್ಲಿಯವರೆಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸದಿರುವುದಕ್ಕೆ ಕಾರಣಗಳೇನು;

(ಈ) ನಿಯಮ ೩.೨ರಲ್ಲಿ ಅಬಕಾರಿ ಉಪ ನಿರೀಕ್ಷಕರಾಗಿ ಬಡ್ತಿ ಪಡೆದು ಖಾಯಂ ಮುಂಬಡ್ತಿ ಇಲ್ಲದೆ ನಿವೃತ್ತಿ ಹೊಂದುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ನಿಯಮ ೩.೨ರಲ್ಲಿ ಅಬಕಾರಿ ಉಪನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಒಂದು ಪದೋನ್ನತಿ ನೀಡಲು ತೆಗೆದುಕೊಂಡ ಕ್ರಮಗಳೇನು?

## ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ಅಪರಾಧಗಳ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೫೯೦(೧೨೬೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಅಪರಾಧ ಚಟುವಟಿಕೆಗಳು ದಿನೇ ದಿನೇ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅಪರಾಧ ಚಟುವಟಿಕೆಗಳನ್ನು ಹತ್ತಿಕ್ಕಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ೨೦೧೬–೧೭ನೇ ಸಾಲಿನಲ್ಲಿ ಬೆಂಗಳೂರಿನಲ್ಲಿ ಒಟ್ಟು ದಾಖಲಾದ ಪ್ರಕರಣಗಳೆಷ್ಟು;

(ಈ) ಅಪರಾಧ ಚಟುವಟಿಕೆಗಳನ್ನು ಪತ್ತೆ ಹಚ್ಚಲು ಸಿ.ಸಿ.ಟಿ.ವಿ. ಕ್ಯಾಮರಾಗಳನ್ನು ಅಳವಡಿಸುವ ಕಾರ್ಯ ಯಾವ ಹಂತದಲ್ಲಿದೆ;

(ಉ) ಬೆಂಗಳೂರಿನಲ್ಲಿ ಈಗಾಗಲೇ ಯಾವ ಯಾವ ಕಡೆಗಳಲ್ಲಿ ಸಿ.ಸಿ.ಟಿ.ವಿ. ಕ್ಯಾಮರಾಗಳನ್ನು ಅಳವಡಿಸಿದೆ ಹಾಗೂ ಯಾವ ಯಾವ ಕಡೆಗಳಲ್ಲಿ ಅಳವಡಿಸಬೇಕಾಗಿದೆ; ವಿಳಂಬಕ್ಕೆ ಕಾರಣಗಳೇನು?

## ಬೀದರ್ ಜಿಲ್ಲೆಯ ಗೃಹ ಇಲಾಖೆ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೫೯೧(೧೩೮೦) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಪೊಲೀಸ್ ಠಾಣೆಯಲ್ಲಿ ಇರುವ ಖಾಲಿ ಹುದ್ದೆಗಳ ನೇಮಕಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಬೀದರ್ ಜಿಲ್ಲೆಯಲ್ಲಿರುವ ಪೊಲೀಸ್ ವಸತಿ ಗೃಹಗಳಿಗೆ ಮೂಲ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬೀದರ್ ಜಿಲ್ಲೆಯಲ್ಲಿ ನೂತನವಾಗಿ ನಿರ್ಮಾಣವಾದ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; ಹೊಸ ಠಾಣೆಗಳ ಉದ್ಘಾಟನೆ ವಿಳಂಬವಾಗಲು ಕಾರಣಗಳೇನು?

## ೨೦೧೫–೨೦೧೬ನೇ ಸಾಲಿನ ಸಹಕಾರಿ ಸಂಘಗಳ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೫೯೨(೧೩೮೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೨೦೧೬ ಹಾಗೂ ೨೦೧೬–೧೭ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಎಷ್ಟು ಸಹಕಾರ ಸಂಘಗಳು ಮತ್ತು ಸೌಹಾರ್ದ ಸಹಕಾರಿ ಸಂಘಗಳ ನೋಂದಣಿ ಆಗಿರುತ್ತವೆ ಹಾಗೂ ಸಂಘಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು;

(ಆ) ಸದರಿ ಸಂಘಗಳ ಸದಸ್ಯರುಗಳಿಗೆ ಸಾಲ ನೀಡಲು ಉದ್ದೇಶಿಸಿರುವ ಮೊತ್ತವೆಷ್ಟು;

(ಇ) ಸಾಲಕ್ಕಾಗಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ೨೦೧೫–೨೦೧೬ ಮತ್ತು ೨೦೧೬–೨೦೧೭ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಕೈಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೫೫೩(೧೩೭೯) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ನಗರಾಭಿವೃದ್ಧಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಯಾವುವು;

(ಆ) ಅಭಿವೃದ್ಧಿಗೊಳ್ಳುತ್ತಿರುವ ಕಾಮಗಾರಿಗಳು ಮಂಜೂರು ಆಗಿದ್ದು ಯಾವಾಗ? (ತಾಲ್ಲೂಕುವಾರು ವಿವರ ನೀಡುವುದು)

## ಮಂಗಳೂರು ಮಹಾನಗರ ಪಾಲಿಕೆ ಸ್ಮಾರ್ಟ್ ಸಿಟಿ ಆಯ್ಕೆಗೊಂಡ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು)–**

೧೫೫೪(೧೩೨೩) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ಮಹಾನಗರ ಪಾಲಿಕೆ ಸ್ಮಾರ್ಟ್ ಸಿಟಿ ಆಯ್ಕೆಗೊಂಡು Special Propose Vehicle ಸಮಿತಿಯಲ್ಲಿ ವಿಧಾನಸಭೆ ಶಾಸಕರು ಮತ್ತು ವಿಧಾನ ಪರಿಷತ್ತಿನ ಶಾಸಕರನ್ನು ಸೇರಿಸಲಾಗಿದೆಯೇ; ಇಲ್ಲದಿದ್ದರೆ, ಕಾರಣಗಳೇನು; ಸೇರಿಸಲು ಕ್ರಮ ಕೈಗೊಳ್ಳಲಾಗುವುದೇ;

(ಆ) Special Propose Vehicle ಸದಸ್ಯರುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಸ್ಮಾರ್ಟ್ ಸಿಟಿಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳ ಅನುದಾನ ಎಷ್ಟು; (ವಿವರ ನೀಡುವುದು)

(ಈ) ಸ್ಮಾರ್ಟ್ ಸಿಟಿ ಯೋಜನೆ ಅನ್ವಯ ಕೇಂದ್ರ ಸರ್ಕಾರ ಈವರೆಗೂ ಮಹಾನಗರ ಪಾಲಿಕೆಗೆ ಬಿಡುಗಡೆಗೊಳಿಸಿದ ಅನುದಾನ ಎಷ್ಟು? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ ಕಾರಾಗೃಹವನ್ನು ನಗರದಿಂದ ಹೊರವಲಯಕ್ಕೆ ಸ್ಥಳಾಂತರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು)–**

೧೫೮(೧೩೨೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ ಕಾರಾಗೃಹವನ್ನು ನಗರದಿಂದ ಹೊರವಲಯಕ್ಕೆ ಸ್ಥಳಾಂತರಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೇ; ಯಾವಾಗ ಕಾರ್ಯಗತಗೊಳಿಸಲಾಗುವುದು; (ವಿವರ ನೀಡುವುದು)

(ಆ) ಜಿಲ್ಲಾ ಕಾರಾಗೃಹದಲ್ಲಿ ಪ್ರಸ್ತುತ ವಾಸವಾಗಿರುವ ಖೈದಿಗಳ ಸಂಖ್ಯೆ ಎಷ್ಟು; ಎಷ್ಟು ಖೈದಿಗಳನ್ನು ಇಡಲು ಅವಕಾಶ ಇದೆ;

(ಇ) ಕಾರಾಗೃಹದ ಭದ್ರತೆಗಾಗಿ ಇಲಾಖೆ ಕೈಗೊಂಡಿರುವ ಕ್ರಮಗಳೇನು;

(ಈ) ಕಾರಾಗೃಹದಲ್ಲಿ ೨೦೧೬ ರಿಂದ ಇಲ್ಲಿಯವರೆಗೂ ದಾಖಲಾದ ಒಟ್ಟು ಕೇಸುಗಳ ಸಂಖ್ಯೆ ಎಷ್ಟು; ಯಾವ ಉದ್ದೇಶಕ್ಕಾಗಿ ಕೇಸುಗಳು ನಡೆದಿವೆ? (ವಿವರ ನೀಡುವುದು)

## ರಾಜ್ಯದಲ್ಲಿ ಖಾಸಗಿ, ಅನುದಾನಿತ ಸರ್ಕಾರಿ ಐ.ಟಿ.ಐ.ಗಳ ವಿದ್ಯಾರ್ಥಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು)–**

೧೫೯(೧೨೪೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖಾಸಗಿ, ಅನುದಾನಿತ ಸರ್ಕಾರಿ ಐ.ಟಿ.ಐ.ಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಉಪನ್ಯಾಸಕರ ಹಾಗೂ ತರಬೇತಿದಾರರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಐ.ಟಿ.ಐ. ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಉಂಟಾಗುವ ಗೊಂದಲಗಳನ್ನು ನಿವಾರಿಸಲು ಇಲಾಖೆ ಕೈಗೊಂಡ ಕ್ರಮಗಳೇನು;

(ಇ) ಐ.ಟಿ.ಐ. ವಿದ್ಯಾರ್ಥಿಗಳು ಗ್ರಾಮೀಣ ಭಾಗದ ವಿದ್ಯಾರ್ಥಿಗಳಾಗಿದ್ದು, ಇವರಿಗೆ ಮಧ್ಯಾಹ್ನ ಬಿಸಿ ಊಟ ನೀಡುವ ಯೋಜನೆ ಇಲಾಖೆ ಮುಂದಿದೆಯೇ; (ವಿವರ ನೀಡುವುದು)

(ಈ) ಖಾಸಗಿ ಐ.ಟಿ.ಐ.ಗಳಲ್ಲಿನ ತರಬೇತಿದಾರರ ವೇತನವನ್ನು ವೇತನ ಅನುದಾನಕ್ಕೆ ಒಳಪಡಿಸಲು ಇಲಾಖೆ ಕೈಗೊಂಡ ಕ್ರಮಗಳೇನು; ವೇತನ ಅನುದಾನಕ್ಕೆ ಒಳಪಡಿಸಿದ ವೇತನ ತಾರತಮ್ಯದಿಂದ ತೊಂದರೆಗೆ ಒಳಗಾಗಿರುವುದನ್ನು ಸರಿಪಡಿಸಲಾಗುವುದೇ?

## ಮಹಾನಗರ ಪಾಲಿಕೆ ವ್ಯಾಪ್ತಿಯ ಬೀದಿ ಬದಿ ವ್ಯಾಪಾರಸ್ಥರ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು)–**

೧೫೯೭(೧೩.೨೫) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಾನಗರ ಪಾಲಿಕೆ ವ್ಯಾಪ್ತಿಯ ಬೀದಿ ಬದಿ ವ್ಯಾಪಾರಸ್ಥರಿಗೆ ಪಾಲಿಕೆ ಎಷ್ಟು ಮಂದಿಗೆ ಸ್ಥಳಾವಕಾಶ ನೀಡಿದೆ; ಪ್ರಸ್ತುತ ಎಷ್ಟು ಬೀದಿ ಬದಿ ವ್ಯಾಪಾರಸ್ಥರನ್ನು ಗುರುತಿಸಲಾಗಿದೆ;

(ಆ) ಬೀದಿ ಬದಿ ವ್ಯಾಪಾರಸ್ಥರಿಗೆ ರಕ್ಷಣೆ ನೀಡಲು ಮಹಾನಗರ ಪಾಲಿಕೆ ಕೈಗೊಂಡ ಕ್ರಮಗಳೇನು;

(ಇ) ಬೀದಿ ಬದಿ ವ್ಯಾಪಾರಸ್ಥರಿಗೆ ಮೂಲಭೂತ ಸೌಕರ್ಯ ಒದಗಿಸಲು ನಗರಪಾಲಿಕೆ ಖರ್ಚು ಮಾಡಿದ ಹಣ ಎಷ್ಟು? (ವಿವರ ನೀಡುವುದು)

## ಮಂಗಳೂರು ನಗರದ ಕುಡಿಯುವ ನೀರಿನ ಸಮಸ್ಯೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು)–**

೧೫೯೮(೧೩.೨೪) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ನಗರದ ಕುಡಿಯುವ ನೀರಿನ ಸಮಸ್ಯೆಯನ್ನು ನೀಗಿಸಲು ಇಲಾಖೆ ಕೈಗೊಂಡ ಕ್ರಮಗಳೇನು;

(ಆ) ತುಂಬೆ ವ್ಯಾಂಟೆಡ್ ಡ್ಯಾಮ್‌ನಿಂದ ಒಟ್ಟು ಎಷ್ಟು ಎಕರೆ ಭೂಮಿ ಮುಳುಗಡೆಗೊಳ್ಳಲಿದೆ; ಇದಕ್ಕೆ ಪರಿಹಾರ ನೀಡಲಾಗುವುದೇ; ಈ ನಿಟ್ಟಿನಲ್ಲಿ ಇಲಾಖೆ ಕೈಗೊಂಡ ಪರಿಹಾರ ಕ್ರಮಗಳೇನು; (ವಿವರ ನೀಡುವುದು)

(ಇ) ಪ್ರಸ್ತುತ ವ್ಯಾಂಟೆಡ್‌ಡ್ಯಾಮ್ ನೀರಿನ ಮಟ್ಟ ಎಷ್ಟು; ಸದರಿ ಡ್ಯಾಮ್‌ನಲ್ಲಿ ಶೇಖರಿಸಬಹುದಾದ ನೀರಿನ ಮಟ್ಟ ಎಷ್ಟು; (ವಿವರ ನೀಡುವುದು)

## ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ೨೦೧೩ ರಿಂದ ೨೦೧೬ರವರೆಗೆ ನೀಡಿದ ಅನುದಾನದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೫೯(೧೩೭೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ೨೦೧೩–೧೪, ೨೦೧೪–೧೫, ೨೦೧೫–೧೬ನೇ ಸಾಲಿನ ರಾಜ್ಯ ಸರ್ಕಾರದ ಆಯವ್ಯಯದಲ್ಲಿ ನೀಡಿರುವ ಅನುದಾನ ಎಷ್ಟು; (ಇಲಾಖೆವಾರು ವಿವರ ನೀಡುವುದು)

(ಆ) ರಾಜ್ಯ ಸರ್ಕಾರ ಆಯವ್ಯಯದಲ್ಲಿ ನೀಡಿರುವ ಅನುದಾನವನ್ನು ಇಲಾಖೆಗಳು ಯಾವ ಯಾವ ಯೋಜನೆಗಳಿಗೆ/ಕಾರ್ಯಗಳಿಗೆ ವಿನಿಯೋಗಿಸಿದೆ; (ವಿವರ ನೀಡುವುದು)

(ಇ) ನೀಡಿರುವ ಅನುದಾನವನ್ನು ಎಲ್ಲಾ ಇಲಾಖೆಗಳು ಸಂಪೂರ್ಣವಾಗಿ ಬಳಕೆ ಮಾಡಿವೆಯೇ? (ವಿವರ ನೀಡುವುದು)

## ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದ ವಿಧಾನ ಪರಿಷತ್ ಸದಸ್ಯರಿಗೆ ಫಲಾನುಭವಿಗಳ ಆಯ್ಕೆ ಮತ್ತು ಅನುದಾನ ನೀಡುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೦೦(೧೨೪೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ವಿವಿಧ ಯೋಜನೆಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಹಾಗೂ ಅನುದಾನವನ್ನು ನೀಡಲು ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದ ವಿಧಾನ ಪರಿಷತ್ ಸದಸ್ಯರುಗಳಿಗೂ ಕೂಡಾ ಅನುದಾನ ಕಾಯ್ದಿರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಇದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಅನುದಾನ ಕಾಯ್ದಿರಿಸಲಾಗುವುದೇ; ಇಲ್ಲದಿದ್ದಲ್ಲಿ, ಕಾಯ್ದಿರಿಸದಿರಲು ಇರುವ ತೊಡಕುಗಳೇನು? (ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ಮೆಟ್ರೋ ರೈಲುಗಳಲ್ಲಿ ಪ್ರಯಾಣಿಕರ ದಟ್ಟಣೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೬೦೧(೧೨೫೦) ಬೆಂಗಳೂರು ಅಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮೆಟ್ರೋ ರೈಲುಗಳಲ್ಲಿ ಬೆಳಿಗ್ಗೆ ಮತ್ತು ಸಾಯಂಕಾಲದ ಅವಧಿಯಲ್ಲಿ ಪ್ರಯಾಣಿಕರ ದಟ್ಟಣೆಯಿಂದಾಗಿ ಮಹಿಳೆಯರು, ಮಕ್ಕಳು, ವೃದ್ಧರು ಮತ್ತು ಅಂಗವಿಕಲರು ಪ್ರಯಾಣಿಸುವುದು ತುಂಬಾ ಕಷ್ಟಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ದಟ್ಟಣೆಯ ಅವಧಿಯಲ್ಲಿ ಟ್ರಿಪ್‌ಗಳ ನಡುವಿನ ಅಂತರವನ್ನು ಮತ್ತಷ್ಟು ಕಡಿಮೆ ಮಾಡಿ, ಪಾಳಿ/ಟ್ರಿಪ್‌ಗಳ ಸಂಖ್ಯೆಯನ್ನು ಹೆಚ್ಚಿಸುವ ಉದ್ದೇಶ ಇದೆಯೇ;

(ಇ) ಪ್ರಯಾಣಿಕರ ಸುಗಮ ಸಂಚಾರಕ್ಕಾಗಿ, ಈಗಿರುವ ಮೂರು ಬೋಗಿಗಳನ್ನು ಆರಕ್ಕೆ ಏರಿಸಿ, ನಂತರ ಮಹಿಳೆಯರಿಗಾಗಿಯೇ ಪ್ರತ್ಯೇಕ ಬೋಗಿಗಳನ್ನು ಮೀಸಲಿಡುವ ಪ್ರಸ್ತಾವ ಇದೆಯೇ; ಇದ್ದಲ್ಲಿ, ಕಾಲಮಿತಿ ಏನು?

## ರಾಜ್ಯದಲ್ಲಿ ಪೊಲೀಸ್ ಇಲಾಖೆಯ ಹುದ್ದೆಗಳನ್ನು ತುಂಬುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೬೦೨(೧೨೪೯) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪೊಲೀಸ್ ಇಲಾಖೆಯಲ್ಲಿ ಶ್ರೇಣಿವಾರು ಮಂಜೂರಾಗಿರುವ (ಪೇದೆಯಿಂದ ವರಿಷ್ಠಾಧಿಕಾರಿಯವರೆಗೆ) ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) ಸದರಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ಸಂಪೂರ್ಣವಾಗಿ ಭರ್ತಿ ಮಾಡಿ ಸಿಬ್ಬಂದಿಗಳ ಮೇಲೆ ಈಗಿರುವ ಒತ್ತಡವನ್ನು ಕಡಿಮೆ ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಕಾಲಮಿತಿ ಏನು;

(ಇ) ಸಿಬ್ಬಂದಿಗಳ ಪದೋನ್ನತಿ ಕುರಿತು ಸರ್ಕಾರ ನೂತನವಾಗಿ ರೂಪಿಸಿರುವ ನಿಯಮಗಳೇನು; ಹಾಗೂ ಸದರಿ ನಿಯಮಗಳ ಪ್ರಕಾರ ಬಡ್ತಿ ಪ್ರಕ್ರಿಯೆ ಮುಗಿದಿದೆಯೇ;

## ಮೊಬೈಲ್ ಸೇವಾ ಕಂಪನಿಗಳು ಟವರ್‌ಗಳನ್ನು ಸ್ಥಾಪಿಸಲು ಅನುಸರಿಸುವ ಮಾರ್ಗಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೦೩(೧೩೧೧) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನೊಂದಾಯಿಸಿಕೊಂಡಿರುವ ಮೊಬೈಲ್ ಸೇವಾ ಕಂಪನಿಗಳೆಷ್ಟು; ಇವುಗಳ ನೋಂದಣಿ ಮಾಡಲು ಇರುವ ಮಾನದಂಡಗಳೇನು; ರಾಜ್ಯ ಸರ್ಕಾರಕ್ಕೆ ಇದರಲ್ಲಿ ಅಧಿಕಾರವಿಲ್ಲದಿದ್ದಲ್ಲಿ ರಾಜ್ಯ ಸರ್ಕಾರದ ಪಾತ್ರವೇನು; (ವಿವರ ನೀಡುವುದು)

(ಆ) ಮೊಬೈಲ್ ಸೇವಾ ಕಂಪನಿಗಳು ರಾಜ್ಯದಲ್ಲಿ ಟವರ್‌ಗಳನ್ನು ನಿರ್ಮಿಸಲು ಇರುವ ಮಾನದಂಡಗಳೇನು; (ವಿವರ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ನಿರ್ಮಿಸಿರುವ ಮೊಬೈಲ್ ಟವರ್‌ಗಳೆಷ್ಟು? (ಸ್ಥಳಗಳ ಹೆಸರಿನೊಂದಿಗೆ ವಿವರ ನೀಡುವುದು)

## ಪೊಲೀಸರಿಗೆ ನೀಡುತ್ತಿರುವ ವಾರದ ರಜೆ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೦೪(೧೩೪೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪೊಲೀಸರಿಗೆ ವಾರದ ರಜೆಯುನ್ನು ಸರಿಯಾಗಿ ನೀಡಲಾಗುತ್ತಿದೆಯೇ;

(ಆ) ವಿಶೇಷ ಬಂದೋಬಸ್ತು ಸಂದರ್ಭದಲ್ಲಿ ಪೊಲೀಸರಿಗೆ ವಾರದ ರಜೆ ನೀಡದಿದ್ದಲ್ಲಿ, ವಾರದ ರಜೆ ಭತ್ಯೆ ನೀಡಲಾಗುತ್ತಿದೆಯೇ;

(ಇ) ಇಲ್ಲವಾದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ರೈತ ಆರೋಗ್ಯ ರಕ್ಷಣಾ ಯೋಜನೆ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೦೫(೧೩೫೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ರೈತ ಆರೋಗ್ಯ ರಕ್ಷಣಾ ಯೋಜನೆಯಡಿಯಲ್ಲಿ ಒಟ್ಟು ನೋಂದಾಯಿತ ಫಲಾನುಭವಿಗಳ ಸಂಖ್ಯೆ ಎಷ್ಟು; ಹಾಗೂ ಇವರಿಂದ ಸಂಗ್ರಹಿತ ಸದಸ್ಯತ್ವ ಶುಲ್ಕದ ಒಟ್ಟು ಮೊತ್ತವೆಷ್ಟು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಯಡಿ ೨೦೧೫–೧೬ನೇ ಸಾಲಿನಲ್ಲಿ ಸೌಲಭ್ಯ ಕೋರಿ, ಈ

ಮೂರು ಜಿಲ್ಲೆಗಳಲ್ಲಿ ಬಂದ ಅರ್ಜಿಗಳೆಷ್ಟು; ಸೌಲಭ್ಯ ಪಡೆದ ಫಲಾನುಭವಿಗಳು ಎಷ್ಟು; ಬಿಡುಗಡೆಯಾದ ಒಟ್ಟು ಮೊತ್ತವೆಷ್ಟು; ಪಾವತಿಸಲು ಬಾಕಿಯಿರುವ ಒಟ್ಟು ಮೊತ್ತವೆಷ್ಟು; (ಜಿಲ್ಲಾವಾರು, ಫಲಾನುಭವಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಮೂರು ಜಿಲ್ಲೆಗಳಲ್ಲಿ ಸೌಲಭ್ಯ ಕೋರಿದ ಫಲಾನುಭವಿಗಳಿಗೆ ಸಂಬಂಧಿತ ಆಸ್ಪತ್ರೆಗಳಿಂದ ಕಿರುಕುಳ ನೀಡಿದ, ನೆರವು ನೀಡದ ಕುರಿತು ದಾಖಲಾದ ದೂರುಗಳೆಷ್ಟು; ಈ ಕುರಿತು ಕೈಗೊಂಡ ಕ್ರಮಗಳೇನು? (ಜಿಲ್ಲಾವಾರು, ದೂರುವಾರು ವಿವರ ನೀಡುವುದು)

## ಸಿಯಾಚಿನ್ ಯುದ್ಧ ಭೂಮಿಯಲ್ಲಿ ಮೃತಪಟ್ಟ ಯೋಧರ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೦೬(೧೩೦೮) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಿಯಾಚಿನ್ ದುರಂತದಲ್ಲಿ ಹವಾಮಾನ ವೈಪರೀತ್ಯದಿಂದ ಸಾವನ್ನಪ್ಪಿದ ಲ್ಯಾನ್ಸ್ ನಾಯಕ ದಿ: ಹನುಮಂತಪ್ಪ ಕೊಪ್ಪದವರ ಕುಟುಂಬಕ್ಕೆ ರಾಜ್ಯ ಸರ್ಕಾರ ಈವರೆಗೆ ನೀಡಿರುವ ನೆರವು/ಸೌಲಭ್ಯಗಳು ಯಾವುವು; (ಸಂಪೂರ್ಣ ವಿವರ ನೀಡುವುದು)

(ಆ) ಕುಟುಂಬದ ನಿರ್ವಹಣೆಗೆ ಇವರ ಪತ್ನಿಯವರಿಗೆ ಸರ್ಕಾರಿ ಕೆಲಸ ನೀಡುವ ಪ್ರಸ್ತಾವವು ಸರ್ಕಾರದ ಮುಂದೆ ಇದೆಯೇ;

(ಇ) ಇದ್ದಲ್ಲಿ, ಯಾವ ಹುದ್ದೆಯನ್ನು ಯಾವ ಕಾಲಮಿತಿಯೊಳಗೆ ನೀಡಲು ಸರ್ಕಾರ ಯೋಚಿಸಿದೆ? (ವಿವರ ನೀಡುವುದು)

## ಅಬಕಾರಿ ಮೂಲಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೦೭(೧೩೪೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಲ್ಲಿ ಅಬಕಾರಿ ಮೂಲದಿಂದ ಸರ್ಕಾರಕ್ಕೆ ಪಾವತಿಯಾಗಿರುವ ಹಣ ಎಷ್ಟು; ಬಾಕಿ ಇರುವ ಮೊತ್ತ ಎಷ್ಟು; (ವರ್ಷವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಬರಬೇಕಾದ ಬಾಕಿ ಮೊತ್ತವನ್ನು ವಸೂಲು ಮಾಡಲು ಕೈಗೊಂಡಿರುವ ಕ್ರಮವೇನು; ಇದಕ್ಕೆ ಕಾಲಮಿತಿಯೇನು; (ವಿವರ ನೀಡುವುದು)

(ಇ) ಸದರಿ ಗುತ್ತಿಗೆದಾರರಿಂದ ಕಳೆದ ಮೂರು ವರ್ಷಗಳಿಂದ ಸರ್ಕಾರಕ್ಕೆ ಬಂದಿರುವ ಹಣವೆಷ್ಟು; ಬಾಕಿ ಬರಬೇಕಾಗಿರುವ ಹಣವೆಷ್ಟು; (ಗುತ್ತಿಗೆದಾರರ ಹೆಸರು, ಬಾಕಿ ಮೊತ್ತ ಹಾಗೂ ತಾಲ್ಲೂಕುವಾರು ವಿವರ ನೀಡುವುದು)

## ವ್ಯವಸಾಯ ಸಹಕಾರ ಸಂಘಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೦೮(೧೩೪೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ವ್ಯವಸಾಯ ಸಹಕಾರ ಸಂಘಗಳೆಷ್ಟು; ಈ ಸಹಕಾರ ಸಂಘಗಳಿಂದ ರೈತರಿಗೆ ಯಾವ ಯಾವ ಸಾಲ ಸೌಲಭ್ಯ ನೀಡಲಾಗುತ್ತಿದೆ; ಇವುಗಳಲ್ಲಿ ಸಾಲಕ್ಕಾಗಿ ಬಂದ ಅರ್ಜಿಗಳೆಷ್ಟು; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಮೂರು ಜಿಲ್ಲೆಗಳಲ್ಲಿ ಪ್ರತಿ ಸಹಕಾರ ಸಂಘಗಳಿಂದ ರೈತರಿಗೆ ನೀಡಿರುವ ಸಾಲದ ಮೊತ್ತ ಎಷ್ಟು; ಸಾಲಕ್ಕಾಗಿ ಬಂದ ಅರ್ಜಿಗಳೆಷ್ಟು; ಮಂಜೂರಾಗದ ಅರ್ಜಿಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಮೂರು ಜಿಲ್ಲೆಗಳಲ್ಲಿ ಈ ಹಿಂದೆ ಸಾಲ ಪಡೆದು ಬೆಳೆ ಹಾನಿಯಾದ ರೈತರಿಗೆ ಸಾಲ ಮನ್ನಾ ಮಾಡಲಾಗಿದೆಯೇ; (ವಿವರ ನೀಡುವುದು)

(ಈ) ಹಾಲಿ ನೀಡುತ್ತಿರುವ ಸಾಲದ ಮೊತ್ತವೇನು; ಈ ಮೊತ್ತವನ್ನು ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ? (ಸಂಪೂರ್ಣ ವಿವರ ನೀಡುವುದು)

## ಮೈಸೂರು ನಗರದಲ್ಲಿ ಹೆಚ್ಚುವರಿ ತ್ಯಾಜ್ಯ ನಿರ್ವಹಣಾ ಘಟಕ ಸ್ಥಾಪನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೦೯(೧೩೯೫) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ನಗರದ ಸ್ಯೂಯೇಜ್ ಫಾರಂ ಬಳಿ ಇರುವ ತ್ಯಾಜ್ಯ ನಿರ್ವಹಣಾ ಘಟಕವು ಮಿತಿಮೀರಿದ ತ್ಯಾಜ್ಯದಿಂದ ತುಂಬಿದ್ದು, ದುರ್ವಾಸನೆ, ಸೊಳ್ಳೆ, ಕೀಟಗಳ ಕಾಟ ಉಂಟಾಗಿರುವುದು ಗಮನಕ್ಕೆ ಬಂದಿದೆಯೇ; ಇದರ ನಿವಾರಣೆಗೆ ಕೈಗೊಂಡಿರುವ ಕ್ರಮಗಳೇನು;

(ಆ) ಮೈಸೂರಿನಲ್ಲಿ ಹೊಸದಾಗಿ ಕೆಸರೆ ಮತ್ತು ರಾಯನಕೆರೆಯಲ್ಲಿ ಆಧುನಿಕ ಮಾದರಿಯ ತ್ಯಾಜ್ಯ ನಿರ್ವಹಣಾ ಘಟಕಗಳನ್ನು ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗಿದೆಯೇ; (ವಿವರಗಳನ್ನು ಒದಗಿಸುವುದು)

(ಇ) ತ್ಯಾಜ್ಯ ನಿರ್ವಹಣಾ ಘಟಕಗಳಲ್ಲಿ ಸಂಗ್ರಹವಾಗುವ ತ್ಯಾಜ್ಯ ನಿರ್ವಹಣೆಗೆ ಕೈಗೊಂಡಿರುವ ಕ್ರಮಗಳು ಯಾವುವು; ಕಂಪೋಸ್ಟ್ ಗೊಬ್ಬರ ತಯಾರಿಕೆ, ಕಸದಿಂದ ವಿದ್ಯುತ್ ಉತ್ಪಾದನೆ, ಮುಂತಾದ ನಿರ್ವಹಣೆಯ ವಿಧಾನಗಳನ್ನು ಅನುಸರಿಸಲಾಗುತ್ತಿದೆಯೇ? (ವಿವರ ನೀಡುವುದು)

## ಮೈಸೂರು ಮಾಲ್‌ನಿಂದ ತೆರಿಗೆ ವಂಚನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೧೦(೧೩೯೬) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮಾಲ್ ವಾಣಿಜ್ಯ ಸಂಕೀರ್ಣದಿಂದ ಮೈಸೂರು ಮಹಾನಗರ ಪಾಲಿಕೆಗೆ ತೆರಿಗೆ ವಂಚನೆ ಆಗಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ; ವಂಚನೆಯಾಗಿರುವ ತೆರಿಗೆಯ ಪ್ರಮಾಣ ಎಷ್ಟು; ಯಾವ ಯಾವ ತೆರಿಗೆಯನ್ನು ವಂಚಿಸಲಾಗಿದೆ;

(ಆ) ಮೈಸೂರು ಮಾಲ್‌ನವರು ಒಂದೇ ಒಂದು ಸಿನಿಮಾ ಥಿಯೇಟರ್‌ಗೆ ಅನುಮತಿ ಪಡೆದು ಅದಕ್ಕಿಂತ ಹೆಚ್ಚು ಸಿನಿಮಾ ಮಂದಿರಗಳನ್ನು ನಡೆಸಿಕೊಂಡು ಹೋಗುತ್ತಿರುವುದು ಗಮನಕ್ಕೆ ಬಂದಿದೆಯೇ; ಇದರಿಂದ ಆಗಿರುವ ತೆರಿಗೆ ವಂಚನೆ ಎಷ್ಟು; (ವಿವರ ಒದಗಿಸುವುದು)

(ಇ) ಮಲ್ಟಿಲೆವೆಲ್ ಪಾರ್ಕಿಂಗ್ ನಿರ್ಮಿಸುವುದಾಗಿ ಲೈಸೆನ್ಸ್ ಪಡೆದು, ಪಾರ್ಕಿಂಗ್ ನಿರ್ಮಿಸದೇ ಇರುವುದು, ಮಾಲ್‌ಗೆ ಬಂದ ವಾಹನಗಳನ್ನು ಸಾರ್ವಜನಿಕ ಸ್ಥಳದಲ್ಲಿ ಮತ್ತು ರಸ್ತೆಯಲ್ಲಿ ಪಾರ್ಕಿಂಗ್ ಮಾಡಿಸುತ್ತಿರುವುದು ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಕ್ರಮ ಜರುಗಿಸಲಾಗುವುದೇ?

## ರಾಜ್ಯದ ಕಾರಾಗೃಹಗಳಲ್ಲಿರುವ ಸಿಬ್ಬಂದಿಗಳ ಕೊರತೆ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೧೧(೧೨೭೪) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಜಿಲ್ಲಾ ಕಾರಾಗೃಹಗಳಲ್ಲಿ ಮಂಜೂರಾದ, ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿಯಿರುವ ಅಧಿಕಾರಿ ಮತ್ತು ಸಿಬ್ಬಂದಿಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು;

(ಆ) ಕೊಡಗು ಜಿಲ್ಲೆಯ ಕಾರಾಗೃಹದಲ್ಲಿರುವ ಖೈದಿಗಳ ಸಂಖ್ಯೆ ಎಷ್ಟು; ಇವರುಗಳಿಗೆ ಯಾವ ಯಾವ ಮೂಲಭೂತ ಸೌಕರ್ಯಗಳನ್ನು ನೀಡಲಾಗಿದೆ;

(ಇ) ಇವರುಗಳ ಮನಃಪರಿವರ್ತನೆಗಾಗಿ ಹಮ್ಮಿಕೊಂಡಿರುವ ಯೋಜನೆಗಳು/ ಕಾರ್ಯಕ್ರಮಗಳು ಯಾವುವು?

# ರಾಜ್ಯದಲ್ಲಿರುವ ಮತ್ತು ತುಮಕೂರಿನಲ್ಲಿರುವ ಪೊಲೀಸ್ ಸಿಬ್ಬಂದಿಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೧೨(೧೨೬೮) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖಾಲಿ ಇರುವ ಪೊಲೀಸ್ ಪೇದೆಗಳ ಸಂಖ್ಯೆ ಎಷ್ಟು; (ಎಲ್ಲಾ ವಿಭಾಗಗಳು ಸೇರಿ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇಷ್ಟೊಂದು ಪ್ರಮಾಣದಲ್ಲಿ ಹುದ್ದೆಗಳು ಖಾಲಿ ಇರುವುದರಿಂದ ಕಾನೂನು ಮತ್ತು ಸುವ್ಯವಸ್ಥೆ (ಎಲ್ ಅಂಡ್ ಓ) ಸಿಬ್ಬಂದಿಗಳ ಕೊರತೆಯಿಂದ ದಿನೇ ದಿನೇ ಹದಗೆಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ರಾಜ್ಯ ಮಟ್ಟದ/ವಲಯ ಮಟ್ಟದ/ವಿಭಾಗ ಮಟ್ಟದ/ಜಿಲ್ಲಾ ಮಟ್ಟದ/ ತಾಲ್ಲೂಕು ಮಟ್ಟದಲ್ಲಿ ಅಧಿಕಾರಿಗಳ ಸಂಖ್ಯೆಯನ್ನು ಹೆಚ್ಚು ಮಾಡಲಾಗುತ್ತಿದೆಯೇ ಹೊರತು ಕೆಳಮಟ್ಟದ ಹುದ್ದೆಗಳನ್ನು ತುಂಬದೆ ಇರುವುದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ; (ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿ ಎಲ್ಲಾ ವಿಭಾಗಗಳು ಸೇರಿದಂತೆ ಖಾಲಿ ಇರುವ ಪೊಲೀಸ್ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) ಈ ಹುದ್ದೆಗಳನ್ನು ತುಂಬಲು ಸರ್ಕಾರ ಪ್ರತ್ಯೇಕವಾಗಿ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಉ) ತುಮಕೂರು ಜಿಲ್ಲೆಯಾದ್ಯಂತ ಪ್ರತಿ ಆರಕ್ಷಕ ಠಾಣೆಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ

ಎಷ್ಟು; (ಎಲ್ಲಾ ವಿಭಾಗಗಳು ಸೇರಿದಂತೆ ಸಂಪೂರ್ಣ ಮಾಹಿತಿ ನೀಡುವುದು)

(ಊ) ಇಷ್ಟೊಂದು ಹುದ್ದೆಗಳು ಖಾಲಿ ಇರುವುದರಿಂದ ತುಮಕೂರು ನಗರ ಹಾಗೂ ಗ್ರಾಮೀಣ ಭಾಗದಲ್ಲಿ ದಿನೇ ದಿನೇ ಅಪರಾಧಗಳ ಸಂಖ್ಯೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ರಾಜ್ಯದಲ್ಲಿ ಅಟಲ್ ನಗರ ಪರಿವರ್ತನಾ ಅಭಿಯಾನ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೧೩(೧೨೭೧) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹತ್ವಾಕಾಂಕ್ಷೆಯ ಕೇಂದ್ರ ಸರ್ಕಾರದ ಅಮೃತ (ಅಟಲ್ ನಗರ ಪರಿವರ್ತನಾ ಪುನರುಜ್ಜೀವನ ಅಭಿಯಾನ) ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗಿದೆಯೇ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ರಾಜ್ಯದ ಯಾವ ಯಾವ ನಗರಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿದೆ; ಹಾಗೂ ಇದಕ್ಕಾಗಿ ಬಿಡುಗಡೆ ಮಾಡಿರುವ ಅನುದಾನವೆಷ್ಟು;

(ಇ) ತುಮಕೂರು ನಗರ ಸೇರಿದಂತೆ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ನಗರಸಭೆ, ಪುರಸಭೆಗಳನ್ನು ಈ ಯೋಜನಾ ವ್ಯಾಪ್ತಿಗೆ ಸೇರಿಸಲಾಗಿದೆ; (ವಿವರ ನೀಡುವುದು) ಒದಗಿಸಿರುವ ಅನುದಾನ ಎಷ್ಟು; ಕೈಗೊಂಡಿರುವ ಕಾಮಗಾರಿಗಳು ಯಾವುವು; (ವಿವರ ನೀಡುವುದು)

(ಈ) ತುಮಕೂರು ನಗರದಲ್ಲಿ ಈ ಯೋಜನೆಗೆ ಎಷ್ಟು ಅನುದಾನವನ್ನು ಒದಗಿಸಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಉ) ಕೈಗೊಂಡ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ; ಮತ್ತು ತುಮಕೂರು ನಗರದಲ್ಲಿ ಈ ಕಾಮಗಾರಿಯನ್ನು ಯಾರಿಗೆ ವಹಿಸಿಕೊಡಲಾಗಿತ್ತು? (ವಿವರ ನೀಡುವುದು)

**ಶ್ರೀನಿವಾಸ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು, ಕಾಸೂ 1121 – 900 ಪ್ರತಿಗಳು